22 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ


# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 22 | ಸಂಚಿಕೆ 284 | ನವದೆಹಲಿ | ಬೆಲೆ ₹ 10 | ಏಪ್ರಿಲ್ 20 2025, ಭಾನುವಾರ



## ನಿತ್ಯ ಪಂಚಾಂಗ 20.04.2025 ಬಾನುವಾರ



ಶ್ರೀ ವಿಶ್ವಾವಸು ನಾಮ ಸಂವತ್ಸರ, ಉತ್ತರಾಯಣ ವಸಂತ ಋತು ಚಾಂದ್ರಮಾನ, ಚೈತ್ರ ಬಹುಳ

ಸಪ್ತಮಿ, ಪೂರ್ವಾಷಾಢ ನಕ್ಷತ್ರ, ಅನಧ್ಯಯನ, ದ್ವಯ, ಕೋಡ್ಯಡ್ಕ ರಥ, ಬಪ್ಪನಾಡು ಶ್ರೀದುರ್ಗಾಪರಮೇಶ್ವರಿ ರಥ, ಬಸವ ಕಲ್ಯಾಣ ಕಲ್ಯಾಣ ಪರ್ವ

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| | ರಾಹುಕಾಲ | ಯಮಗಂಡ | ಗುಳಿಕಕಾಲ |
| ಭಾನು | 4.30 – 6.00 | 12.00 – 1.30 | 3.00 – 4.30 |
| ಸೋಮ | 7.30 – 9.00 | 10.30 – 12.00 | 1.30 – 3.00 |
| ಮಂಗಳ | 3.00 – 4.30 | 9.00 – 10.30 | 12.00 – 1.30 |
| ಬುಧ | 12.00 – 1.30 | 7.30 – 9.00 | 10.30 – 12.00 |
| ಗುರು | 1.30 – 3.00 | 6.00 – 7.30 | 9.00 – 10.30 |
| ಶುಕ್ರ | 10.30 – 12.00 | 3.00 – 4.30 | 7.30 – 9.00 |
| ಶನಿ | 9.00 – 10.30 | 1.30 – 3.00 | 6.00 – 7.30 |

# ಬೆಂಗಳೂರು–ಮೈಸೂರು ಕಾರಿಡಾರ್: ಪರಂ ನೇತೃತ್ವದಲ್ಲಿ ಉಪಸಮಿತಿ

**ಬೆಂಗಳೂರು, ಏ, 19:** ಬಹು ನಿರೀಕ್ಷಿತ ಬೆಂಗಳೂರು–ಮೈಸೂರು ಮೂಲಸೌಕರ್ಯ ಕಾರಿಡಾರ್ ಯೋಜನೆಯ ಅನುಷ್ಠಾನ ಕುರಿತು ಇದುವರೆಗೂ ಆಗಿರುವ ಪ್ರಗತಿ ಹಾಗೂ ಮುಂದೆ ಕೈಗೊಳ್ಳಬೇಕಾಗಿರುವ ಕ್ರಮಗಳ ಕುರಿತು ಪರಾಮರ್ಶಿಸಿ ಸೂಕ್ತ ಶಿಫಾರಸ್ಸು ಮಾಡಲು ರಾಜ್ಯ ಸರ್ಕಾರ ಗೃಹ ಸಚಿವ ಡಾ.ಜಿ.ಪರಮೇಶ್ವರ್ ನೇತೃತ್ವದಲ್ಲಿ ಸಚಿವ ಸಂಪುಟದ ಉಪ ಸಮಿತಿ ರಚಿಸಿದೆ.

ಈ ಮೂಲಕ ಬೆಂಗಳೂರು ಮೈಸೂರು ಕಾರಿಡಾರ್ ಯೋಜನೆಗೆ ಎಳ್ಳು ನೀರು ಬಿಡಲು ಸರ್ಕಾರ ಕಾರ್ಯತಂತ್ರ ರೂಪಿಸಿದೆ. ನೈಸ್ ಸಂಸ್ಥೆಯ ಮುಖ್ಯಸ್ಥ ಅಶೋಕ್ ಖೇಣಿ ನೇತೃತ್ವದ ಯೋಜನೆ ಮೇಲೆ ಗದಾ ಪ್ರಹಾರ ನಡೆಸಲು ಸರ್ಕಾರ ಕಾರ್ಯೋನ್ಮುಖವಾಗಿದೆ. ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ಈಗಾಗಲೇ ಬೆಂಗಳೂರು–ಮೈಸೂರು ನಡುವೆ ಎಕ್ಸ್ ಹೆದ್ದಾರಿ ನಿರ್ಮಿಸಿದ್ದು, ಇಂತಹ ಪರಿಸ್ಥಿತಿಯಲ್ಲಿ ನೈಸ್ ಸಂಸ್ಥೆಯಿಂದ ನಿರ್ಮಿಸಲು ಉದ್ದೇಶಿಸಿರುವ ಹೆದ್ದಾರಿಯನ್ನು ಕೈಬಿಡಲು ಉದ್ದೇಶಿಸಿದೆ. ಈಗಿನ ಪರಿಸ್ಥಿತಿಯಲ್ಲಿ ನೈಸ್ ಯೋಜನೆ ಅಪ್ರಸ್ತುವಾಗಿದೆ ಎನ್ನುವ ಅಭಿಪ್ರಾಯವನ್ನು ಸರ್ಕಾರ ಹೊಂದಿದೆ. ಮೈಸೂರು ಒಡೆಯರ್ ಕುಟುಂಬಕ್ಕೆ ಬೆಂಗಳೂರು ಅರಮನೆ ಆಸ್ತಿಯನ್ನು ವಶಕ್ಕೆ ಪಡೆಯಲು ಮುಂದಾಗಿರುವ ಸರ್ಕಾರ ಇದೀಗ ನೈಸ್ ಯೋಜನೆಯನ್ನು ಸರ್ಕಾರದ ವಶಕ್ಕೆ ಪಡೆಯಲು ಉದ್ದೇಶಿಸಿದೆ. ಇಂತಹ ಮಹತ್ವದ ನಿರ್ಧಾರ ಕೈಗೊಳ್ಳಲು ಡಾ. ಪರಮೇಶ್ವರ್ ಸಮಿತಿಯಲ್ಲಿ ಸಚಿವರಾದ ಎಚ್.ಕೆ. ಪಾಟೀಲ್, ಕೆ.ಎಚ್. ಮುನಿಯಪ್ಪ, ಎಂ.ಬಿ. ಪಾಟೀಲ್, ಡಾ.ಎಚ್.ಸಿ. ಮಹದೇವಪ್ಪ, ಸತೀಶ್ ಜಾರಕಿಹೊಳಿ ಮತ್ತು ಕೃಷ್ಣ ಭೈರೇಗೌಡ ಸದಸ್ಯರಾಗಿದ್ದಾರೆ.

ಈ ಸಂಪುಟ ಉಪ ಸಮಿತಿಗೆ ಕಾನೂನು ತಜ್ಞರು, ವಿಷಯ ಪರಿಣಿತರೊಂದಿಗೆ ಚರ್ಚಿಸಿ ಕಾನೂನಾತ್ಮಕವಾಗಿ ತೆಗೆದುಕೊಳ್ಳಬೇಕಾದ ಕ್ರಮಗಳ ಬಗ್ಗೆ 2 ತಿಂಗಳಲ್ಲಿ ಸಮಗ್ರ ವರದಿ ಸಲ್ಲಿಸುವಂತೆ ಸೂಚಿಸಲಾಗಿದೆ. ಲೋಕೋಪಯೋಗಿ



ಇಲಾಖೆಯು ಸಂಪುಟ ಉಪ ಸಮಿತಿಗೆ ಅಗತ್ಯ ನೆರವು ನೀಡಬೇಕು ಎಂದು ಸೂಚಿಸಿದ್ದು, ಸಮಿತಿಯ ನಿಬಂಧನೆಗಳ ಕುರಿತು ಪ್ರತ್ಯೇಕ ಆದೇಶ ಹೊರಡಿಸಲು ತೀರ್ಮಾನಿಸಲಾಗಿದೆ. ಬಿಎಂಐಸಿ ಯೋಜನೆ ಮೊದಲಿನಿಂದಲೂ ಬಾಲಗ್ರಹ ಪೀಡಿತವಾಗಿದ್ದು, ಈ ವರೆಗೆ ಯೋಜನೆಗೆ ಮೋಕ್ಷ ಸಿಕ್ಕಿಲ್ಲ. ಯೋಜನೆ ಜಾರಿಗೆ ಒಂದಲ್ಲಾ ಒಂದು ಅಡ್ಡಿ ಆತಂಕಗಳು ಎದುರಾಗುತ್ತಲೇ ಇವೆ. ಒಂದು ಹಂತದಲ್ಲಿ ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡರ ಕುಟುಂಬ ಮತ್ತು ನೈಸ್ ಸಂಸ್ಥೆ ನಡುವೆ ಭಾರೀ ಜಿದ್ದಾಜಿದ್ದಿ ನಡೆದಿತ್ತು. ಏಟಿಗೆ ಎದಿರೇಟು ಎನ್ನುವಂತೆ ಆರೋಪ ? ಪ್ರತ್ಯಾರೋಪಗಳಲ್ಲೇ ಕಳೆದಿದ್ದು ಇತಿಹಾಸ. ಆದರೆ ಅಶೋಕ್ ಖೇಣಿ ವಿರುದ್ಧ ಯಾವುದೇ ಕ್ರಮ ಕೈಗೊಳ್ಳಲು ಈವರೆಗೆ ಸಾಧ್ಯವಾಗಿರಲಿಲ್ಲ. ಮಾಜಿ ಮುಖ್ಯಮಂತ್ರಿ ಧರ್ಮಸಿಂಗ್ ಲೋಕೋಪಯೋಗಿ ಸಚಿವರಾಗಿದ್ದ ಎರಡೂವರೆ ದಶಕಗಳ ಹಿಂದೆ ಈ ಯೋಜನೆ ಸ್ಪಷ್ಟ ಸ್ವರೂಪ ಪಡೆದುಕೊಂಡಿತ್ತು. ಯೋಜನೆ ಜಾರಿಗೆ ಅಗತ್ಯವಾಗಿರುವ ಭೂಮಿ ಮತ್ತಿತರ ಸೌಕರ್ಯಗಳನ್ನು ಸರ್ಕಾರ ಮಾಡಿಕೊಟ್ಟಿತ್ತು. ಅತ್ಯಂತ ಕಡಿಮೆ ದರದಲ್ಲಿ ಭೂಮಿ ಪಡೆದುಕೊಂಡಿದ್ದ ನೈಸ್ ಸಂಸ್ಥೆ ಬೆಂಗಳೂರು ನಗರದಲ್ಲಿ ರಸ್ತೆ ನಿರ್ಮಿಸಿ ಟೋಲ್ ಸಂಗ್ರಹದಲ್ಲಿ ನಿರತವಾಗಿದೆ.

1995 ರಲ್ಲಿ ರಾಜ್ಯ ಸರ್ಕಾರದ ತಾಂತ್ರಿಕ ಸಮಿತಿ ಸಲ್ಲಿಸಿದ್ದ ವರದಿಯಲ್ಲಿ 41 ಕಿಲೋಮೀಟರ್ ಪೆರಿಫೆರಲ್ ರಸ್ತೆ, 9.8 ಕಿಲೋಮೀಟರ್ ಉದ್ದದ ಲಿಂಕ್ ರಸ್ತೆ, 111 ಕಿಲೋಮೀಟರ್ ಉದ್ದದ ಎಕ್ಸ್ ಪ್ರೆಸ್ ಹೆದ್ದಾರಿ ಮತ್ತು 7 ಉಪನಗರಗಳನ್ನು ನಿರ್ಮಿಸುವ ಪ್ರಸ್ತಾಪವಿತ್ತು. ನಂತರ ಉಪನಗರಗಳ ಸಂಖ್ಯೆಯನ್ನು 5ಕ್ಕೆ ಇಳಿಸಲಾಗಿತ್ತು. 30 ವರ್ಷಗಳ ಅವಧಿ ಮುಗಿದ ನಂತರ ನಿರ್ಮಾಣ, ಕಾರ್ಯಾಚರಣೆ, ನಿರ್ವಹಣೆ ಮತ್ತು ಹಸ್ತಾಂತರ – ಬೂಟ್ ಆಧಾರದ ಮೇಲೆ ಎಲ್ಲಾ ರಸ್ತೆ ಸೌಲಭ್ಯಗಳನ್ನು ಸರ್ಕಾರದ ವಶಕ್ಕೆ ಒಪ್ಪಿಸಬೇಕು ಎಂದು ಒಪ್ಪಂದ ಮಾಡಿಕೊಳ್ಳಲಾಗಿತ್ತು. ಇದೀಗ ನೈಸ್ ಸಂಸ್ಥೆ ಪೆರಿಫೆರಲ್ ರಸ್ತೆಯನ್ನು ಸರ್ಕಾರದ ಸುಪರ್ದಿಗೆ ಒಪ್ಪಿಸಬೇಕಾಗಿದೆ. ಒಪ್ಪಂದದಂತೆ ನೈಸ್ ಸಂಸ್ಥೆಗೆ ಖಾಸಗಿ, ಸರ್ಕಾರಿ ಸೇರಿ 20,193 ಎಕರೆ ಭೂಮಿ ಒದಗಿಸಬೇಕಾಗಿತ್ತು. ನೈಸ್ ಸಂಸ್ಥೆ 2,191 ಎಕರೆ ಖಾಸಗಿ ಜಮೀನು, 3 ಸಾವಿರ ಎಕರೆ ಖಾಸಗಿ ಜಮೀನನ್ನು ಹಸ್ತಾಂತರ ಮಾಡಲಾಗಿತ್ತು. 2 ಎಕರೆ ಖಾಸಗಿ ಜಮೀನು ಸೇರಿ 1699 ಎಕರೆ ಖಾಸಗಿ ಜಮೀನನ್ನು ಕೆಐಎಡಿಬಿ ಸಂಸ್ಥೆ ನೈಸ್ ಸಂಸ್ಥೆಗೆ ಶುದ್ಧ ಕ್ರಯ ಪತ್ರ ಮಾಡಿಕೊಟ್ಟಿದೆ.

## ಬಿಜೆಪಿಗೆ ಮಾಜಿ ಶಾಸಕ ಎ.ಟಿ.ರಾಮಸ್ವಾಮಿ ರಾಜೀನಾಮೆ



**ಬೆಂಗಳೂರು,ಏ.19:** ಮಾಜಿ ಶಾಸಕ ಎಟಿ ರಾಮಸ್ವಾಮಿ ಅವರು ಬಿಜೆಪಿಗೆ ರಾಜೀನಾಮೆ ನೀಡಿದ್ದಾರೆ. ಈ ಮೂಲಕ ಬಿಜೆಪಿ ಪಕ್ಷದಿಂದ ಹೊರನಡೆದು, ಗುಡ್ ಬೈ ಹೇಳಿದ್ದಾರೆ.ತಮ್ಮ ರಾಜೀನಾಮೆ ಪತ್ರವನ್ನು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ ವಿಜಯೇಂದ್ರಗೆ ಸಲ್ಲಿಸಿರುವುದಾಗಿ ತಿಳಿಸಿದ್ದಾರೆ.

ತಾನು ಬಿಜೆಪಿ ಪ್ರಾಥಮಿಕ ಸದಸ್ಯತ್ವಕ್ಕೆ ರಾಜೀನಾಮೆ ನೀಡುತ್ತಿದ್ದೇನೆ. ರಾಜಕೀಯದಿಂದ ದೂರ ತೆರಳಿ ಪರಿಸರ ಚಟುವಟಿಕೆ ಯಲ್ಲಿ ಭಾಗಿಯಾಗುವುದಾಗಿ ರಾಜೀನಾಮೆ ಪತ್ರದಲ್ಲಿ ಉಲ್ಲೇಖಿಸಿದ್ದಾರೆ.

ಕಳೆದ ವಿಧಾನಸಭಾ ಚುನಾವಣೆ ವೇಳೆಯಲ್ಲಿ ಜೆಡಿಎಸ್ ಪಕ್ಷವನ್ನು ತೊರೆದು ಬಿಜೆಪಿಯನ್ನು ರಾಮಸ್ವಾಮಿ ಸೇರ್ಪಡೆಯಾಗಿದ್ದರು. ಬಿಜೆಪಿ–ಜೆಡಿಎಸ್ ಮೈತ್ರಿಯ ನಂತ್ರ ಬಿಜೆಪಿಯ ಎಲ್ಲಾ ಚಟುವಟಿಕೆಯಿಂದ ದೂರವೇ ಉಳಿದಿದ್ದರು.ಇದೀಗ ಮಾಜಿ ಶಾಸಕ ಎ.ಟಿ ರಾಮಸ್ವಾಮಿ ಅವರು ತಾನು ಪರಿಸರ ಚಟುವಟಿಕೆಯಲ್ಲಿ ತೊಡಗಿಕೊಳ್ಳುವ ನಿಟ್ಟನಲ್ಲಿ ಸಕ್ರಿಯವಾಗುತ್ತಿದ್ದೇನೆ. ಹೀಗಾಗಿ ಬಿಜೆಪಿಗೆ ರಾಜೀನಾಮೆ ಸಲ್ಲಿಸಿಸಿದ್ದೇನೆ ಅಂತ ತಿಳಿಸಿದ್ದಾರೆ.

## ಯತ್ನಾಳ್–ಡಿಕೆಶಿ ಭೇಟಿ: ಅಚ್ಚರಿಯ ಬೆಳವಣಿಗೆ



**ಬೆಂಗಳೂರು,ಏ.19:** ರಾಜ್ಯ ರಾಜಕಾರಣದಲ್ಲಿ ಅಚ್ಚರಿಯ ಬೆಳವಣಿಗೆ ನಡೆದಿದೆ. ಬಿಜೆಪಿ ಉಚ್ಚಾಟಿತ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಅವರ ಬಂಡಾಯ ಬಣದಲ್ಲಿ ಗುರುತಿಸಿಕೊಂಡಿದ್ದ ಇಬ್ಬರು ಬಿಜೆಪಿ ನಾಯಕರು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರನ್ನು ಭೇಟಿಯಾಗಿದ್ದಾರೆ.

ಇದು ರಾಜಕೀಯ ವಲಯದಲ್ಲಿ ದೊಡ್ಡ ಚರ್ಚೆಗೆ ಕಾರಣವಾಗಿದೆ.ಯತ್ನಾಳ್ ಅವರೊಂದಿಗೆ ಸೇರಿಕೊಂಡು ಬಿಜೆಪಿ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ ವಿರುದ್ಧ ಈ ನಾಯಕರು ಕೂಡ ತೊಡೆ ತಟ್ಟಿದ್ದರು. ಆದರೆ ಯತ್ನಾಳ್ ಅವರ ಉಚ್ಚಾಟನೆ ಬಳಿಕ ಕೆಲವರು ಕಾಂಗ್ರೆಸ್ ಸೇರಲಿದ್ದಾರೆ ಎಂದು ಮಾತು ಕೂಡ ಕೇಳಿಬಂದಿತ್ತು. ಇದಕ್ಕೆ ಪುಷ್ಟಿ ನೀಡುವಂತೆ ಆ ಬಣದಲ್ಲಿದ್ದ ಒಬ್ಬರು ಪ್ರಮುಖ ನಾಯಕರು ಡಿ.ಕೆ.ಶಿವಕುಮಾರ್ ಅವರನ್ನು ಭೇಟಿಯಾಗಿರುವುದು ಸಂಚಲನ ಸೃಷ್ಟಿಸಿದೆ.ಬಿಜೆಪಿ ಮುಖಂಡರಾದ ಜಿ.ಎಂ.ಸಿದ್ದೇಶ್ವರ್ ಹಾಗೂ ಬಿಜೆಪಿ ಶಾಸಕ ಬಿ.ಪಿ.ಹರೀಶ್ ಅವರು ಡಿಸಿಎಂ ಗೃಹಕಚೇರಿಯಲ್ಲಿ ಡಿಕೆ ಶಿವಕುಮಾರ್ ಅವರನ್ನು ಭೇಟಿಯಾಗಿದ್ದಾರೆ.

ಮೇಲ್ನೋಟಕ್ಕೆ ಇದೊಂದು ಸೌಜನ್ಯದ ಭೇಟಿ ಎಂದು ಎನಿಸಿದರೂ ಬಿಜೆಪಿ ನಾಯಕರು ಅದರಲ್ಲೂ ಯತ್ನಾಳ್ ಬಣದಲ್ಲೇ ಗುರುತಿಸಿಕೊಂಡಿರುವ ಈ ಇಬ್ಬರೂ ನಾಯಕರು ಒಟ್ಟಿಗೆ ಡಿಕೆ ಶಿವಕುಮಾರ್ ಅವರನ್ನು ಭೇಟಿಯಾಗಿರುವುದು ಕುತೂಹಲಕ್ಕೆ ಕಾರಣವಾಗಿದೆ. ಕೇಂದ್ರದ ಮಾಜಿ ಸಚಿವರು ಹಾಗೂ ಬಿಜೆಪಿ ಮುಖಂಡರಾದ ಜಿ.ಎಂ.ಸಿದ್ದೇಶ್ವರ ಹಾಗೂ ಬಿಜೆಪಿ ಶಾಸಕ ಬಿ.ಪಿ.ಹರೀಶ್ ಅವರು ನನ್ನನ್ನು ಗೃಹಕಚೇರಿಯಲ್ಲಿ ಭೇಟಿಮಾಡಿ ಸಮಾಲೋಚನೆ ನಡೆಸಿದರು ಎಂದು ಡಿಕೆಶಿ ಫೋಟೋ ಹಂಚಿಕೊಂಡಿದ್ದಾರೆ.

## ಮತ್ತೊಮ್ಮೆ ವೈಜ್ಞಾನಿಕವಾಗಿ ಸಮೀಕ್ಷೆ ನಡೆಸಲು ಸಿದ್ಧಲಿಂಗ ಸ್ವಾಮೀಜಿ ಒತ್ತಾಯ

**ಬೆಂಗಳೂರುಏ.19:** ಹತ್ತು ವರ್ಷಗಳ ಹಿಂದೆ ನಡೆದ ಜಾತಿ ಜನಗಣತಿಯನ್ನು ಈಗ ಒಪ್ಪಬಾರದು. ಮತ್ತೊಮ್ಮೆ ವೈಜ್ಞಾನಿಕವಾಗಿ ಸಮೀಕ್ಷೆ ನಡೆಸಬೇಕು ಎಂದು ಸಿದ್ಧಗಂಗಾ ಮಠಾಧ್ಯಕ್ಷರಾದ ಸಿದ್ಧಲಿಂಗ ಸ್ವಾಮೀಜಿ ಒತ್ತಾಯಿಸಿದರು.



ನಗರದ ಸಿದ್ದಗಂಗಾ ಮಠದಲ್ಲಿ ತಮ್ಮನ್ನು ಭೇಟಿ ಮಾಡಿದ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಳೆದ ಹತ್ತು ವರ್ಷಗಳಲ್ಲಿ ಏನೆಲ್ಲಾ ಬದಲಾವಣೆ ಆಗಿರಬಹುದು. ಜನಸಂಖ್ಯೆ ಸಹ ಹೆಚ್ಚಳವಾಗಿದೆ. ಇದನ್ನು ಸೂಕ್ಷ್ಮವಾಗಿ ಅರಿತು ಮರು ಸಮೀಕ್ಷೆ ಮಾಡಿಸಬೇಕು ಎಂದರು. ಬಹುತೇಕರು ತಮ್ಮ ಮನೆಗೆ ಸಮೀಕ್ಷೆ ಮಾಡಲು ಬಂದಿಲ್ಲ. ನಮಗೆ ವಿಚಾರವೇ ಗೊತ್ತಿಲ್ಲ, ತಿಳಿದಿಲ್ಲ ಎಂದು ಹೇಳುತ್ತಿದ್ದಾರೆ. ತಮ್ಮನ್ನು ಯಾರೂ ಭೇಟಿ ಮಾಡಿ ಮಾಹಿತಿ ಪಡೆದುಕೊಂಡಿಲ್ಲ. ಜಾತಿ ಜನಗಣತಿ ಬಗ್ಗೆ ಉಂಟಾಗಿರುವ ಗೊಂದಲ ನಿವಾರಿಸಿ, ಮುಂದಿನ ದಿನಗಳಲ್ಲಿ ಪ್ರತಿಯೊಬ್ಬರನ್ನೂ ಭೇಟಿ ಮಾಡಿ ಸಮೀಕ್ಷೆ ಮಾಡಿಸಬೇಕು. ಎಲ್ಲರಿಗೂ ನ್ಯಾಯ ಒದಗಿಸುವ ಕೆಲಸ ಮಾಡಬೇಕು ಎಂದು ಹೇಳಿದರು. ಬೀದರ್ ಜಿಲ್ಲೆಯಲ್ಲಿ ಸಿಇಟಿ ಪರೀಕ್ಷೆ ಸಮಯದಲ್ಲಿ ವಿದ್ಯಾರ್ಥಿಯ ಜನಿವಾರ ತೆಗೆಸಿದ್ದ ಬಗ್ಗೆ ಪ್ರತಿಕ್ರಿಯಿಸಿದ ಶ್ರೀಗಳು, ಪರೀಕ್ಷೆ ಸಮಯದಲ್ಲಿ ಇಂತಹ ಗೊಂದಲ ಉಂಟಾಗದಂತೆ ತಡೆಯಲು ಸಮಸ್ಯೆ ನಿವಾರಣೆಗೆ ತಜ್ಞರ ಸಮಿತಿ ರಚಿಸಬೇಕು ಎಂದು ಸಲಹೆ ನೀಡಿದರು.

ಸಿಇಟಿ ನಿಯಮಗಳನ್ನು ಮೊದಲು ತಿಳಿದುಕೊಳ್ಳಬೇಕಿದೆ. ಅವರವರ ಆಚರಣೆಗೆ ಸಂವಿಧಾನ ಅವಕಾಶ ಮಾಡಿಕೊಟ್ಟಿದೆ. ಧಾರ್ಮಿಕ ಆಚರಣೆಗಳನ್ನು ಒಪ್ಪಬೇಕಾಗುತ್ತದೆ. ಆದರೆ ಕೆಲವರು ಬುರ್ಖಾ ಹಾಕಿಕೊಂಡು ಬರುತ್ತೇನೆ ಎನ್ನುತ್ತಾರೆ. ಇನ್ನೂ ಕೆಲವರು ಇನ್ನೇನೋ ಹಾಕಿಕೊಂಡು ಬರುತ್ತೇನೆ ಎನ್ನುತ್ತಾರೆ. ಆಗ ಗೊಂದಲ ಉಂಟಾಗುತ್ತದೆ ಎಂದರು.

## ವಿಶೇಷ ಲಕೋಟೆ ಲೋಕಾರ್ಪಣೆ

**ಬೆಂಗಳೂರು, ಏ.19:** ವಿಶ್ವ ಪರಂಪರೆ ದಿನದ ಅಂಗವಾಗಿ ಬೆಂಗಳೂರು ಜನರಲ್ ಪೋಸ್ಟ್ ಆಫೀಸ್ ಜಿಪಿಓ ನಲ್ಲಿ ಇಂದು ಅಂಚೆ ಇಲಾಖೆ, ಕರ್ನಾಟಕ ವೃತ್ತವು ನಮ್ಮ ದೇವಾಲಯ ಕುರಿತ ಆರು ಸಚಿತ್ರಗಳ ಪೋಸ್ಟ್ ಕಾರ್ಡ್ ಮತ್ತು ಕರ್ನಾಟಕದ ಶ್ರೀಮಂತ ಸಾಂಸ್ಕೃತಿಕ ಹಾಗೂ ವಾಸ್ತುಶಿಲ್ಪದ ಪರಂಪರೆ ಆಚರಿಸುವ ವಿಶೇಷ ಲಕೋಟೆ ಲೋಕಾರ್ಪಣೆ ಮಾಡಲಾಯಿತು. ಲೋಕಾರ್ಪಣೆಗೊಂಡಿರುವ ಆರು ಸಚಿತ್ರ ಪೋಸ್ಟ್ ಕಾರ್ಡ್ ಗಳ ಸೆಟ್ ಮತ್ತು ವಿಶೇಷ ಲಕೋಟೆ ಬೆಂಗಳೂರಿನ ಜಿಪಿಓ ಸೇರಿ ಮೈಸೂರು, ಮಂಗಳೂರು ಮತ್ತು ಬೆಳಗಾವಿಯಲ್ಲಿ ಸಾರ್ವಜನಿಕರಿಗೆ ಮಾರಾಟಕ್ಕೆ ಲಭ್ಯವಿರುತ್ತವೆ.



ಸಮಾಜವಾದಿ ಪಕ್ಷದ ಅಧ್ಯಕ್ಷ ಅಖಿಲೇಶ್ ಯಾದವ್ ಅವರು ಸಂಸದ ರಾಮ್‌ಜಿ ಲಾಲ್ ಸುಮನ್ ಅವರನ್ನು ಆಗ್ರಾದಲ್ಲಿ ಭೇಟಿಯಾಗಿದ್ದರು.

## ಶಾಸಕರ ಅಮಾನತು: ನ್ಯಾಯಾಲಯದ ಮೊರೆಹೋಗಲು ಬಿಜೆಪಿ ನಿರ್ಧಾರ



### ಯಾರೆಲ್ಲಾ ಅಮಾನತು

ದೊಡ್ಡಣ್ಣ ಗೌಡ ಪಾಟೀಲ್, ಸಿ.ಕೆ.ರಾಮಮೂರ್ತಿ, ಡಾ.ಸಿ.ಎನ್.ಅಶ್ವತ್ಥನಾರಾಯಣ. ಎಸ್.ಆರ್. ವಿಶ್ವನಾಥ್, ಬೈರತಿ ಬಸವರಾಜ, ಎಂ.ಆರ್.ಪಾಟೀಲ್, ಚನ್ನಬಸಪ್ಪ, ಬಿ.ಸುರೇಶ್‌ಗೌಡ, ಉಮಾನಾಥ್ ಕೋಟ್ಯಾನ್, ಶರಣು ಸಲಗಾರ್, ಶೈಲೇಂದ್ರ ಬೆಲ್ದಾಳೆ, ಯಶಪಾಲ್ ಸುವರ್ಣ, ಹರೀಶ್ ಬಿ.ಪಿ., ಡಾ. ಭರತ್ ಶೆಟ್ಟಿ, ಮುನಿರತ್ನ, ಬಸವರಾಜ ಮತ್ತಿಮೋಡ್, ಧೀರಜ್ ಮುನಿರಾಜು, ಡಾ.ಚಂದ್ರು ಲಮಾಣಿ.

**ಬೆಂಗಳೂರು, ಏ.19:** ಇತ್ತೀಚಿಗೆ ಮುಕ್ತಾಯಗೊಂಡ ಬಜೆಟ್ ಅಧಿವೇಶನದ ಕೊನೆಯ ದಿನದಂದು ಕಲಾಪದ ವೇಳೆ ಅನುಚಿತವಾಗಿ ವರ್ತನೆ ತೋರಿದ ಆರೋಪದ ಮೇಲೆ ವಿಧಾನಸಭೆಯಿಂದ ಆರು ತಿಂಗಳ ಕಾಲ ಶಾಸಕರನ್ನು ಅಮಾನತುಪಡಿಸಿರುವ ಆದೇಶವನ್ನು ವಿಧಾನಸಭಾಧ್ಯಕ್ಷರು ಹಿಂಪಡೆಯದಿದ್ದರೆ ನ್ಯಾಯಾಲಯದ ಮೊರೆ ಹೋಗಲು ಬಿಜೆಪಿ ಪಕ್ಷ ತೀರ್ಮಾನಿಸಿದೆ. ಈ ಹಿಂದೆ ಮಹಾರಾಷ್ಟ್ರ ವಿಧಾನಸಭೆಯಲ್ಲಿ 12 ಶಾಸಕರ ಅಮಾನತು ರದ್ದುಗೊಳಿಸಿ ಅಲ್ಲಿನ ವಿಧಾನಸಭಾಧ್ಯಕ್ಷರು ಆದೇಶ ಹೊರಡಿಸಿದ್ದರು. ಇದನ್ನು ಪ್ರಶ್ನಿಸಿ ಬಿಜೆಪಿ ನ್ಯಾಯಾಲಯದ ಮೊರೆ ಹೋಗಿತ್ತು. ಎರಡು ಕಡೆ ವಾದ– ವಿವಾದ ಆಲಿಸಿದ್ದ ಬಾಂಬೆ ಹೈಕೋರ್ಟ್ 2021 ರ ತೀರ್ಪನ್ನು ಉಲ್ಲೇಖಿಸಿ ಅಮಾನತು ಆದೇಶವನ್ನು ರದ್ದುಪಡಿಸಿತ್ತು. ಇದೀಗ ರಾಜ್ಯದ ಬಿಜೆಪಿ ಶಾಸಕರು ಇದೇ ನ್ಯಾಯಾಂಗ ಮಾರ್ಗವನ್ನು ಹುಡುಕುತ್ತಿದ್ದಾರೆ. ಆದರೂ ಅವರು ಕೊನೆಯ ಕ್ಷಣದವರೆಗೆ ಸದನದೊಳಗೆ ಸಮಸ್ಯೆಯನ್ನು ಪರಿಹರಿಸುವ ಆಶಯ ಹೊಂದಿದ್ದಾರೆ. ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್. ಅಶೋಕ ನೇತೃತ್ವದ ಬಿಜೆಪಿ ನಿಯೋಗವು ಅಮಾನತು ರದ್ದತಿಗೆ ಮನವಿ ಸಲ್ಲಿಸಲು ಶುಕ್ರವಾರ ಸಭಾಧ್ಯಕ್ಷರನ್ನು ಭೇಟಿ ಮಾಡಬೇಕಿತ್ತು.

ಆದಾಗ್ಯೂ, ಗುಡ್ ಫ್ರೈಡೇ ರಜೆಯ ಕಾರಣ ಸಭೆಯನ್ನು ಸೋಮವಾರಕ್ಕೆ ಮುಂದೂಡಲಾಗಿದೆ. ಸೋಮವಾರ ನಡೆಯಲಿರುವ ಸಭೆಯ ತೀರ್ಮಾನದ ಬಳಿಕ ಬಿಜೆಪಿ ಮುಂದಿನ ನಿರ್ಧಾರವನ್ನು ತೆಗೆದುಕೊಳ್ಳಲಿದೆ.ನ್ಯಾಯಾಲಯಕ್ಕೆ ಹೋಗುವುದು ಒಂದು ಆಯ್ಕೆಯಾಗಿದ್ದರೂ, ಶಾಸಕಾಂಗ ಮತ್ತು ನ್ಯಾಯಾಂಗದ ನಡುವಿನ ಸಂಘರ್ಷವನ್ನು ತಪ್ಪಿಸುವುದು ನಮ ಉದ್ದೇಶವಾಗಿರುವುದರಿಂದ ನಾವು ಸಂಯಮವನ್ನು ಕಾಪಾಡಿಕೊಳ್ಳಲು ಬಯಸುತ್ತೇವೆ. ಆದರೆ, ಈಗ ಜವಾಬ್ದಾರಿ ಸಭಾಧ್ಯಕ್ಷರ ಮೇಲಿದೆ. ಸೋಮವಾರ ಅಮಾನತು ಆದೇಶವನ್ನು ಹಿಂಪಡೆಯಲು ಅವರು ಮುಂದಾಗದಿದ್ದರೆ, ರಾಜ್ಯ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸುವುದನ್ನು ಬಿಟ್ಟು ನಮಗೆ ಬೇರೆ ದಾರಿಯಿಲ್ಲ ಎಂದು ಬಿಜೆಪಿ ನಾಯಕರೊಬ್ಬರು ಹೇಳಿದ್ದಾರೆ.



ಅಸ್ಸಾಂ ಮುಖ್ಯಮಂತ್ರಿ ಹಿಮಂತ ಬಿಸ್ವಾ ಶರ್ಮಾ ಅವರು ಶನಿವಾರ ನವದೆಹಲಿಯಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರನ್ನು ಭೇಟಿಯಾದರು.

## ಶಿಲ್ಪಾ ಕುಟುಂಬಕ್ಕೆ 25 ಲಕ್ಷ ರೂ. ಪರಿಹಾರ ನೀಡಲು ಸಂಸದ ಬಸವರಾಜ ಬೊಮ್ಮಾಯಿ ಆಗ್ರಹ

**ಹಾವೇರಿ,ಏ.19:** ಶಿಗ್ಗಾವಿ ತಾಲೂಕಿನ ಚಿಕ್ಕ ಮಲ್ಲೂರು ಗ್ರಾಮದ ಶಿಲ್ಪಾ ಎನ್ನುವ ದಲಿತ ಯುವತಿ ಶಿಲ್ಪಾಗೆ ಕಿರುಕುಳ ನೀಡಿ ಆತ್ಮಹತ್ಯೆಗೆ ಕಾರಣವಾಗಿರುವ ಅನ್ಯಕೋಮಿನ ಯುವಕನನ್ನು ಬಂಧಿಸಿ ಕಠಿಣ ಶಿಕ್ಷೆ ನೀಡಬೇಕು ಹಾಗೂ ಶಿಲ್ಪಾ ಕುಟುಂಬಕ್ಕೆ 25 ಲಕ್ಷ ರೂ. ಪರಿಹಾರ ನೀಡಬೇಕು ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಆಗ್ರಹಿಸಿದ್ದಾರೆ.



ಈ ಕುರಿತು ಹೇಳಿಕೆ ನೀಡಿರುವ ಅವರು, ಶಿಲ್ಪಾ ಆತ್ಮಹತ್ಯೆ ಮಾಡಿಕೊಂಡಿರುವ ಪ್ರಕರಣದ ಹಿಂದೆ ಅನ್ಯ ಕೋಮಿನ ವ್ಯಕ್ತಿಯ ಕಿರುಕುಳವೇ ಕಾರಣ ಎನ್ನುವ ಸತ್ಯ ಹೊರಬಂದಿದೆ. ಉನ್ನತ ಶಿಕ್ಷಣ ಪಡೆದು ಬದುಕಿ ಬಾಳಬೇಕಾಗಿದ್ದ ವಿದ್ಯಾರ್ಥಿನಿ ತನಗೆ ಸಂಬಂಧವೇ ಇಲ್ಲದ ಪ್ರಕರಣದಲ್ಲಿ ಅನ್ಯ ಕೋಮಿನ ವ್ಯಕ್ತಿಯ ಕಿರುಕುಳಕ್ಕೆ ಬೇಸತ್ತು ಜೀವಕಳೆದುಕೊಂಡಿರುವುದು ಅತ್ಯಂತ ನೋವಿನ ಸಂಗತಿ ಎಂದು ಬೇಸರ ವ್ಯಕ್ತಪಡಿಸಿದ್ದಾರೆ.

ಶಿಲ್ಪಾಳ ಆತ್ಮಹತ್ಯೆಯ ಹಿಂದಿನ ಸತ್ಯ ತಡವಾಗಿ ಬೆಳಕಿಗೆ ಬಂದಿದ್ದು, ಪೊಲೀಸರು ಮುಚ್ಚಿಹಾಕುವ ಅಥವಾ ಪ್ರಕರಣದ ದಿಕ್ಕು ತಪ್ಪಿಸುವ ಸಾಧ್ಯತೆ ಇದೆ. ಯುವತಿಗೆ ಕಿರುಕಳ ಕೊಟ್ಟು ಅವಳ ಸಾವಿಗೆ ಕಾರಣವಾಗಿರುವ ವ್ಯಕ್ತಿಯನ್ನು ಪೊಲೀಸರು ತಕ್ಷಣ ಬಂಧಿಸಿ ಕಠಿಣ ಶಿಕ್ಷೆ ಕೊಡಿಸಬೇಕು. ತನ್ನದಲ್ಲದ ತಪ್ಪಿಗೆ ಜೀವ ಕಳೆದುಕೊಂಡಿರುವ ಯುವತಿಯ ಕುಟುಂಬಕ್ಕೆ ರಾಜ್ಯ ಸರ್ಕಾರ 25 ಲಕ್ಷ ರೂ. ಪರಿಹಾರ ನೀಡಬೇಕು ಎಂದು ಆಗ್ರಹಿಸಿದ್ದಾರೆ.

# ಬಯಲುಸೀಮೆ ಜನರ ನೀರಿನ ಬವಣೆಗೆ ಶಾಶ್ವತ ಪರಿಹಾರ ನೀಡಲು ಸರ್ಕಾರ ಬದ್ಧ: ಬೋಸರಾಜು

### ಸಣ್ಣ ನೀರಾವರಿ ಇಲಾಖೆಯಿಂದ ಎತ್ತಿನಹೊಳೆ ಯೋಜನೆಯಿಂದ 285 ಕೋಟಿ ವೆಚ್ಚದಲ್ಲಿ ಕೊರಟಗೆರೆ ತಾಲೂಕಿನ 62 ಕೆರೆಗಳಿಗೆ ನೀರು ತುಂಬಿಸುವ ಮಹತ್ವದ ಯೋಜನೆಗೆ ಚಾಲನೆ

**ತುಮಕೂರು,ಏ.19:** ಬಯಲುಸೀಮೆಯ ಜಿಲ್ಲೆಗಳಲ್ಲಿ ಜನರ ನೀರಿನ ಬವಣೆಗೆ ಶಾಶ್ವತವಾಗಿ ಪರಿಹಾರ ಒದಗಿಸಲು ನಮ್ಮ ಸರ್ಕಾರ ಬದ್ಧವಾಗಿದೆ. ಈ ನಿಟ್ಟಿನಲ್ಲಿ ಸಣ್ಣ ನೀರಾವರಿ ಇಲಾಖೆ ವತಿಯಿಂದ ಕೆ.ಸಿ ವ್ಯಾಲಿ, ಎಚ್‌ಎನ್ ವ್ಯಾಲಿ ಹಾಗೂ ವೃಷಭಾವತಿ ವ್ಯಾಲಿಯಂತಹ ಯೋಜನೆಗಳನ್ನು ಈಗಾಗಲೇ ಕೈಗೆತ್ತಿಕೊಂಡಿದ್ದು, ಇಂದು ಗೊರವನಹಳ್ಳಿಯಲ್ಲಿ ಕೊರಟಗೆರೆ ತಾಲ್ಲೂಕಿನಲ್ಲಿ ಅಂತರ್ಜಲ ಅಭಿವೃದ್ಧಿಪಡಿಸುವ ಉದ್ದೇಶದಿಂದ ಎತ್ತಿನಹೊಳೆ ಯೋಜನೆಯಿಂದ ಕೊರಟಗೆರೆ ತಾಲೂಕಿನ 62 ಕೆರೆಗಳಿಗೆ ನೀರನ್ನು ತುಂಬಿಸುವ ಕಾಮಗಾರಿಗೆ ಮಾನ್ಯ ಗೃಹ ಸಚಿವರು ಹಾಗೂ ತುಮಕೂರು ಜಿಲ್ಲಾ ಉಸ್ತುವಾರಿ ಸಚಿವರಾದ ಜಿ.ಪರಮೇಶ್ವರ್ ಅವರ ಅಧ್ಯಕ್ಷತೆಯಲ್ಲಿ ಶಂಕುಸ್ಥಾಪನೆಯನ್ನು ಯಶಸ್ವಿಯಾಗಿ ನೆರವೇರಿಸಲಾಯಿತು ಎಂದು ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್ ಎಸ್ ಬೋಸರಾಜು ತಿಳಿಸಿದರು.

ಸುಮಾರು 285 ಕೋಟಿ ವೆಚ್ಚದಲ್ಲಿ ಕೊರಟಗೆರೆಯ 62 ಕೆರೆಗಳಿಗೆ ನೀರು ತುಂಬಿಸುವ ಈ ಮಹತ್ವದ ಕಾಮಗಾರಿಗಳಿಂದ ಕೊರಟಗೆರೆ ತಾಲೂಕಿನ ಅಂತರ್ಜಲ ವೃದ್ಧಿಸಲಿದ್ದು, ಈ ಕೆರೆಗಳಲ್ಲಿ ಸುಮಾರು 826 ಎಂಸಿಎಫ್‌ಟಿ ನಷ್ಟು ನೀರು ಸಂಗ್ರಹವಾಗುವುದರಿಂದ ತಾಲೂಕಿನ ಕುಡಿಯುವ ನೀರಿನ ಬವಣೆ ಗಣನೀಯವಾಗಿ ಇಳಿಕೆಯಾಗಲಿದೆ. ಇದರಲ್ಲಿ ನಮ್ಮ ಸಣ್ಣ ನೀರಾವರಿ ಇಲಾಖೆಯ 43 ಕೆರೆಗಳು ಸೇರಿವೆ. ಇವುಗಳ ಸಂಗ್ರಹಣಾ ಸಾಮರ್ಥ್ಯ1848.46 ಎಂಸಿಎಫ್ ಟಿ ಇದ್ದು, ಈ ಯೋಜನೆ ಮೂಲಕ ಇವುಗಳಿಗೆ 659.47 ಎಂಸಿಎಫ್ ಟಿ ನಷ್ಟು ನೀರನ್ನು ತುಂಬಿಸುವುದರಿಂದ ಕೊರಟಗೆರೆ ತಾಲೂಕಿನ ರೈತರ ನೆಮ್ಮದಿಯ ಬದುಕಿಗೆ ದಾರಿಯಾಗಲಿದೆ ಎಂದರು.

ಕೊರಟಗೆರೆ ತಾಲೂಕಿನ ರೈತರಿಗೆ ಹಾಗೂ ಕುಡಿಯುವ ನೀರಿನ ಸಮಸ್ಯೆಗೆ ಶಾಶ್ವತ ಪರಿಹಾರ ಒದಗಿಸುವ ನಿಟ್ಟಿನಲ್ಲಿ ಡಾ. ಜಿ ಪರಮೇಶ್ವರ ಅವರ ಪಾತ್ರ ಪ್ರಮುಖವಾಗಿದ್ದು, ಚುನಾವಣೆಗೂ ಮುನ್ನ ಈ ಭಾಗದ ಜನರಿಗೆ ನೀಡಿದ್ದ ಆಶ್ವಾಸನೆಯನ್ನು ಮುಖ್ಯಮಂತ್ರಿಗಳಿಗೆ ಮನವರಿಕೆ ಮಾಡಿ ಕೊಟ್ಟು, ಈ ಭಾಗದ ನೀರಾವರಿ ಸಮಸ್ಯೆಯನ್ನು ಬಗೆಹರಿಸುವಲ್ಲಿ ಅತ್ಯಂತ ಪ್ರಾಮಾಣಿಕ ಪ್ರಯತ್ನ ಮಾಡಿದ್ದಾರೆ, ಇದರ ಫಲವಾಗಿ ಮುಖ್ಯಮಂತ್ರಿ ನಮ್ಮ ಸಣ್ಣ ನೀರಾವರಿ ಇಲಾಖೆಯಿಂದ ಸುಮಾರು 285 ಕೋಟಿ ವೆಚ್ಚದಲ್ಲಿ ಈ ಯೋಜನೆಯನ್ನು ಕೈಗೆತ್ತಿಕೊಳ್ಳಲು ಅನುಮೋದನೆ ನೀಡಿದ್ದಾರೆ, ನಮ್ಮದು ನುಡಿದಂತೆ ನಡೆದ ಸರ್ಕಾರ ಎಂದು ಗೃಹ ಸಚಿವರನ್ನು ತಮ್ಮ ಭಾಷಣದಲ್ಲಿ ಪ್ರಶಂಸಿಸಿದರು.




ಕಾಮಗಾರಿಯ ಚಾಲನೆ ನಂತರ ಸಣ್ಣ ನೀರಾವರಿ ಸಚಿವರು, ಮುಖ್ಯಮಂತ್ರಿಗಳು ಹಾಗೂ ಗೃಹ ಸಚಿವರ ನಿರ್ದೇಶನದಂತೆ ಸಣ್ಣ ಮತ್ತು ಅತಿ ಸಣ್ಣ ರೈತರ ಜಮೀನಿಗೆ ನೀರಾವರಿ ಒದಗಿಸುವ ದೃಷ್ಟಿಯಿಂದ ಕೊರಟಗೆರೆ ಕ್ಷೇತ್ರದಲ್ಲಿ ಕೊಳವೆಬಾವಿಗಳನ್ನು ಕೊರೆಸಲಾಗಿದ್ದು, ಇಂದು ಕೊಳವೆಬಾವಿಗಳ ಫಲಾನುಭವಿಗಳಿಗೆ ನೀರಾವರಿ ಸಲಕರಣೆಗಳನ್ನು ಸಹ ಸಣ್ಣ ನೀರಾವರಿ ಇಲಾಖೆಯಿಂದ ವಿತರಿಸಲಾಯಿತು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಸಚಿವ ಪರಮೇಶ್ವರ ಅವರು ಮಾತನಾಡಿ, ಸರ್ಕಾರ ಗ್ಯಾರಂಟಿ ಯೋಜನೆಗಳ ಜೊತೆಗೆ ಅಭಿವೃದ್ಧಿಗೂ ಒತ್ತು ನೀಡಿದ್ದು, ಸುಮಾರು 453 ಕೋಟಿ ವೆಚ್ಚದ ಯೋಜನೆಗಳನ್ನು ಇಂದು ಶಂಕುಸ್ಥಾಪನೆ ಮಾಡಲಾಗುತ್ತಿದ್ದು, ಕೆರೆಗಳಿಗೆ ನೀರು ತುಂಬಿಸಿವ ಈ ನೀರಾವರಿ ಯೋಜನೆಗೆ ತ್ವರಿತವಾಗಿ ಅನುಮೋದನೆ ನೀಡಿದ ಸಣ್ಣ ನೀರಾವರಿ ಸಚಿವರಿಗೆ ಕೊರಟಗೆರೆ ಕ್ಷೇತ್ರದ ಜನರ ಪರವಾಗಿ ಧನ್ಯವಾದಗಳನ್ನು ತಿಳಿಸಿದರು.

ಬಯಲುಸೀಮೆಯ ಜಿಲ್ಲೆಗಳಲ್ಲಿ ಜನರು ನೀರಿನ ಬವಣೆಯಿಂದ ತತ್ತರಿಸುತ್ತಿದ್ದಾರೆ. ಇದಕ್ಕೆ ಶಾಶ್ವತ ಪರಿಹಾರ ಒದಗಿಸುವ ನಿಟ್ಟಿನಲ್ಲಿ ನಮ್ಮ ಸರಕಾರ ಈಗಾಗಲೇ ಕೆಸಿ ವ್ಯಾಲಿ, ಎಚ್‌ನ್ ವ್ಯಾಲಿಯಂತಹ ಯೋಜನೆಗಳನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಿ ಕೋಲಾರ, ಚಿಕ್ಕಬಳ್ಳಾಪುರ ಹಾಗೂ ಬೆಂಗಳೂರು ಗ್ರಾಮಾಂತರ ಜಿಲ್ಲೆಗಳ ರೈತರ ಮುಖದಲ್ಲಿ ಮಂದಹಾಸ ಮೂಡಿಸಿದೆ. ತುಮಕೂರು ಜಿಲ್ಲೆಯಲ್ಲು ಸಹ ಕುಸಿದಿರುವ ಅಂತರ್ಜಲವನ್ನು ಅಭಿವೃದ್ಧಿಗೊಳಿಸಿ, ವ್ಯವಸಾಯ ಹಾಗೂ ಕುಡಿಯುವ ನೀರಿನ ಸಮಸ್ಯೆಗಳಿಗೆ ಶಾಶ್ವತ ಪರಿಹಾರ ಒದಗಿಸುವುದು ನಿಟ್ಟಿನಲ್ಲಿ ಕೈಗೆತ್ತಿಕೊಂಡಿರುವ ವೃಷಭಾವತಿ ವ್ಯಾಲಿ ಯೋಜನೆ ಪ್ರಗತಿಯಲಿದ್ದು, ಈ ಯೋಜನೆಯಿಂದ ಜಿಲ್ಲೆಗೆ ಶಾಶ್ವತ ನೀರಾವರಿ ಪರಿಹಾರ ದೊರೆಯಲಿದೆ ಎಂದು ಸಚಿವರು ತಮ್ಮ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದರು.

Managing Editor : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com

Published from: K10,A/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

22 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

ಏಪ್ರಿಲ್ 20 2025, ಭಾನುವಾರ

## ಒಳಪುಟಗಳಲ್ಲಿ


ಅರ್ಕಾವತಿ ನದಿ ಜಲಾಯನ ಪ್ರದೇಶದಲ್ಲಿ ಮಾಲಿನ್ಯ ತಡೆಯಲು 8 ವಾರಗಳ ಗಡುವು: ಹೈಕೋರ್ಟ್ ನಿರ್ದೇಶನ - ಪು.5

ಬಿಜೆಪಿ ಭದ್ರಕೋಟೆ ಕರಾವಳಿ ಕ್ಷೇತ್ರವನ್ನು ಕಾಂಗ್ರೆಸ್ ತೆಕ್ಕೆಗೆ ಸೆಳೆಯಲು ಡಿಕೆಶಿ ತಂತ್ರ - ಪು.6

ಸಚಿವರ ಮೂಗಿನ ನೇರದಲ್ಲೇ ನಿತ್ಯ 500 ಲಾರಿ ಅಕ್ರಮ ಮರಳು ಮಹಾರಾಷ್ಟ್ರಕ್ಕೆ ಸಾಗಣೆ: ರವಿಕುಮಾರ್ ಆರೋಪ - ಪು.7

# ಮುಂದುವರಿದ ಜನಾಂಗದಿಂದ ಜಾತಿ ಸಮಾವೇಶ ಸಲ್ಲದು: ಸಿದ್ದರಾಮಯ್ಯ

**ತುಮಕೂರು, ಏ.19: ಶಿಕ್ಷಣ, ಆರ್ಥಿಕ ಮತ್ತು ಸಾಮಾಜಿಕ ಪರಿವರ್ತನೆಯಿಂದ ಸಮಾನತೆ ಸಾಧ್ಯ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರತಿಪಾದಿಸಿದ್ದಾರೆ.**



ಕುರುಬರ ಸಾಂಸ್ಕೃತಿಕ ಪರಿಷತ್ತು ತುಮಕೂರಿನ ಶ್ರೀದೇವಿ ಸಮೂಹ ಶಿಕ್ಷಣ ಸಂಸ್ಥೆ ಜಂಟಿಯಾಗಿ ಶನಿವಾರ ವೈದ್ಯಕೀಯ ಕಾಲೇಜಿನಲ್ಲಿ ಏರ್ಪಡಿಸಿದ್ದ 31 ಕೃತಿಗಳ ಅನಾವರಣ ಮಾಡಿ ಅವರು ಮಾತನಾಡಿದರು. ಹಿಂದುಳಿದವರು, ದುರ್ಬಲ ಮತ್ತು ಶೋಷಿತ ಸಮುದಾಯಗಳು ಜಾತಿ ಸಮಾವೇಶ ಮಾಡಬಹುದು ಆದರೆ ಮುಂದುವರೆದ ಜಾತಿಗಳು ಇಂತಹ ಸಮಾವೇಶ ಮಾಡುವುದು ಅಪಾಯಕಾರಿ ಬೆಳವಣಿಗೆ ಎಂದು ವ್ಯಾಖ್ಯಾನಿಸಿದರು.

ಸಮಾಜದಲ್ಲಿ ಶಿಕ್ಷಣ ಎಷ್ಟು ಪ್ರಾಮುಖ್ಯ ಎಂಬುದಕ್ಕೆ ತಾವೇ ಪ್ರತ್ಯಕ್ಷ ಉದಾಹರಣೆ ನಮ್ಮ ಕುಟುಂಬದಲ್ಲಿ ನಾನೇ ನಾನೊಬ್ಬನೇ ವಿದ್ಯಾವಂತ ಹೀಗಾಗಿ ನನಗೆ ಮಂತ್ರಿಯಾಗುವ, ಮುಖ್ಯಮಂತ್ರಿ ಆಗುವ ಅವಕಾಶ ಒದಗಿ ಬಂತು. ದೇಶಕ್ಕೆ ಸ್ವಾತಂತ್ರ್ಯ ಬಂದು 75 ವರ್ಷ ಕಳೆದರೂ ಇನ್ನೂ ಜಾತಿಯತೆ ಅಸ್ಪೃಶ್ಯತೆ ಇನ್ನು ತಾಂಡವಾಡುತ್ತಿರುವುದೇ ಅಸಮಾನತೆಗೆ ದಾರಿಯಾಗಿದೆ. ಸಾಹಿತ್ಯ, ಸಂಸ್ಕೃತಿ, ಚಿಂತನ–ಮಂಥನ, ವಿಚಾರ ವಿನಿಮಯ ಕೇವಲ ಒಂದು ಜಾತಿ ಸಮುದಾಯಕ್ಕೆ ಮೀಸಲಾಗದೆ ಎಲ್ಲ ಸಮುದಾಯದಲ್ಲೂ ನೀರಿನಂತೆ ಹರಿಯಬೇಕು. ಪ್ರತಿಭೆ ಯಾರೊಬ್ಬರ ಸ್ವತ್ತಲ್ಲ ಆದರೆ ನಮ್ಮ ಆಲೋಚನೆಗಳು ವೈಜ್ಞಾನಿಕ ಮತ್ತು ವೈಚಾರಿಕ ನಿಲುವು ಪ್ರತಿಪಾದಿಸಬೇಕು. ನಾನು ಶಿಕ್ಷಣ ಪಡೆದಿರುವುದು ನನ್ನ ಸ್ವಾರ್ಥಕ್ಕೆ ಅಲ್ಲ, ಅವಕಾಶ ವಂಚಿತ ಸಮುದಾಯಗಳ ವಿಮೋಚನೆಗಾಗಿ ಎಂಬ ಅಂಬೇಡ್ಕರ್ ಮಾತುಗಳನ್ನು ಪ್ರತಿಯೊಬ್ಬರು ಅರ್ಥಮಾಡಿಕೊಳ್ಳಬೇಕು ಎಂದರು. ಶಿಕ್ಷಣ, ಆರ್ಥಿಕ ಶಕ್ತಿಯಿಂದ ಅಸಮಾನತೆ ನಿವಾರಣೆಯಾಗಲಿದೆ.

ರಾಜ್ಯದ ಜನರು ಆರ್ಥಿಕವಾಗಿ ಸಬಲರಾಗಲು ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ಮಾಡಿದ್ದೇವೆ. ಆರ್ಥಿಕವಾಗಿ ಸಮಾಜಕವಾಗಿ ಶಕ್ತಿ ಬಂದರೆ, ಸಮಾನತೆ ಬರಲು ಸಾಧ್ಯವಾಗುತ್ತದೆ ಕೆಲ ಪಟ್ಟ ಭದ್ರ ಹಿತಾಸಕ್ತಿಗಳು ಇದು ದೊಡ್ಡ ತಪ್ಪು ಅಂತ ಮಾತನಾಡುತ್ತಾರೆ. ಮಹಿಳೆಯರಿಗೆ ಉಚಿತ ಬಸ್ ಪ್ರಯಾಣದಿಂದ ಎಷ್ಟು ಉಪಯೋಗ ಆಗಿದೆ ಎಂದು ಸಿಎಂ ಸಿದ್ದರಾಮಯ್ಯ ತಿಳಿಸಿದರು. ಧರ್ಮಸ್ಥಳದ ಹೆಗ್ಡೆ ಅವರು ನನಗೆ ಪತ್ರ ಬರೆದಿದ್ದರು. ದೇವಾಲಯಕ್ಕೆ ಬರುವ ಸಂಖ್ಯೆ ಹೆಚ್ಚಾಗಿದೆ ಅಂತ ಪತ್ರ ಬರೆದಿದ್ದರು 200 ಯೂನಿಟ್ ವರೆಗೆ ಉಚಿತ ವಿದ್ಯುತ್ ನೀಡಿದ್ದೇನೆ. ಹಿಂದುಳಿದವರು ಜಾರಿ ಸಮಾವೇಶ ಮಾಡಲಿ ಮುಂದುವರೆಯವರು ಮಾಡಬಾರದು ಅಂತ ಲೋಹಿಯಾ ಹೇಳುತ್ತಿದ್ದರು. ಇದೆಲ್ಲ ಚಿಂತನೆ ಮಾಡಬೇಕು ನನಗೆ ಗೊತ್ತಿರುವ ವಿಚಾರ ಹೇಳಿದ್ದೇನೆ. ಇದರಿಂದ ಕೆಲವರಿಗೆ ನೋವಾದರೆ ನಾನು ಏನು ಮಾಡುವುದಕ್ಕೆ ಆಗಲ್ಲ. ಸಿದ್ದರಾಮಯ್ಯ ಹೇಳಿಕೆ ನೀಡಿದರು.

ಗೃಹ ಸಚಿವ ಡಾ.ಜಿ.ಪರಮೇಶ್ವರ್ ಮಾತನಾಡಿ ಕುರುಬ ಸಮುದಾಯದ ಇತಿಹಾಸ ಬಹಳ ದೊಡ್ಡದಿದೆ ಕರ್ನಾಟಕ, ಆಂಧ್ರ, ತೆಲಂಗಾಣ, ತಮಿಳುನಾಡು ಮತ್ತು ಮಹಾರಾಷ್ಟ್ರದಲ್ಲಿ ಸಮುದಾಯ ಸಕ್ರಿಯವಾಗಿದೆ ಕುರುಬ ಸಮುದ ಸಮುದಾಯದ ಇತಂಹ ಜನಪರ, ಪ್ರಗತಿಪರ ಕೆಲಸಗಳಿಂದ ಇತರೆ ಸಮುದಾಯ ಪ್ರೇರಣೆ ಪಡೆಯಬಹುದಾಗಿದೆ ಶಿಕ್ಷಣ, ಆರೋಗ್ಯ ವಲಯಕ್ಕೆ ಡಾ.ಎಂ. ಆರ್.ಹುಲಿನಾಯ್ಕರ್ ನೀಡಿದ ಕೊಡುಗೆ ಅಪಾರ ಎಂದು ಪ್ರಶಂಸೆ ವ್ಯಕ್ತಪಡಿಸಿದರು.

ಗ್ಯಾರಂಟಿ ಯೋಜನಾ ಪ್ರಾಧಿಕಾರದ ಅಧ್ಯಕ್ಷ ಎಚ್.ಎಂ.ರೇವಣ್ಣ ಮಾತನಾಡಿ, ಸಾಮಾಜಿಕ ಶೈಕ್ಷಣಿಕ ವರದಿಯನ್ನು ಸರಿಯಾಗಿ ಪರಾಮರ್ಶೆ ಮಾಡದೆ ಅರ್ಥಮಾಡಿಕೊಳ್ಳದೆ. ಹಾದಿ–ಬೀದಿಯಲ್ಲಿ ಅವೈಜ್ಞಾನಿಕ ಎಂದು ಹೇಳುತ್ತಿರುವುದು ಮೂರ್ಖತನ. ಹಿಂದುಳಿದ ಮತ್ತು ಶೋಷಿತ ಸಮುದಾಯಕ್ಕೆ ಸಿದ್ದರಾಮಯ್ಯ ಸರ್ಕಾರ ನೀಡಿದ ಕೊಡುಗೆಯನ್ನು ಯಾವ ಸರ್ಕಾರ ನೀಡಿಲ್ಲ 262 ಕೋಟಿ ವೆಚ್ಚದಲ್ಲಿ ಸಂಗೊಳ್ಳಿ ರಾಯಣ್ಣ ಸೈನಿಕ ಶಾಲೆಯನ್ನು ನಿರ್ಮಿಸಿದ ಕೀರ್ತಿ ಸಿದ್ದರಾಮಯ್ಯ ಸರ್ಕಾರಕ್ಕೆ ಸಲ್ಲುತ್ತದೆ. ಸಾಮಾಜಿಕ ಆರ್ಥಿಕ ಸಮೀಕ್ಷೆ ಎಲ್ಲ ವರ್ಗದ ಹಿತ ಕಾಪಾಡುವ ಆಶಾಕಿರಣವಾಗಿದೆ ಎಂದು ಹೇಳಿದರು.

ವೇದಿಕೆಯಲ್ಲಿ ಕಾಲೇಜಿನ ಮೆಡಿಕಲ್ ಡೈರೆಕ್ಟರ್ ಡಾ.ರಮಣ್ ಎಂ ಹುಲಿನಾಯ್ಕರ್, ಮಾನವ ಸಂಪನ್ಮೂಲ ವಿಭಾಗದ ನಿರ್ದೇಶಕ ಎಂ.ಎಸ್.ಪಾಟೀಲ್, ಕೊಪ್ಪಳ ವಿಶ್ವವಿದ್ಯಾಲಯದ ಕುಲಪತಿ ಡಾ.ಬಿ.ಕೆ.ರವಿ, ಪತ್ರಕರ್ತ ಎಸ್.ನಾಗಣ್ಣ ಮೊದಲಾದವರು ಹಾಜರಿದ್ದರು. ಎರಡು ದಿನಗಳ ಸಮಾವೇಶದಲ್ಲಿ ಕುರುಬ ಸಮುದಾಯದ ಸಾಹಿತ್ಯ, ಸಂಗೀತ, ಕಲೆ, ಸಂಸ್ಕೃತಿ ಪರಂಪರೆಗೆ ನೀಡಿದ ಕೊಡುಗೆ ಕುರಿತು ಚಿಂತನ–ಮಂಥನ ನಡೆಯಲಿದ್ದು, ರಾಜ್ಯದ ಅನೇಕ ಜಿಲ್ಲೆಗಳಿಂದ ಸಾಹಿತಿಗಳು ಚಿಂತಕರು ಸಮಾವೇಶದಲ್ಲಿ ಭಾಗಿಯಾಗಲಿದ್ದಾರೆ.

# ಜಾತಿಗಣತಿ ವರದಿ ಬಿಡುಗಡೆಗೆ ಮೊದಲೇ ದತ್ತಾಂಶ ಸಂಗ್ರಹಕ್ಕೆ ಆದೇಶ: ಸಚಿವ ಪರಮೇಶ್ವರ್ ಸ್ಪಷ್ಟನೆ



**ಬೆಂಗಳೂರು, ಏ.19:** ಒಳ ಮೀಸಲಾತಿ ಹಂಚಿಕೆಗೆ ಜಾತಿಗಣತಿ ದತ್ತಾಂಶ ಬಳಸಲು ಪರಿಶೀಲನೆ ಮಾಡುತ್ತಾರೆ ಎಂದು ಸಚಿವ ಜಿ.ಪರಮೇಶ್ವರ್ ತಿಳಿಸಿದರು. ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಈಗಾಗಲೇ ನ್ಯಾ. ನಾಗಮೋಹನ್‌ದಾಸ್ ಅವರಿಗೆ ಡೇಟಾ ಸಂಗ್ರಹಿಸಲು ಆದೇಶ ಮಾಡಲಾಗಿದೆ. ಆ ಡೇಟಾವನ್ನು ಜಾತಿಗಣತಿ ವರದಿಯೊಂದಿಗೆ ಹೋಲಿಕೆ ಮಾಡುತ್ತಾರೆ. ಜಾತಿಗಣತಿ ವರದಿ ಬಿಡುಗಡೆಯಾಗುವ ಮೊದಲೇ ಡೇಟಾ ಸಂಗ್ರಹಿಸಲು ಆದೇಶ ಮಾಡಿದ್ದೇವೆ. ಈಗ ವಾಪಸ್ ಪಡೆಯಲು ಆಗುವುದಿಲ್ಲ ಎಂದರು. ಜಾತಿಗಣತಿ ವರದಿ ಬಗ್ಗೆ ತಮ್ಮ ಅಭಿಪ್ರಾಯವನ್ನು ತಿಳಿಸಲು ಸಚಿವರಿಗೆ ಹೇಳಿದ್ದಾರೆ. ಮೊನ್ನೆ ನಡೆದ ಕ್ಯಾಬಿನೆಟ್ ಸಭೆಯಲ್ಲಿ ಎಲ್ಲರು ಚರ್ಚೆಯಲ್ಲಿ ಭಾಗವಹಿಸಿದ್ದರು. ಚರ್ಚೆ ಮುಂದುವರಿದಿದ್ದು, ಅವರವರ ಅಭಿಪ್ರಾಯ ತಿಳಿಸಲಿದ್ದಾರೆ. ಎಲ್ಲರ ಅಭಿಪ್ರಾಯ ಕೇಳಿದ ಬಳಿಕ ಸರ್ಕಾರ ಅಂತಿಮ ತೀರ್ಮಾನ ತಗೆದುಕೊಳ್ಳಲಿದೆ. ಇದು ಒಬ್ಬರ ತೀರ್ಮಾನ ಆಗುವುದಿಲ್ಲ. ಕ್ಯಾಬಿನೆಟ್ ತೀರ್ಮಾನ ಆಗುತ್ತದೆ. ಇದು ಮುಖ್ಯಮಂತ್ರಿಯೊಬ್ಬರ ತೀರ್ಮಾನವೂ ಆಗುವುದಿಲ್ಲ" ಎಂದು ಸ್ಪಷ್ಟಪಡಿಸಿದರು. ಪ್ರತಿ ಪಕ್ಷಗಳ ಟೀಕೆಗಳನ್ನು ಗಮನಿಸಿದ್ದೇವೆ. ಸಾಮಾಜಿಕ, ಆರ್ಥಿಕ ಮತ್ತು ಶೈಕ್ಷಣಿಕ ಸಮೀಕ್ಷೆಯ ಮೂಲ ಉದ್ದೇಶವಿರುವುದು ಯಾವ ಸಮುದಾಯ ಸಾಮಾಜಿಕ, ಆರ್ಥಿಕ ಮತ್ತು ಶೈಕ್ಷಣಿಕವಾಗಿ ಯಾವ ಸ್ಥಿತಿಯಲ್ಲಿದೆ ಎಂಬುದನ್ನು ಅಧ್ಯಯನ ಮಾಡಿ ಸರ್ಕಾರಕ್ಕೆ ತಿಳಿಸುವುದು. ಸ್ವಾಭಾವಿಕವಾಗಿ ಯಾವ ಸಮುದಾಯ ಎಷ್ಟೆಷ್ಟು ಜನಸಂಖ್ಯೆ ಇದೆ ಎಂಬ ಅಂಕಿ – ಅಂಶಗಳನ್ನು ಸರ್ಕಾರಕ್ಕೆ ಕೊಟ್ಟಿದ್ದಾರೆ. ಅದರ ಮೇಲೆ ಚರ್ಚೆಯಾಗುತ್ತಿದೆ. ಅಂತಿಮವಾಗಿ ಸರ್ಕಾರ ಒಪ್ಪಬೇಕು. ಮುಂದೆ ಯೋಜನೆಗಳನ್ನು ಮಾಡಬೇಕು" ಎಂದು ಹೇಳಿದರು. ಕೆಲ ಸಮುದಾಯದವರು ತಮ್ಮ ಆತಂಕವನ್ನು ವ್ಯಕ್ತಪಡಿಸಿದ್ದಾರೆ. ವರದಿಯನ್ನು ನಾನು ಓದಿದ್ದೇನೆ. ವೈಜ್ಞಾನಿಕ ದತ್ತಾಂಶವನ್ನು ಹೊಂದಿರುವ ವರದಿಯಾಗಿದೆ. ಒಂದು ಕುಟುಂಬದಲ್ಲಿ ಬೋರ್‌ವೆಲ್ ಹಾಕಿಸಿದ್ದರೆ, ಅದರಲ್ಲಿ ನೀರು ಬಂದಿದೆಯೇ, ನೀರು ಬಂದಿಲ್ಲವೇ? ನೀರು ಸಿಕ್ಕಿಲ್ಲವೇ ಎಂಬ ಮಾಹಿತಿಯನ್ನು ಸಂಗ್ರಹಿಸಿದ್ದಾರೆ.

ಸಮೀಕ್ಷೆ ವೇಳೆ ಮನೆಗೆ ಹೋದಾಗ ಮನೆಯವರಿಂದ ಸಹಿ ಮಾಡಿಸಿಕೊಂಡಿದ್ದಾರೆ. ಇದರ ಮೇಲುಸ್ತುವಾರಿಗಳು ಸಹಿ ಹಾಕಿರುವ ಡೇಟಾ ನಮ್ಮ ಬಳಿ ಇದೆ. ಈ ಎಲ್ಲ ಡೇಟಾ ವರದಿಯಲ್ಲಿದೆ. 1.37 ಲಕ್ಷ ಕುಟುಂಬಗಳ ಮನೆಗೆ ಭೇಟಿ ಕೊಟ್ಟಿದ್ದಾರೆ. ಅಷ್ಟು ಡೇಟಾ ಇದೆ. ಇದನ್ನೆಲ್ಲ ಮರದ ಕೆಳಗೆ ಕುಳಿತು ಬರೆದುಕೊಂಡು ಬರಲು ಆಗುವುದಿಲ್ಲ ಎಂದು ಪ್ರತಿಪಕ್ಷ ನಾಯಕರಿಗೆ ತಿರುಗೇಟು ನೀಡಿದರು.

# ಬಾಂಗ್ಲಾದೇಶದಲ್ಲಿ ಹಿಂದೂ ನಾಯಕನ ಹತ್ಯೆ: ಭಾರತ ಖಂಡನೆ ಅಲ್ಪಸಂಖ್ಯಾತರ ರಕ್ಷಣೆಗೆ ಯೂನಸ್ ಸರ್ಕಾರಕ್ಕೆ ಆಗ್ರಹ

**ನವದೆಹಲಿ/ಢಾಕಾ, ಏ.19:** ಬಾಂಗ್ಲಾದೇಶದ ಹಿಂದೂ ಅಲ್ಪಸಂಖ್ಯಾತ ಸಮುದಾಯದ ಪ್ರಮುಖ ನಾಯಕ ಭಬೇಶ್ ಚಂದ್ರ ರಾಯ್ ಅವರನ್ನು ದಿನಾಜ್‌ಪುರದ ಬೀರಲ್ ಉಪಜಿಲ್ಲಾದಲ್ಲಿ ಅಪಹರಿಸಿ ಕೊಲ್ಲಲಾಗಿದೆ. ಭಾರತ ಈ ಹತ್ಯೆಯನ್ನು ಖಂಡಿಸಿದ್ದು, ಇದು ಮಧ್ಯಂತರ ಸರ್ಕಾರದ ಅಡಿಯಲ್ಲಿ ಹಿಂದೂ ಅಲ್ಪಸಂಖ್ಯಾತರ ಮೇಲೆ ವ್ಯವಸ್ಥಿತ ಕಿರುಕುಳದ ಮಾದರಿಯನ್ನು ಅನುಸರಿಸುತ್ತದೆ ಎಂದು ಆರೋಪಿಸಿದೆ. ಬಾಂಗ್ಲಾದೇಶ ಪೂಜಾ ಉದ್ಜಪನ್ ಪರಿಷತ್‌ನ ಬೀರಲ್ ಘಟಕದ ಉಪಾಧ್ಯಕ್ಷ 58 ವರ್ಷದ ಭಬೇಶ್




ಚಂದ್ರ ರಾಯ್ ಈ ಪ್ರದೇಶದ ಹಿಂದೂ ಸಮುದಾಯದ ಪ್ರಮುಖ ನಾಯಕರಾಗಿದ್ದರು. ಅವರು ಶತಗ್ರಾಮ ಒಕ್ಕೂಟದ ಬಸುದೇಬ್ಪುರ ಗ್ರಾಮದ ನಿವಾಸಿಯಾಗಿದ್ದರು.

ಅವರ ಮೃತದೇಹ ಗುರುವಾರ ರಾತ್ರಿ ಪತ್ತೆಯಾಗಿದೆ. ಮೊಹಮ್ಮದ್ ಯೂನಸ್ ನೇತೃತ್ವದ ಮಧ್ಯಂತರ ಸರ್ಕಾರವು ನೆಪಗಳನ್ನು ಕಂಡುಹಿಡಿಯದೆ ಅಥವಾ ಭೇದಗಳನ್ನು ಮಾಡದೆ ಹಿಂದೂಗಳು ಸೇರಿದಂತೆ ಎಲ್ಲಾ ಅಲ್ಪಸಂಖ್ಯಾತರನ್ನು ರಕ್ಷಿಸುವ ಜವಾಬ್ದಾರಿಯನ್ನು ನಿರ್ವಹಿಸಬೇಕು ಎಂದು ಭಾರತವು ಯೂನಸ್ ಸರ್ಕಾರಕ್ಕೆ ಆಗ್ರಹಿಸಿದೆ.

## ಭಬೇಶ್‌ಚಂದ್ರ ರಾಯ್ ಹತ್ಯೆಗೆ ಭಾರತ ಖಂಡನೆ: ವ್ಯವಸ್ಥಿತ ಕಿರುಕುಳಕ್ಕೆ ಕಿಡಿ



ಬಾಂಗ್ಲಾದೇಶದಲ್ಲಿ ಹಿಂದೂ ಅಲ್ಪಸಂಖ್ಯಾತ ನಾಯಕ ಭಬೇಶ್‌ಚಂದ್ರ ರಾಯ್ ಅವರ ಅಪಹರಣ ಮತ್ತು ಕ್ರೂರ ಹತ್ಯೆಗೆ ನಾವು ಸಂತಾಪ ವ್ಯಕ್ತಪಡಿಸುತ್ತೇವೆ. ಈ ಹತ್ಯೆಯು ಮಧ್ಯಂತರ ಸರ್ಕಾರದ ಅಡಿಯಲ್ಲಿ ಹಿಂದೂ ಅಲ್ಪಸಂಖ್ಯಾತರ ಮೇಲೆ ವ್ಯವಸ್ಥಿತ ಕಿರುಕುಳದ ಮಾದರಿಯನ್ನು ಅನುಸರಿಸುತ್ತದೆ, ಇಂತಹ ಘಟನೆಗಳ ಭಾಗಿಯಾದ ಅಪರಾಧಿಗಳು ನಿರ್ಭಯದಿಂದ ಓಡಾಡುತ್ತಿದ್ದರೂ ಸಹ. ನೀವು ಯಾವುದೇ ಕಠಿಣ ಕ್ರಮ ಕೈಗೊಳ್ಳದೆ ನಿರಾಳದಿಂದಿರುವಿರಿ. ನಾವು ಈ ಘಟನೆಯನ್ನು ಖಂಡಿಸುತ್ತೇವೆ, ಸರ್ಕಾರವು ಹಿಂದೂಗಳು ಸೇರಿದಂತೆ ಎಲ್ಲಾ ಅಲ್ಪಸಂಖ್ಯಾತರನ್ನು ಭೇದಭಾವ ಮಾಡದೆ ರಕ್ಷಿಸುವ ಜವಾಬ್ದಾರಿಯನ್ನು ಹೊತ್ತುಕೊಳ್ಳಬೇಕೆಂದು ಮತ್ತೊಮ್ಮೆ ನೆನಪಿಸುತ್ತೇವೆ. ಮಾಧ್ಯಮ ವರದಿ ಪ್ರಕಾರ ಗುರುವಾರ ಮಧ್ಯಾಹ್ನ ರಾಯ್ ಅವರನ್ನು ಅವರ ಮನೆಯಿಂದ ಅಪಹರಿಸಿ ಥಳಿಸಿ ಕೊಲ್ಲಲಾಯಿತು ಎಂದು ಪೊಲೀಸರು ಮತ್ತು ಕುಟುಂಬ ಸದಸ್ಯರು ತಿಳಿಸಿರುವುದು ವಿಷಾದನೀಯ ಎಂದು ಭಾರತದ ವಕ್ತಾರ ಜೈಸ್ವಾಲ್ ತಿಳಿಸಿದ್ದಾರೆ.

## ಬಾಂಗ್ಲಾ ಹಿಂದೂಗಳ ಮೇಲಿನ ದಾಳಿ: ಮೋದಿ ಸರ್ಕಾರಕ್ಕೆ ಮಲ್ಲಿಕಾರ್ಜುನ ಖರ್ಗೆ ತರಾಟೆ



ಬಾಂಗ್ಲಾದೇಶದಲ್ಲಿ ಧಾರ್ಮಿಕ ಅಲ್ಪಸಂಖ್ಯಾತರ ಮೇಲೆ, ವಿಶೇಷವಾಗಿ ಹಿಂದೂಗಳ ಮೇಲೆ ಹೆಚ್ಚುತ್ತಿರುವ ದಾಳಿಗಳ ಘಟನೆಗಳ ಬಗ್ಗೆ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಶನಿವಾರ ಮೋದಿ ಸರ್ಕಾರವನ್ನು ತರಾಟೆಗೆ ತೆಗೆದುಕೊಂಡರು ಮತ್ತು ಪ್ರಮುಖ ಹಿಂದೂ ಸಮುದಾಯದ ನಾಯಕ ಭಬೇಶ್ ಚಂದ್ರ ರಾಯ್ ಅವರ ಹತ್ಯೆಗೆ ಆಘಾತ ವ್ಯಕ್ತಪಡಿಸಿದರು. ಹಿಂದೂ ಸಮುದಾಯದ ಪ್ರಮುಖ ನಾಯಕ ಭಬೇಶ್‌ಚಂದ್ರ ರಾಯ್ ಅವರ ಕ್ರೂರ ಹತ್ಯೆ, ಬಾಂಗ್ಲಾದೇಶದ ಮುಖ್ಯ ಸಲಹೆಗಾರರೊಂದಿಗೆ ನಗುತ್ತಿರುವ ಮೋದಿಜಿ ಭೇಟಿ ವಿಫಲವಾಗಿದೆ ಎಂಬುದಕ್ಕೆ ಪುರಾವೆಯಾಗಿದೆ. ಧಾರ್ಮಿಕ ಅಲ್ಪಸಂಖ್ಯಾತರು, ವಿಶೇಷವಾಗಿ ನಮ್ಮ ಹಿಂದೂ ಸಹೋದರ–ಸಹೋದರಿಯರು, ಬಾಂಗ್ಲಾದೇಶದಲ್ಲಿ ನಿರಂತರವಾಗಿ ಕಿರುಕುಳಕ್ಕೊಳಗಾಗುತ್ತಿದ್ದಾರೆ" ಎಂದು ಅವರು ಹೇಳಿದರು. "ಬಾಂಗ್ಲಾದೇಶದಲ್ಲಿ ಕಳೆದ ಎರಡು ತಿಂಗಳಲ್ಲಿ, ಹಿಂದೂಗಳ ಮೇಲೆ 76 ದಾಳಿಗಳನ್ನು ನಡೆಸಲಾಗಿದ್ದು, ಇದರಲ್ಲಿ 23 ಜನರು ಸಾವನ್ನಪ್ಪಿದ್ದಾರೆ. ಇದಲ್ಲದೆ, ಇತರ ಧಾರ್ಮಿಕ ಅಲ್ಪಸಂಖ್ಯಾತರ ಮೇಲಿನ ದಾಳಿಗಳು ಸಹ ಮುಂದುವರೆದಿವೆ.

## ಮುರ್ಷಿದಾಬಾದ್ ಹಿಂಸಾಚಾರ: ಬಾಂಗ್ಲಾ ಸರ್ಕಾರದ ಹೇಳಿಕೆಗೆ ಭಾರತ ತಿರುಗೇಟು

**ನವದೆಹಲಿ, ಏ.19:** ವಕ್ಫ್ ಕಾನೂನಿನಿಂದಾಗಿ ಪಶ್ಚಿಮ ಬಂಗಾಳದಲ್ಲಿ ನಡೆದ ಹಿಂಸಾಚಾರದ ಕುರಿತು ಬಾಂಗ್ಲಾದೇಶ ನೀಡಿದ ಹೇಳಿಕೆಗಳನ್ನು ಭಾರತ ಬಲವಾಗಿ ಖಂಡಿಸಿದೆ, ಇಂತಹ ಕಪಟ ಹೇಳಿಕೆಗಳ ಮೂಲಕ ಬಾಂಗ್ಲಾದೇಶದಲ್ಲಿ ನಡೆಯುತ್ತಿರುವ ಅಲ್ಪಸಂಖ್ಯಾತರ ಮೇಲಿನ ಕಿರುಕುಳದ ಗಮನವನ್ನು ಬೇರೆಡೆ ಸೆಳೆಯುವ ಪ್ರಯತ್ನ ಭಾಗ ಎಂದು ಭಾರತದ ವಿದೇಶಾಂಗ ಸಚಿವಾಲಯ ತಿರುಗೇಟು ನೀಡಿದೆ. ಕಳೆದ ವಾರ ಬಂಗಾಳದ ಮುರ್ಷಿದಾಬಾದ್ ಜಿಲ್ಲೆಯಲ್ಲಿ ಭುಗಿಲೆದ್ದ ಹಿಂಸಾಚಾರದಲ್ಲಿ ಮೂವರು ಸಾವನ್ನಪ್ಪಿ, ನೂರಾರು ಜನರು ಗಾಯಗೊಂಡಿದ್ದು, ಈ ಹಿಂಸಾಚಾರದಲ್ಲಿ ಪರಿಣಾಮ ಬೀರಿದ ಅಲ್ಪಸಂಖ್ಯಾತ ಮುಸ್ಲಿಂ ಸಮುದಾಯಗಳನ್ನು ರಕ್ಷಿಸುವಂತೆ ಭಾರತೀಯ ಅಧಿಕಾರಿಗಳಿಗೆ ಬಾಂಗ್ಲಾದೇಶದ ಮುಖ್ಯ ಸಲಹೆಗಾರ ಮೊಹಮದ್ ಯೂನಸ್ ಅವರ ಪತ್ರಿಕಾ ಕಾರ್ಯದರ್ಶಿ ಕರೆ ನೀಡಿದರು.

ಬಾಂಗ್ಲಾದೇಶದ ಹೇಳಿಕೆಗಳನ್ನು ತಿರಸ್ಕರಿಸಿದ ವಿದೇಶಾಂಗ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್, ಪಶ್ಚಿಮ ಬಂಗಾಳದಲ್ಲಿ ನಡೆದ ಘಟನೆಗಳಿಗೆ ಸಂಬಂಧಿಸಿದಂತೆ ಬಾಂಗ್ಲಾದೇಶದ ಕಡೆಯವರು ಮಾಡಿದ ಹೇಳಿಕೆಗಳನ್ನು ನಾವು ತಿರಸ್ಕರಿಸುತ್ತೇವೆ. ಬಾಂಗ್ಲಾದೇಶದಲ್ಲಿ ಅಲ್ಪಸಂಖ್ಯಾತರ ಮೇಲೆ ನಡೆಯುತ್ತಿರುವ ಕಿರುಕುಳದ ಬಗ್ಗೆ ಭಾರತದ ಕಳವಳಗಳಿಗೆ ಸಮಾನಾಂತರವಾಗಿ ಚಿತ್ರಿಸಲು ಇದು ಕೇವಲ ವೇಷ ಧರಿಸಿದ ಮತ್ತು ಕಪಟ ಪ್ರಯತ್ನವಾಗಿದೆ. ಅಲ್ಲಿ ಅಂತಹ ಕೃತ್ಯಗಳು ನಡೆಸಿದ ಅಪರಾಧಿಗಳು ಮುಕ್ತವಾಗಿ ತಿರುಗಾಡುತ್ತಿದ್ದಾರೆ, ಅನಗತ್ಯ ಹೇಳಿಕೆಗಳನ್ನು ನೀಡುವ ಬದಲು ತನ್ನದೇ ಆದ ಅಲ್ಪಸಂಖ್ಯಾತರ ಹಕ್ಕುಗಳನ್ನು ರಕ್ಷಿಸುವತ್ತ ಗಮನಹರಿಸುವಂತೆ ಹೇಳಿದರು.

# ನವದೆಹಲಿಯಲ್ಲಿ ನಾಲ್ಕು ಅಂತಸ್ತಿನ ಕಟ್ಟಡ ಕುಸಿತ: 11 ಮಂದಿ ಸಾವು

## ಹಲವರು ಅವಶೇಷಗಳ ಅಡಿಯಲ್ಲಿ ಸಿಲುಕಿರುವ ಶಂಕೆ



**ನವದೆಹಲಿ, ಏ.19:** ಶನಿವಾರ ಮುಂಜಾನೆ ಈಶಾನ್ಯ ದೆಹಲಿಯಲ್ಲಿ ಮುಸ್ತಾಫಬಾದ್‌ನಲ್ಲಿ ನಾಲ್ಕು ಅಂತಸ್ತಿನ ಕಟ್ಟಡ ಕುಸಿದು ಕನಿಷ್ಠ 11 ಜನರು ಸಾವನ್ನಪ್ಪಿದ್ದು, ಇನ್ನೂ ಹಲವರು ಅವಶೇಷಗಳ ಅಡಿಯಲ್ಲಿ ಸಿಲುಕಿರುವ ಶಂಕೆ ವ್ಯಕ್ತವಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಬೆಳಗಿನ ಜಾವ 3:02ಕ್ಕೆ ಘಟನೆ ನಡೆದಿದೆ, ಈವರೆಗೂ ಕನಿಷ್ಠ 14 ಜನರನ್ನು ರಕ್ಷಿಸಲಾಗಿದೆ ಮತ್ತು ಅವರನ್ನು ಜಿಟಿಬಿ ಆಸ್ಪತ್ರೆಗೆ ಸ್ಥಳಾಂತರಿಸಲಾಗಿದೆ, ಅಲ್ಲಿ ನಾಲ್ವರು ಆಸ್ಪತ್ರೆಗೆ ತಲುಪುವಷ್ಟರಲ್ಲಿ ಮೃತಪಟ್ಟಿದ್ದಾರೆ ಎಂದು ಘೋಷಿಸಲಾಗಿದೆ.

ರಾಷ್ಟ್ರೀಯ ವಿಪತ್ತು ನಿರ್ವಹಣಾ ಪಡೆ, ಅಗ್ನಿಶಾಮಕ ದಳ ಮತ್ತು ದೆಹಲಿ ಪೊಲೀಸರ ರಕ್ಷಣಾ ತಂಡಗಳು ಸ್ಥಳಕ್ಕೆ ಧಾವಿಸಿವೆ. ಕಟ್ಟಡ ಕುಸಿತಕ್ಕೆ ಕಾರಣವೇನೆಂದು ತನಿಖೆ ನಡೆಸಲಾಗುತ್ತಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ದೆಹಲಿ ಮುಖ್ಯಮಂತ್ರಿ ರೇಖಾ ಗುಪ್ತಾ ಅವರು, ಘಟನೆಗೆ ಕಾರಣರಾದವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು. ಘಟನೆಯ ಬಗ್ಗೆ ತನಿಖೆಗೆ ಆದೇಶಿಸಲಾಗಿದೆ ಎಂದು ಹೇಳಿದರು.

ಎಲ್ಲಾ ಗಾಯಾಳುಗಳಿಗೆ ಸೂಕ್ತ ಚಿಕಿತ್ಸೆ ನೀಡಲು ವ್ಯವಸ್ಥೆ ಮಾಡಲಾಗಿದೆ. ಈ ದುರದೃಷ್ಟಕರ ಅಪಘಾತದಲ್ಲಿ ಮಡಿದವರಿಗೆ ನನ್ನ ಗಾಢ ಸಂತಾಪಗಳು. ಅಗಲಿದ ಆತ್ಮಗಳಿಗೆ ದೇವರು ಶಾಂತಿ ನೀಡಲಿ ಮತ್ತು ದುಃಖಿತ ಕುಟುಂಬಗಳಿಗೆ ಈ ಸರಿಪಡಿಸಲಾಗದ ನಷ್ಟವನ್ನು ಭರಿಸುವ ಶಕ್ತಿಯನ್ನು ನೀಡಲಿ ಎಂದು ದೆಹಲಿ ಮುಖ್ಯಮಂತ್ರಿ ಹೇಳಿಕೆ ನೀಡಿದ್ದಾರೆ.

ಮುಸ್ತಫಾಬಾದ್ ಶಾಸಕ, ಬಿಜೆಪಿಯ ಮೋಹನ್ ಸಿಂಗ್ ಬಿಶ್ತ್ ಅವರು ಘಟನೆಗೆ ಅಧಿಕಾರಿಗಳನ್ನು ದೂಷಿಸಿದರು, ಅನಧಿಕೃತ ಕಟ್ಟಡಗಳ ನಿರ್ಮಾಣಕ್ಕೆ ಅನುಮೋದನೆ ನೀಡುವುದರಿಂದ ಭವಿಷ್ಯದಲ್ಲಿ ಅನಾಹುತಗಳು ಸಂಭವಿಸಬಹುದು ಎಂದು ಎರಡು ತಿಂಗಳ ಹಿಂದೆಯೇ ಎಚ್ಚರಿಸಿದ್ದೆ,


ಅಧಿಕಾರಿಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು. ಅನಧಿಕೃತ ಕಟ್ಟಡಗಳಿಗೆ ಅವಕಾಶ ನೀಡುವ ಮೂಲಕ ಅವರು ಈ ವಿಪತ್ತನ್ನು ಆಹ್ವಾನಿಸಿದ್ದಾರೆ ಎಂದು ಹೇಳಿದರು.

# ಜೆಇಇ ಮುಖ್ಯ ಪರೀಕ್ಷೆ ಬರೆದ 110 ಅಭ್ಯರ್ಥಿಗಳ ಫಲಿತಾಂಶ ತಡೆಹಿಡಿದ ಎನ್‌ಟಿಎ

**ನವದೆಹಲಿ, ಏ.19:** ನಕಲಿ ದಾಖಲೆಗಳು ಸೇರಿದಂತೆ ಅನ್ಯಾಯದ ವಿಧಾನಗಳನ್ನು ಬಳಸಿ ಜೆಇಇ ಮುಖ್ಯ ಪರೀಕ್ಷೆ ಬರೆದ 110 ಅಭ್ಯರ್ಥಿಗಳ ಫಲಿತಾಂಶವನ್ನು ತಡೆಹಿಡಿಯಲಾಗಿದೆ ಎಂದು ರಾಷ್ಟ್ರೀಯ ಪರೀಕ್ಷಾ ಸಂಸ್ಥೆ ಹೇಳಿದೆ. ಇಂದು ಜೆಇಇ ಮುಖ್ಯಪರೀಕ್ಷೆ ಎರಡನೇ ಆವೃತ್ತಿಯ ಫಲಿತಾಂಶ ಪ್ರಕಟವಾಗಿದ್ದು, 24 ಅಭ್ಯರ್ಥಿಗಳು ಶೇಕಡ 100 ಅಂಕ ಗಳಿಸಿದ್ದಾರೆ. ಇಂಜಿನಿಯರಿಂಗ್ ಪ್ರವೇಶ ಪರೀಕ್ಷೆಯಲ್ಲಿ 24 ಅಭ್ಯರ್ಥಿಗಳು ಶೇ. 100 ಅಂಕ ಗಳಿಸಿದ್ದು, ರಾಜಸ್ಥಾನದಲ್ಲಿ ಪರಿಪೂರ್ಣ ಅಂಕಗಳನ್ನು ಪಡೆದ ಅಭ್ಯರ್ಥಿಗಳ ಸಂಖ್ಯೆ ಅತಿ ಹೆಚ್ಚಿದೆ. ಒಬ್ಬರು ಮಹಿಳಾ ಅಭ್ಯರ್ಥಿ ಅತಿ ಹೆಚ್ಚು ಅಂಕ ಪಡೆದವರಲ್ಲಿ ಸೇರಿದ್ದಾರೆ.

ಜೆಇಇ (ಮುಖ್ಯ) ಪತ್ರಿಕೆ 1 ಮತ್ತು ಪತ್ರಿಕೆ 2ರ ಫಲಿತಾಂಶಗಳ ಆಧಾರದ ಮೇಲೆ, ಅಭ್ಯರ್ಥಿಗಳನ್ನು ಜೆಇಇ (ಅಡ್ವಾನ್ಸ್‌ಡ್) ಗೆ ಹಾಜರಾಗಲು ಪಟ್ಟಿ ಮಾಡಲಾಗುತ್ತದೆ. ಇದು 23 ಪ್ರಮುಖ ಭಾರತೀಯ ತಂತ್ರಜ್ಞಾನ ಸಂಸ್ಥೆಗಳಿಗೆ (ಐಐಟಿ) ಪ್ರವೇಶಕ್ಕಾಗಿ ನಡೆಸುವ ಪರೀಕ್ಷೆಯಾಗಿದೆ. ಈ ಬಾರಿ ದೇಶದಾದ್ಯಂತ 10,61,840 ಅಭ್ಯರ್ಥಿಗಳು ಪರೀಕ್ಷೆಗೆ ನೋಂದಾಯಿಸಿಕೊಂಡಿದ್ದರು. ಈ ಪೈಕಿ 9,92,350 ಮಂದಿ ಪರೀಕ್ಷೆಗೆ ಹಾಜರಾಗಿದ್ದರು.

# ಗುಂಡೇಟಿಗೆ ಕೆನಡಾದಲ್ಲಿ ಭಾರತೀಯ ವಿದ್ಯಾರ್ಥಿನಿ ಹರ್‌ಸಿಮ್ರತ್ ಸಾವು



**ಹ್ಯಾಮಿಲ್ಟನ್, ಏ.19:** ಕೆನಡಾದ ಒಂಟಾರಿಯೊ ಪ್ರಾಂತ್ಯದ ಹ್ಯಾಮಿಲ್ಟನ್‌ನಲ್ಲಿ ನಡೆದ ಗುಂಡಿನ ದಾಳಿಯಲ್ಲಿ ಭಾರತೀಯ ವಿದ್ಯಾರ್ಥಿನಿ ದಾರುಣವಾಗಿ ಸಾವನ್ನಪ್ಪಿದ್ದಾಳೆ. ಈ ಘಟನೆಯಲ್ಲಿ ವಿದ್ಯಾರ್ಥಿನಿಗೆ ಆಕಸ್ಮಿಕವಾಗಿ ಗುಂಡಿಗೆ ಗುರಿಯಾಗಿದ್ದಾಳೆ ಎಂದು ಪೊಲೀಸರು ತಿಳಿಸಿದ್ದಾರೆ.

ಹ್ಯಾಮಿಲ್ಟನ್‌ನ ಕಿಂಗ್ ಸ್ಟ್ರೀಟ್‌ನಲ್ಲಿ ಗುರುವಾರ ರಾತ್ರಿ ಸಂಭವಿಸಿದ ಈ ಗುಂಡಿನ ದಾಳಿಯಲ್ಲಿ ಮೊಹಾಕ್ ಕಾಲೇಜಿನಲ್ಲಿ ಓದಿತ್ತಿದ್ದ 22 ವರ್ಷದ ಭಾರತೀಯ ವಿದ್ಯಾರ್ಥಿನಿ ಹರ್‌ಸಿಮ್ರತ್ ರಾಂಧವಾಗೆ ಗುಂಡು ತಗುಲಿದೆ. ಗಾಯಗೊಂಡ ವಿದ್ಯಾರ್ಥಿಯನ್ನು ತಕ್ಷಣವೇ ಆಸ್ಪತ್ರೆಗೆ ಕರೆದೊಯ್ಯಲಾಗಿತ್ತು ಆದರೆ ಚಿಕಿತ್ಸೆ ಫಲಕಾರಿಯಾಗದೆ ಅವಳು ಮೃತಪಟ್ಟಳು.

ಪ್ರಾಥಮಿಕ ತನಿಖೆಯಲ್ಲಿ ಕಪ್ಪು ಬಣ್ಣದ ಕಾರಿನ ಪ್ರಯಾಣಿಕನೊಬ್ಬ ಬಿಳಿ ಸೆಡಾನ್ ಕಾರಿನಲ್ಲಿದ್ದವರ ಮೇಲೆ ಗುಂಡು ಹಾರಿಸಿದ್ದಾನೆ ಎಂದು ತಿಳಿದುಬಂದಿದೆ, ನಂತರ ವಾಹನಗಳು ಸ್ಥಳದಿಂದ ಹೊರಟುಹೋದವು ಎಂದು ತಿಳಿದು ಬಂದವು. ಪೊಲೀಸರ ಪ್ರಕಾರ ಈ ಗುಂಡಿನ ದಾಳಿಯು ಉದ್ದೇಶಿತ ಗುರಿಯಾಗಿರಲಿಲ್ಲ. ಘಟನೆಯ ಬಗ್ಗೆ ತನಿಖೆ ಆರಂಭವಾಗಿದ್ದು, ಶಂಕಿತರನ್ನು ಗುರುತಿಸಲು ಪೊಲೀಸರು ಪ್ರಯತ್ನಿಸುತ್ತಿದ್ದೆ, ಸಿಸಿಟಿವಿ ದೃಶ್ಯಾವಳಿಗಳನ್ನು ಪರಿಶೀಲಿಸಲು ತಂಡವೊಂದು ಕಾರ್ಯನಿರ್ವಹಿಸುತ್ತಿದೆ.

ಕೆನಡಾದ ಭಾರತೀಯ ದೂತಾವಾಸವು ಈ ಘಟನೆಯ ಬಗ್ಗೆ ಕಳವಳ ವ್ಯಕ್ತಪಡಿಸಿದ್ದು, ಮೃತ ವಿದ್ಯಾರ್ಥಿಯ ಕುಟುಂಬಕ್ಕೆ ಸಂಪರ್ಕ ಸಾಧಿಸಿ ಸೂಕ್ತ ಸಹಾಯವನ್ನು ಒದಗಿಸುವುದಾಗಿ ತಿಳಿಸಿದೆ. ಈ ಘಟನೆಯಿಂದಾಗಿ ಕೆನಡಾದ ಭಾರತೀಯ ವಿದ್ಯಾರ್ಥಿ ಸಮುದಾಯದಲ್ಲಿ ಆತಂಕ ಮೂಡಿದ್ದು, ಸ್ಥಳೀಯ ಆಡಳಿತವು ಭದ್ರತೆಯನ್ನು ಇನ್ನಷ್ಟು ಬಿಗಿಗೊಳಿಸುವ ಭರವಸೆ ನೀಡಿದೆ.

# ಮಹಾರಾಷ್ಟ್ರದಲ್ಲಿ ಮರಾಠಿ ಕಡ್ಡಾಯ: ಫಡ್ನವೀಸ್



**ಮುಂಬೈ, ಏ.19:** ಮಹಾರಾಷ್ಟ್ರ ಸರ್ಕಾರವು ಎನ್‌ಇಪಿ 2020 ರ ಅಡಿಯಲ್ಲಿ ಹಿಂದಿಯನ್ನು ಮೂರನೇ ಭಾಷೆಯಾಗಿ ಕಡ್ಡಾಯಗೊಳಿಸಿದ ನಂತರ ಮುಖ್ಯಮಂತ್ರಿ ದೇವೇಂದ್ರ ಫಡ್ನವೀಸ್ ಶನಿವಾರ ಪ್ರತಿಕ್ರಿಯೆ ನೀಡಿದ್ದು, ಎಲ್ಲರೂ ಮರಾಠಿ ಕಲಿಯಬೇಕು. ಹೆಚ್ಚುವರಿ ಭಾಷೆಗಳನ್ನು ಕಲಿಯುವುದು ವೈಯಕ್ತಿಕ ಆಯ್ಕೆಯಾಗಿದೆ ಎಂದು ಪ್ರತಿಪಾದಿಸಿದರು.

ಮಾಧ್ಯಮಗಳೊಂದಿಗೆ ಮಾತನಾಡಿದ ಸಿಎಂ ಫಡ್ನವೀಸ್, ಹಿಂದಿಗೆ ವಿರೋಧ ಮತ್ತು ಇಂಗ್ಲಿಷ್‌ಗೆ ಹೆಚ್ಚುತ್ತಿರುವ ಆದ್ಯತೆಯ ಬಗ್ಗೆ ಆಶ್ಚರ್ಯ ವ್ಯಕ್ತಪಡಿಸಿ, ಮರಾಠಿಗೆ ಯಾವುದೇ ಸವಾಲನ್ನು ಸಹಿಸುವುದಿಲ್ಲ ಎಂದು ಎಚ್ಚರಿಸಿದರು. ಮಹಾರಾಷ್ಟ್ರದಲ್ಲಿ ಮರಾಠಿ ಭಾಷೆ ಕಡ್ಡಾಯವಾಗಿದೆ; ಎಲ್ಲರೂ ಅದನ್ನು ಕಲಿಯಬೇಕು. ಹೆಚ್ಚುವರಿಯಾಗಿ, ನೀವು ಇತರ ಭಾಷೆಗಳನ್ನು ಕಲಿಯಲು ಬಯಸಿದರೆ, ಹಾಗೆ ಮಾಡಬಹುದು. ಹಿಂದಿ ಮತ್ತು ಇಂಗ್ಲಿಷ್ ಪ್ರಚಾರಕ್ಕೆ ವಿರೋಧವು ಆಶ್ಚರ್ಯಕರವಾಗಿದೆ. ಯಾರಾದರೂ ಮರಾಠಿಯನ್ನು ವಿರೋಧಿಸಿದರೆ, ಅದನ್ನು ಸಹಿಸಲಾಗುವುದಿಲ್ಲ ಎಂದು ಸಿಎಂ ಫಡ್ನವೀಸ್ ಹೇಳಿದರು.

ಇಂದು ಮುಂಜಾನೆ, ಕಾಂಗ್ರೆಸ್ ನಾಯಕ ವಿಜಯ್ ವಡೆಟ್ಟಿವಾರ್ ಈ ನಿರ್ಧಾರವನ್ನು ಬಲವಾಗಿ ವಿರೋಧಿಸಿದರು, ಸರ್ಕಾರವನ್ನು ಭಾಷೆಯನ್ನು ಹೇರಬಾರದು ಎಂದು ಕೇಳಿದರು. ಮಾಧ್ಯಮಗಳ ಜೊತೆ ಮಾತನಾಡಿದ ವಡೆಟ್ಟಿವಾರ್, ಬೇರೆ ಭಾಷೆ ಕಲಿಯುವುದನ್ನು ನೀವು ಐಚ್ಛಿಕವಾಗಿ ಇರಿಸಬಹುದು. ಆದರೆ, ನೀವು ಅದನ್ನು ಹೇರಲು ಸಾಧ್ಯವಿಲ್ಲ. ಯಾರ ಆಜ್ಞೆಯ ಮೇರೆಗೆ ನೀವು ಈ ಭಾಷೆಯನ್ನು ರಾಜ್ಯದ ಮೇಲೆ ಹೇರಲು ಪ್ರಯತ್ನಿಸುತ್ತಿದ್ದೀರಿ ಎಂದು ಕಾಂಗ್ರೆಸ್ ಮುಖಂಡರು ಕೇಳಿದರು. ನಾವು ಮರಾಠಿಯನ್ನು ನಮ್ಮ ಮಾತೃಭಾಷೆ ಎಂದು ಪರಿಗಣಿಸುತ್ತೇವೆ, ಪರಿಚಯಿಸಲಾಗುತ್ತಿರುವ ಈ ಮೂರನೇ ಭಾಷೆಯನ್ನು ತರಬಾರದು. ಮರಾಠಿ ಜನರ ಹಕ್ಕುಗಳ ವಿರುದ್ಧ ಯಾವುದೇ ಬಲವಂತ ಇರಬಾರದು. ಇದು ನಮ್ಮ ಬೇಡಿಕೆ ಎಂದು ವಡೆಟ್ಟಿವಾರ್ ಹೇಳಿದರು. ರಾಷ್ಟ್ರೀಯ ಶಿಕ್ಷಣ ನೀತಿ 2020 ರ ಪ್ರಕಾರ, ಮಹಾರಾಷ್ಟ್ರ ಸರ್ಕಾರವು ಎಲ್ಲಾ ರಾಜ್ಯ ಮಂಡಳಿ ಶಾಲೆಗಳಲ್ಲಿ ಮರಾಠಿ ಮತ್ತು ಇಂಗ್ಲಿಷ್ ಜೊತೆಗೆ 1 ನೇ ತರಗತಿಯಿಂದ ಹಿಂದಿಯನ್ನು ಮೂರನೇ ಭಾಷೆಯಾಗಿ ಕಲಿಸುವುದನ್ನು ಕಡ್ಡಾಯಗೊಳಿಸಿದೆ. ಮಹಾರಾಷ್ಟ್ರದ ರಾಜ್ಯ ಶೈಕ್ಷಣಿಕ ಸಂಶೋಧನೆ ಮತ್ತು ತರಬೇತಿ ಮಂಡಳಿಯ ನಿರ್ದೇಶಕ ರಾಹುಲ್ ಅಶೋಕ್ ರೇಖಾವರ್ ಗುರುವಾರ ಶಾಲಾ ಶಿಕ್ಷಣ ಇಲಾಖೆಯು ಏ.16ರಂದು ಈ ನಿರ್ಧಾರವನ್ನು ತೆಗೆದುಕೊಂಡಿದೆ ಎಂದು ತಿಳಿಸಿದ್ದಾರೆ.

ಮಹಾರಾಷ್ಟ್ರ ಸರ್ಕಾರದ ಪರವಾಗಿ, ಶಾಲಾ ಶಿಕ್ಷಣ ಇಲಾಖೆಯು ರಾಜ್ಯ ಮಂಡಳಿಯ ಎಲ್ಲಾ ಶಾಲೆಗಳಲ್ಲಿ 1ನೇ ತರಗತಿಯಿಂದ ಮರಾಠಿ ಮತ್ತು ಇಂಗ್ಲಿಷ್ ಜೊತೆಗೆ ಹಿಂದಿ ಭಾಷೆಯನ್ನು ಕಲಿಸುವುದನ್ನು ಕಡ್ಡಾಯಗೊಳಿಸುವ ನಿರ್ಧಾರವನ್ನು ತೆಗೆದುಕೊಂಡಿದೆ. ಎಲ್ಲಾ ನೇಮಕಾತಿಗಳು ಮತ್ತು ಅವುಗಳ ಅಭಿವೃದ್ಧಿಯನ್ನು ಗಮನದಲ್ಲಿಟ್ಟುಕೊಂಡು ಈ ನಿರ್ಧಾರವನ್ನು ತೆಗೆದುಕೊಳ್ಳಲಾಗಿದೆ. ವಿದ್ಯಾರ್ಥಿಗಳು ಖಂಡಿತವಾಗಿಯೂ ಇದರಿಂದ ಪ್ರಯೋಜನ ಪಡೆಯುತ್ತಾರೆ ಎಂದು ರೇಖಾವರ್ ತಿಳಿಸಿದರು.

## ಮೈತ್ರಿ ಸುಳಿವು ನೀಡಿದ ಉದ್ಧವ್, ರಾಜ್ ಠಾಕ್ರೆ ಸಹೋದರರು

# ಜನರ ಹಿತಾಸಕ್ತಿಗಾಗಿ ಭಿನ್ನಾಭಿಪ್ರಾಯ ಬದಿಗಿಡಲು ಸಿದ್ಧ



**ಮುಂಬೈ,ಏ.19:** ಮಹಾರಾಷ್ಟ್ರ ಮತ್ತು ಮರಾಠಿ ಜನರ ಹಿತಾಸಕ್ತಿಗಾಗಿ ತಮ್ಮ ನಡುವಿನ ಭಿನ್ನಾಭಿಪ್ರಾಯಗಳನ್ನು ಬದಿಗಿಟ್ಟು ಒಟ್ಟಾಗಿ ಬರಲು ಸಿದ್ಧರಿದ್ದೇವೆ ಎಂದು ಮಹಾರಾಷ್ಟ್ರ ನವನಿರ್ಮಾಣ ಸೇನೆ ಮುಖ್ಯಸ್ಥ ರಾಜ್ ಠಾಕ್ರೆ ಮತ್ತು ಶಿವಸೇನೆ (ಮುಖ್ಯಸ್ಥ ಉದ್ಧವ್ ಠಾಕ್ರೆ ಹೇಳಿದ್ದಾರೆ. ಪ್ರತ್ಯೇಕ ಕಾರ್ಯಕ್ರಮಗಳಲ್ಲಿ ನೀಡಿರುವ ಈ ಹೇಳಿಕೆ ಮಹಾರಾಷ್ಟ್ರ ರಾಜಕೀಯದಲ್ಲಿ ಸಂಚಲನ ಮೂಡಿಸಿದೆ.

ಚಲನಚಿತ್ರ ನಿರ್ಮಾಪಕ ಮಹೇಶ್ ಮಂಜ್ರೇಕರ್ ಅವರೊಂದಿಗಿನ ಪಾಡ್‌ಕಾಸ್ಟ್‌ನಲ್ಲಿ ಕೇಳಿದ ಪ್ರಶ್ನೆಗೆ ರಾಜ್ ಠಾಕ್ರೆ ಉತ್ತರಿಸುತ್ತಾ, ಮಹಾರಾಷ್ಟ್ರದ ಹಿತಾಸಕ್ತಿಗಾಗಿ ಸಣ್ಣ ವಿವಾದಗಳನ್ನು ಬದಿಗಿಡಬಹುದು, ಶಿವಸೇನೆ ಮುಖ್ಯಸ್ಥ ಉದ್ಧವ್ ಠಾಕ್ರೆ ಸಿದ್ಧರಿದ್ದರೆ ಅವರೊಂದಿಗೆ ಕೆಲಸ ಮಾಡಬಹುದು ಎಂದು ಹೇಳಿದರು. ಠಾಕ್ರೆ ಸಹೋದರರು ಇಬ್ಬರೂ ಒಟ್ಟಿಗೆ ಬಂದರೆ ಎಂಬ ಮಂಜ್ರೇಕರ್ ಅವರ ಪ್ರಶ್ನೆಗೆ ಉತ್ತರಿಸಿದ ರಾಜ್ ಠಾಕ್ರೆ, ನನಗೆ ಮಹಾರಾಷ್ಟ್ರದ ಹಿತಾಸಕ್ತಿ ದೊಡ್ಡದು ಮತ್ತು ಉಳಿದೆಲ್ಲವೂ ಅದರ ಮುಂದೆ ಗೌಣ. ಅದಕ್ಕಾಗಿ ನಾನು ಸಣ್ಣಪುಟ್ಟ ವಿವಾದಗಳನ್ನು ಬದಿಗಿಡಬಹುದು ಮತ್ತು ನಾನು ಉದ್ಧವ್ ಜೊತೆ ಕೆಲಸ ಮಾಡಲು ಸಿದ್ಧನಿದ್ದೇನೆ. ಅವರು ಕೂಡ ಅದಕ್ಕೆ ಸಿದ್ಧರಿದ್ದಾರೆಯೇ ಎಂದು ಮರು ಪ್ರಶ್ನಿಸಿದ್ದಾರೆ.

ತಮ್ಮ ಪಕ್ಷದ ಟ್ರೇಡ್ ಯೂನಿಯನ್ ವಿಭಾಗವಾದ ಭಾರತೀಯ ಕಾಮಗಾರ್ ಸೇನಾದ ಸಮಾರಂಭದಲ್ಲಿ ಮಾತನಾಡಿದ ಉದ್ಧವ್ ಠಾಕ್ರೆ, ಮರಾಠಿ ಭಾಷೆ ಮತ್ತು ಮಹಾರಾಷ್ಟ್ರಕ್ಕಾಗಿ ವಿವಾದಗಳನ್ನು ಬದಿಗಿಡಲು ನಾನು ಸಿದ್ಧ ಎಂದು ಹೇಳಿದ್ದಾರೆ. ಆದಾಗ್ಯೂ, ಆ ಸಂದರ್ಭದಲ್ಲಿ ರಾಜ್ ಠಾಕ್ರೆ ಮಹಾರಾಷ್ಟ್ರ ವಿರೋಧಿಗಳು ಅಥವಾ ಅಂತಹ ಪಕ್ಷಗಳಿಗೆ ಕೆಲಸ ಮಾಡುವವರೊಂದಿಗೆ ಸಹವಾಸ ಮಾಡಬಾರದು ಎಂಬ ಷರತ್ತನ್ನು ಹಾಕಿದ್ದಾರೆ. ನಾನು ಕೂಡ ಮರಾಠಿ ಭಾಷೆ ಮತ್ತು ಮಹಾರಾಷ್ಟ್ರಕ್ಕಾಗಿ ಸಣ್ಣಪುಟ್ಟ ವಿವಾದಗಳನ್ನು ಬದಿಗಿಡಲು ಸಿದ್ಧನಿದ್ದೇನೆ. ನಾನು ಒಟ್ಟಾಗಿ ಕೆಲಸ ಮಾಡಲು ಸಿದ್ಧನಿದ್ದೇನೆ ಆದರೆ ರಾಜ್ ಠಾಕ್ರೆ ಇನ್ನು ಮುಂದೆ ಮಹಾರಾಷ್ಟ್ರ ವಿರೋಧಿ ಜನರು ಮತ್ತು ಪಕ್ಷಗಳನ್ನು ಆಯೋಜಿಸಬಾರದು ಮತ್ತು ಛತ್ರಪತಿ ಶಿವಾಜಿ ಮಹಾರಾಜರ ಮುಂದೆ ಪ್ರಮಾಣವಚನ ಸ್ವೀಕರಿಸಬೇಕು ಎಂದು ಹೇಳಿದ್ದಾರೆ. ಈ ಹೇಳಿಕೆಗಳು ಭವಿಷ್ಯಸಲ್ಲಿ ಠಾಕ್ರೆ ಸಹೋದರರು ಒಂದಾಗುವ ಸುಳಿವು ನೀಡಿದೆ.

ಇದಕ್ಕೂ ಮೊದಲು ಕಳೆದ ಫೆಬ್ರವರಿಯಲ್ಲಿ ಮುಂಬೈನ ಅಂಧೇರಿಯಲ್ಲಿ ನಡೆದ ವಿವಾಹ ಸಮಾರಂಭವೊಂದರಲ್ಲಿ ಉದ್ಧವ್ ಮತ್ತು ರಾಜ್ ಠಾಕ್ರೆ ಒಟ್ಟಿಗೆ ಕಾಣಿಸಿಕೊಂಡಿದ್ದರು. ಈ ಭೇಟಿಯ ಚಿತ್ರಗಳು ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದ್ದವು, ಇದು ರಾಜಕೀಯ ಸಮೀಕರಣಗಳಲ್ಲಿ ಬದಲಾವಣೆಯ ಸಂಕೇತವೆಂದು ರಾಜಕೀಯ ವಿಶ್ಲೇಷಕರು ಭಾವಿಸಿದ್ದರು. ಈಗ ರಾಜ್ ಠಾಕ್ರೆಯ ಇತ್ತೀಚಿನ ಹೇಳಿಕೆಯು ಆ ಊಹಾಪೋಹಗಳಿಗೆ ಪುಷ್ಠಿ ನೀಡಿವೆ.

# ಜಾತ್ಯತೀತ, ಎಲ್ಲರನ್ನೂ ಒಳಗೊಂಡ ಭಾರತಕ್ಕೆ ನ್ಯಾಯಾಂಗವೇ ಕೊನೆಯ ಭರವಸೆ: ಮೆಹಬೂಬಾ



**ಶ್ರೀನಗರ, ಏ.19:** ಭಾರತೀಯ ಸಂವಿಧಾನದ ಜಾತ್ಯತೀತ ಮತ್ತು ಎಲ್ಲರನ್ನೂ ಒಳಗೊಂಡ ಮನೋಭಾವವನ್ನು ಎತ್ತಿಹಿಡಿಯುವ ಸಾಮರ್ಥ್ಯವಿರುವ ಕೊನೆಯ ಮತ್ತು ಅತ್ಯಂತ ನಿರ್ಣಾಯಕ ಸಂಸ್ಥೆ ನ್ಯಾಯಾಂಗವಾಗಿದೆ ಎಂದು ಜಮ್ಮು ಮತ್ತು ಕಾಶ್ಮೀರದ ಮಾಜಿ ಮುಖ್ಯಮಂತ್ರಿ ಮತ್ತು ಪೀಪಲ್ಸ್ ಡೆಮಾಕ್ರಟಿಕ್ ಪಕ್ಷದ ಮುಖ್ಯಸ್ಥೆ ಮೆಹಬೂಬಾ ಮುಫ್ತಿ ಶನಿವಾರ ಹೇಳಿದ್ದಾರೆ.

ನಾಸಿಕ್‌ನ ಹಜರತ್ ಸಾತ್ಪೀರ್ ಸಯೀದ್ ಬಾಬಾ ದರ್ಗಾ ಧ್ವಂಸ ನೋಟಿಸ್‌ಗೆ ಸುಪ್ರೀಂ ತಡೆ ನೀಡಿದ ಒಂದು ದಿನದ ನಂತರ ಅವರು ಈ ಹೇಳಿಕೆ ನೀಡಿದ್ದಾರೆ, "ಬಾಂಬೆ ಹೈಕೋರ್ಟ್ ಪ್ರಕರಣದ ವಿಚಾರಣೆಗೆ ಸಮಯವನ್ನು ನಿಗದಿಪಡಿಸಲು ವಿಫಲವಾದ ಹಿನ್ನೆಲೆಯಲ್ಲಿ ನಾಸಿಕ್ ದರ್ಗಾ ಧ್ವಂಸಕ್ಕೆ ಸುಪ್ರೀಂ ಕೋರ್ಟ್ನ ತಡೆ ಬಂದಿತು. ಈ ವಿಳಂಬವು ಸ್ಥಳೀಯ ಆಡಳಿತವು ದರ್ಗಾದ ಒಂದು ಭಾಗವನ್ನು ಕೆಡವಲು ಪ್ರಾರಂಭಿಸಲು ಅವಕಾಶ ಮಾಡಿಕೊಟ್ಟಿತು, ಇದು ಆ ಪ್ರದೇಶದಲ್ಲಿ ಉದ್ವಿಗ್ನತೆ ಮತ್ತು ಘರ್ಷಣೆಗಳಿಗೆ ಕಾರಣವಾಯಿತು" ಎಂದು ಮುಫ್ತಿ ತಿಳಿಸಿದ್ದಾರೆ.

ಪಿಡಿಪಿ ಅಧ್ಯಕ್ಷರು ಈ ದರ್ಗಾಗಳು ಕೇವಲ ಭೌತಿಕ ರಚನೆಗಳಲ್ಲ – ಅವು ಹಿಂದೂಗಳು ಮತ್ತು ಮುಸ್ಲಿಮರು ಇಬ್ಬರೂ ಹಂಚಿಕೊಂಡ ಭಕ್ತಿಯಿಂದ ಒಟ್ಟಿಗೆ ಸೇರುವ ಆಧ್ಯಾತ್ಮಿಕ ಸ್ಥಳಗಳಾಗಿವೆ ಎಂದು ಹೇಳಿದರು.

"ಗೋಡ್ಸೆಯ ರಾಷ್ಟ್ರದ ದೃಷ್ಟಿಕೋನವನ್ನು ಪುನರುಜ್ಜೀವನಗೊಳಿಸಲು ಪ್ರಯತ್ನಿಸುತ್ತಿರುವ ವಿಭಜಕ ಮತ್ತು ಕೋಮುವಾದಿ ಶಕ್ತಿಗಳಿಂದ ಬೆದರಿಕೆಗೆ ಒಳಗಾಗುತ್ತಿರುವ ಕಲ್ಪನೆಯಾದ ವೈವಿಧ್ಯತೆಯಲ್ಲಿ ಏಕತೆ ಎಂಬ ಭಾರತದ ನೀತಿಗೆ ಅವು ಜೀವಂತ ಸಾಕ್ಷಿಯಾಗಿ ನಿಂತಿವೆ" ಎಂದು ಮೆಹಬೂಬಾ ಹೇಳಿದರು.

"ಈ ವಾತಾವರಣದಲ್ಲಿ, ನ್ಯಾಯಾಂಗವು ಬಹುಶಃ ಭಾರತೀಯ ಸಂವಿಧಾನದ ಜಾತ್ಯತೀತ ಮತ್ತು ಎಲ್ಲರನ್ನೂ ಒಳಗೊಳ್ಳುವ ಮನೋಭಾವವನ್ನು ಎತ್ತಿಹಿಡಿಯುವ ಸಾಮರ್ಥ್ಯವಿರುವ ಕೊನೆಯ ಮತ್ತು ಅತ್ಯಂತ ನಿರ್ಣಾಯಕ ಸಂಸ್ಥೆಯಾಗಿ ಉಳಿದಿದೆ. ಸುಪ್ರೀಂ ಕೋರ್ಟ್‌ನ ಸಕಾಲಿಕ ಕ್ರಮವು ನ್ಯಾಯ ಮತ್ತು ಬಹುತ್ವವನ್ನು ರಕ್ಷಿಸುವಲ್ಲಿ ಕಾನೂನಿನ ಆಳ್ವಿಕೆಯ ಪಾತ್ರವನ್ನು ಬಲಪಡಿಸುವ ಭರವಸೆಯನ್ನು ನೀಡುತ್ತದೆ" ಎಂದು ಅವರು ಹೇಳಿದರು.

# ಬಸ್ ಅಪಘಾತ: 25 ಮಂದಿಗೆ ಗಾಯ, ಮೂವರ ಸ್ಥಿತಿ ಗಂಭೀರ

**ಲಖನೌ,ಏ.19:** ನೇಪಾಳದ ಪೊಖಾರಾಕ್ಕೆ ಭಾರತೀಯ ಪ್ರವಾಸಿಗರನ್ನು ಕೊಂಡೊಯ್ಯುತ್ತಿದ್ದ ಬಸ್ ಒಂದು ಡಾಂಗ್ ಜಿಲ್ಲೆಯ ಚಿಸಾಪಾನಿಯಲ್ಲಿ ಅಪಘಾತಕ್ಕೀಡಾಗಿದೆ. ದುರ್ಘಟನೆಯಲ್ಲಿ 25 ಜನ ಗಾಯಗೊಂಡಿದ್ದು, ಮೂವರ ಸ್ಥಿತಿ ಗಂಭೀರವಾಗಿದೆ ಎಂದು ಪೊಲೀಸ್ ವರದಿಗಳು ತಿಳಿಸಿವೆ. ಪ್ರಾಥಮಿಕ ತನಿಖೆಯ ಪ್ರಕಾರ, ಬಸ್ನ ಬ್ರೇಕ್ ವಿಫಲವಾದ ಕಾರಣ ಚಾಲಕ ಗೋಡೆಗೆ ಡಿಕ್ಕಿ ಹೊಡೆದಿದ್ದಾನೆ. ಗಾಯಗೊಂಡ 25 ಪ್ರವಾಸಿಗರಲ್ಲಿ 19 ಜನರನ್ನು ಉತ್ತರ ಪ್ರದೇಶದ ತುಲಸೀಪುರದ ಸಮುದಾಯ ಆರೋಗ್ಯ ಕೇಂದ್ರಕ್ಕೆ ದಾಖಲಿಸಲಾಗಿದೆ. ಕೆಲವರಿಗೆ ಪ್ರಾಥಮಿಕ ಚಿಕಿತ್ಸೆ ನೀಡಿ ಬಿಡುಗಡೆ ಮಾಡಲಾಗಿದೆ, ಆದರೆ ಗಂಭೀರವಾಗಿ ಗಾಯಗೊಂಡ ಮೂವರನ್ನು ನೇಪಾಳದ ಆಸ್ಪತ್ರೆಯಲ್ಲಿ ಚಿಕಿತ್ಸೆಗಾಗಿ ಇರಿಸಲಾಗಿದೆ ಎಂದು ತುಲಸೀಪುರದ ಸರ್ಕಲ್ ಆಫೀಸರ್ ಬೃಜನಂದನ್ ರಾಯ್ ತಿಳಿಸಿದ್ದಾರೆ.




ಈ ಬಸ್ ಲಖನೌದಿಂದ ಪೊಖಾರಾಕ್ಕೆ ಪ್ರಯಾಣಿಸುತ್ತಿತ್ತು, ಮತ್ತು ಗಾಯಗೊಂಡವರಲ್ಲಿ ಹೆಚ್ಚಿನವರು ಉತ್ತರ ಪ್ರದೇಶದ ಲಕ್ನೋ, ಸೀತಾಪುರ, ಹರದೋಯ್ ಮತ್ತು ಬರಾಬಂಕಿ ಜಿಲ್ಲೆಗಳಿಗೆ ಸೇರಿದವರಾಗಿದ್ದಾರೆ. ಅಪಘಾತದ ಸುದ್ದಿ ತಿಳಿದ ಕೂಡಲೇ, ನೇಪಾಳದ ಗಢವಾ ಪೊಲೀಸರು ಸ್ಥಳಕ್ಕೆ ಧಾವಿಸಿ, ಗಾಯಾಳುಗಳನ್ನು ಸ್ಥಳೀಯ ಆರೋಗ್ಯ ಕೇಂದ್ರಕ್ಕೆ ದಾಖಲಿಸಿದರು. ಅಲ್ಲಿಂದ 19 ಜನರನ್ನು ತುಲಸೀಪುರಕ್ಕೆ ಸ್ಥಳಾಂತರಿಸಲಾಯಿತು.

ಸ್ಥಳೀಯ ಪೊಲೀಸರು ತನಿಖೆಯನ್ನು ಮುಂದುವರಿಸಿದ್ದು, ಚಾಲಕನ ಕಾರ್ಯಾಚರಣೆ ಮತ್ತು ಬಸ್ನ ಯಾಂತ್ರಿಕ ಸ್ಥಿತಿಯ ಬಗ್ಗೆ ವಿವರವಾದ ವರದಿಯನ್ನು ಸಿದ್ಧಪಡಿಸುತ್ತಿದ್ದಾರೆ.

# ಮಲಯಾಳಂ ನಟ ಚಾಕೊ ಬಂಧನ

**ತಿರುವನಂತಪುರ, ಏ. 19:** ಮಾದಕ ದ್ರವ್ಯ ಸೇವನೆ ಆರೋಪದ ಮೇಲೆ ಮಲಯಾಳಂ ನಟ ಶೈನ್ ಟಾಮ್ ಚಾಕೊ ಅವರನ್ನು ಕೇರಳ ಪೊಲೀಸರು ಶನಿವಾರ ಬಂಧಿಸಿದ್ದಾರೆ.

ಅಧಿಕಾರಿಗಳ ಪ್ರಕಾರ, ಶೈನ್ ಟಾಮ್ ವಿರುದ್ಧ ಮಾದಕ ದ್ರವ್ಯಗಳು ಮತ್ತು ಮನೋವಿಕೃತಿ ಪದಾರ್ಥಗಳ ಕಾಯ್ದೆಯ ಸೆಕ್ಷನ್ 27 (ಮಾದಕ ದ್ರವ್ಯಗಳು ಅಥವಾ ಮನೋವಿಕೃತಿ ಪದಾರ್ಥಗಳ ಸೇವನೆ) ಮತ್ತು 29 (ಪ್ರೇರಣೆ ಮತ್ತು ಕ್ರಿಮಿನಲ್ ಪಿತೂರಿ) ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿದೆ.



ಮುಂದಿನ ಕಾನೂನು ಕ್ರಮಗಳ ಜೊತೆಗೆ ಶೀಘ್ರದಲ್ಲೇ ಶೈನ್ ಟಾಮ್ ಅವರನ್ನು ವೈದ್ಯಕೀಯ ಪರೀಕ್ಷೆಗೆ ಒಳಪಡಿಸಲಾಗುವುದು ಎಂದು ಅಧಿಕಾರಿಗಳು ಹೇಳಿದ್ದಾರೆ. ಎರ್ನಾಕುಲಂ ಉತ್ತರ ಪೊಲೀಸರು ಎನ್ಡಿಪಿಎಸ್ ಕಾಯ್ದೆಯಡಿ ನಟನ ಬಂಧನವನ್ನು ಔಪಚಾರಿಕವಾಗಿ ದಾಖಲಿಸಿಕೊಂಡಿದ್ದು, ಜಾಮೀನು ನೀಡಬಹುದಾದ ಆರೋಪಗಳನ್ನು ಹೊರಿಸಲಾಗಿದೆ ಎಂದು ಮೂಲಗಳು ದೃಢಪಡಿಸಿವೆ ಎಂದು ಟೈಮ್ಸ್ ಆಫ್ ಇಂಡಿಯಾ ವರದಿ ಮಾಡಿದೆ.

ಎರ್ನಾಕುಲಂ ಉತ್ತರ ಪೊಲೀಸ್ ಠಾಣೆಯಲ್ಲಿ ತನಿಖಾ ತಂಡದ ಮುಂದೆ ವಿಚಾರಣೆಗೆ ಹಾಜರಾಗುವಂತೆ ಸೂಚಿಸಿ ಶೈನ್ ಟಾಮ್ ಅವರಿಗೆ ಕೊಚ್ಚಿ ನಗರ ಪೊಲೀಸರು ಸಮನ್ಸ್ ಜಾರಿ ಮಾಡಿದ್ದರು. ಶನಿವಾರ ಬೆಳಿಗ್ಗೆ 10 ಗಂಟೆ ಸುಮಾರಿಗೆ ಶೈನ್ ಟಾಮ್ ತಮ್ಮ ವಕೀಲರೊಂದಿಗೆ ಠಾಣೆಗೆ ತೆರಳಿದ್ದರು.

ಕಳೆದ ಬುಧವಾರ ರಾತ್ರಿ ಜಿಲ್ಲಾ ಮಾದಕ ದ್ರವ್ಯ ವಿರೋಧಿ ವಿಶೇಷ ಕಾರ್ಯಪಡೆ (ಡನ್ಸಾಫ್) ನಡೆಸಿದ ದಾಳಿಯ ಸಮಯದಲ್ಲಿ ಹೋಟೆಲ್ ಕಟ್ಟಡದ ಮೂರನೇ ಮಹಡಿಯ ಕೋಣೆಯ ಕಿಟಕಿಯಿಂದ ಹಾರಿ ಶೈನ್ ಟಾಮ್ ಚಾಕೊ ಪರಾರಿಯಾಗಿದ್ದರು. ಮೂರನೇ ಮಹಡಿಯಿಂದ ಎರಡನೇ ಮಹಡಿಗೆ ಬಳಿಕ ಈಜುಕೊಳಕ್ಕೆ ಹಾರಿ ಮೆಟ್ಟಿಲುಗಳ ಮೂಲಕ ಪರಾರಿಯಾಗಿದ್ದರು ಎಂಬ ಆರೋಪದ ಮೇಲೆ ಪೊಲೀಸರು ವಿಚಾರಣೆಗೆ ಒಳಪಡಿಸಿದ್ದರು. ಬಾಗಿಲಲ್ಲಿ ನಿಂತಿರುವುದು ಪೊಲೀಸ್ ಅಧಿಕಾರಿಗಳೆಂದು ತನಗೆ ತಿಳಿದಿರಲಿಲ್ಲ. ಅವರು ತನ್ನ ಮೇಲೆ ಹಲ್ಲೆ ಮಾಡಲು ಪ್ರಯತ್ನಿಸುತ್ತಿರುವ ದುಷ್ಕರ್ಮಿಗಳು ಎಂದು ಭಾವಿಸಿ ಪರಾರಿಯಾದೆ ಎಂದು ವಿಚಾರಣೆಯ ಸಮಯದಲ್ಲಿ ಚಾಕೊ ಹೇಳಿಕೊಂಡಿದ್ದಾರೆ ಎನ್ನಲಾಗಿದೆ. ತನಿಖೆಯ ಭಾಗವಾಗಿ, ಪೊಲೀಸರು ಚಾಕೊ ಅವರ ಕರೆ ದತ್ತಾಂಶ ದಾಖಲೆಗಳು ಮತ್ತು ಸಂದೇಶಗಳ ಇತಿಹಾಸವನ್ನು ಸಂಗ್ರಹಿಸಿದ್ದಾರೆ. ಎರ್ನಾಕುಲಂ ಕೇಂದ್ರ ಸಹಾಯಕ ಆಯುಕ್ತ ಸಿ ಜಯಕುಮಾರ್ ಮತ್ತು ನಾರ್ಕೋಟಿಕ್ ಸೆಲ್ ಸಹಾಯಕ ಆಯುಕ್ತ ಕೆ.ಎ ಅಬ್ದುಲ್ ಸಲಾಮ್ ನೇತೃತ್ವದ ತಂಡ ಚಾಕೊ ಅವರನ್ನು ವಿಚಾರಣೆಗೆ ನಡೆಸಿದೆ.

# 90 ವರ್ಷ ಹಳೆಯ ಜೈನ ದೇಗುಲ ಧ್ವಂಸ: ಪ್ರತಿಭಟನೆ

**ಮುಂಬೈ, ಏ.19:** ಮುಂಬೈನ ಬೃಹನ್ಮುಂಬೈ ಮುನ್ಸಿಪಲ್ ಕಾರ್ಪೊರೇಷನ್ (ಬಿಎಂಸಿ) ವಿಲೇ ಪಾರ್ಲೆ (ಪೂರ್ವ)ನಲ್ಲಿದ್ದ 90 ವರ್ಷ ಹಳೆಯದಾದ ದಿಗಂಬರ ಜೈನ ದೇವಾಲಯ ಶ್ರೀ 1008 ಪಾರ್ಶ್ವನಾಥ ದೇರಾಸರ್ ಅನ್ನು ಕಾನೂನುಬಾಹಿರಎಂದು ಆರೋಪಿಸಿ ಕೆಡವಿರುವುದು ಭಾರೀ ಆಕ್ರೋಶಕ್ಕೆ ಕಾರಣವಾಗಿದೆ.



ಬಿಎಂಸಿಯ ಕ್ರಮ ಖಂಡಿಸಿ ಶನಿವಾರ ಜೈನ ಸಮುದಾಯದ ಸಾವಿರಾರು ಮಂದಿ ಪ್ರತಿಭಟನೆ ನಡೆಸಿ ತಮ್ಮ ಆಕ್ರೋಶ ವ್ಯಕ್ತಪಡಿಸಿದರು. ಕೌಶಲ ಸಚಿವ ಮಂಗಲ್ ಪ್ರಭಾತ್ ಲೋಢಾ, ವಿಲೆಪಾರ್ಲೆ ಶಾಸಕ ಪರಾಗ್ ಅಲವಾನಿ, ಸಂಸದೆ ವರ್ಷಾ ಗಾಯಕ್ವಾಡ್ ಮತ್ತು ಘಾಟ್ಕೋಪರ್ ಶಾಸಕ ಪರಾಗ್ ಶಾ ಮತ್ತು ಜೈನ ಸಮುದಾಯದ ಸಂತರು ಬಿಎಂಸಿ ಕೆ/ಪೂರ್ವ ವಾರ್ಡ್ ಕಚೇರಿವರೆಗೆ ನಡೆದ ಪ್ರತಿಭಟನಾ ಮೆರವಣಿಗೆಯಲ್ಲಿ ಪಾಲ್ಗೊಂಡಿದ್ದರು.

ದೇವಾಲಯದ ತೆರವು ಸಂದರ್ಭದಲ್ಲಿ ಪಾಲಿಕೆ ಅಧಿಕಾರಿಗಳು ಮತ್ತು ಸಿಬ್ಬಂದಿ ಜೈನ ಸಮುದಾಯದ ಧಾರ್ಮಿಕ ವಸ್ತುಗಳನ್ನು ದುರುಪಯೋಗಪಡಿಸಿಕೊಂಡಿದ್ದಾರೆ ಎಂದು ಆರೋಪಿಸಲಾಗಿದೆ, ಅದರಲ್ಲಿ ಜೈನ ಸಮುದಾಯಕ್ಕೆ ಸೇರಿದ ಪವಿತ್ರ ಪುಸ್ತಕಗಳು ಮತ್ತು ವಸ್ತುಗಳು ಸೇರಿವೆ ಎಂದು ಹೇಳಲಾಗಿದೆ. ದೇವಾಲಯದ ವಿಷಯವು ಹಲವು ವರ್ಷಗಳಿಂದ ನ್ಯಾಯಾಲಯದಲ್ಲಿದ್ದು, ಸುಪ್ರೀಂ ಕೋರ್ಟ್ ತಲುಪಿದ್ದರೂ, ದೇವಾಲಯದ ಪರವಾಗಿ ಯಾವುದೇ ತೀರ್ಪು ಬಂದಿರಲಿಲ್ಲ. ಧ್ವಂಸವನ್ನು ತಡೆಯುವ ಪ್ರಯತ್ನದಲ್ಲಿ ಭಕ್ತರು ಕೊನೆಯ ಕ್ಷಣದಲ್ಲಿ ನ್ಯಾಯಾಲಯದ ಮೊರೆ ಹೋಗಿದ್ದರು. ಆದರೆ ಯಾವುದೇ ವಿಚಾರಣೆ ನಡೆಯುವ ಮೊದಲು, ಭಾರೀ ಪೊಲೀಸ್ ಭದ್ರತೆಯಲ್ಲಿ ದೇವಾಲಯ ಧ್ವಂಸಗೊಳಿಸಲಾಗಿದೆ.

ದೇವಾಲಯದ ಟ್ರಸ್ಟಿ ಅನಿಲ್ ಶಾ ಅವರ ಪ್ರಕಾರ, ದೇವಾಲಯವು 1935ರಿಂದ ಅಸ್ತಿತ್ವದಲ್ಲಿತ್ತು. ಮುಂಬೈ ಪಾಲಿಕೆಯ ನಿಯಮಗಳ ಪ್ರಕಾರ, 1961–62 ಕ್ಕಿಂತ ಮೊದಲು ನಿರ್ಮಿಸಲಾದ ರಚನೆಗಳನ್ನು ಕಾನೂನುಬದ್ಧವೆಂದು ಪರಿಗಣಿಸಲಾಗುತ್ತದೆ. ಅಧಿಕಾರಿಗಳು ದೇವಾಲಯವನ್ನು ಕೆಡವಲು ಪಿತೂರಿ ನಡೆಸಿದ್ದಾರೆ ಎಂದು ಅವರು ಆರೋಪಿಸಿದ್ದಾರೆ. ದೇವಾಲಯವು ಜೈನರ ನಂಬಿಕೆಯ ಸಂಕೇತವಾಗಿತ್ತು ಎಂದು ಅವರು ಹೇಳಿದ್ದಾರೆ. ದೇವಾಲಯ ಧ್ವಂಸಗೊಂಡಿದ್ದರೂ, ಭಕ್ತರು ಸ್ಥಳದಲ್ಲಿ ಪೂಜೆಯನ್ನು ಪುನರಾರಂಭಿಸಿದ್ದಾರೆ ಮತ್ತು ಕಾನೂನು ಮಾರ್ಗಗಳ ಮೂಲಕ ದೇವಾಲಯವನ್ನು ಪುನರ್ನಿರ್ಮಿಸುವ ಪ್ರತಿಜ್ಞೆ ಮಾಡಿದ್ದಾರೆ. ಧ್ವಂಸಗೊಳಿಸುವ ಸಮಯದಲ್ಲಿ, ಪ್ರತಿಭಟನಾ ನಿರತ ಭಕ್ತರನ್ನು ಚದುರಿಸಲು ಪೊಲೀಸರು ಲಾಠಿ ಚಾರ್ಜ್ (ಲಾಠಿ ಚಾರ್ಜ್) ನಡೆಸಿದ್ದಾರೆಂದು ವರದಿಯಾಗಿದೆ.

ಸುಪ್ರೀಂ ಕೋರ್ಟ್ ಕೆಳ ನ್ಯಾಯಾಲಯದಲ್ಲಿ ದಾಖಲೆಗಳನ್ನು ಹಾಜರುಪಡಿಸಲು ಎಂಟು ದಿನಗಳ ಕಾಲಾವಕಾಶ ನೀಡಿದ್ದರೂ, ಪಾಲಿಕೆಯು ಬುಧವಾರ ಮುಂಜಾನೆ ಸಣ್ಣ ಸೂಚನೆ ನೀಡಿ ದೇವಾಲಯ ಕಡೆವಿದೆ ಎಂದು ಟ್ರಸ್ಟಿ ಅನಿಲ್ ಶಾ ಆರೋಪಿಸಿದ್ದಾರೆ. ವಿಲೇ ಪಾರ್ಲೆ ಶಾಸಕ ಪರಾಗ್ ಅಲವಾನಿ ಅವರು ದೇವಾಲಯ ತೆರವುಗೊಳಿಸುವ ಪ್ರಕ್ರಿಯೆ ಮುಂದೂಡುವಂತೆ ಮತ್ತು ನ್ಯಾಯಾಲಯದ ವಿಚಾರಣೆಗೆ ಸಮಯಾವಕಾಶ ನೀಡುವಂತೆ ವಿನಂತಿಸಿದ್ದರು. ಆದರೆ, ಬಿಎಂಸಿ ದೇವಾಲಯವನ್ನು ಕಾನೂನುಬಾಹಿರವೆಂದು ಘೋಷಿಸಿದ ನ್ಯಾಯಾಲಯದ ಈ ಹಿಂದಿನ ಆದೇಶಗಳನ್ನು ಉಲ್ಲೇಖಿಸಿ ತೆರವು ಕಾರ್ಯಾಚರಣೆ ಮುಂದುವರೆಸಿದೆ ಎಂದು ವರದಿಗಳು ಹೇಳಿವೆ.

ಕಾನೂನು ಪ್ರಕಾರವೇ ದೇವಾಲಯದ ತೆರವು ಕಾರ್ಯಾಚರಣೆ ನಡೆಸಲಾಗಿದೆ. ಈ ವಿವಾದವು ಕಳೆದ 20 ವರ್ಷಗಳಿಂದ ನಗರ ಸಿವಿಲ್ ನ್ಯಾಯಾಲಯ, ಹೈಕೋರ್ಟ್ ಮತ್ತು ಸುಪ್ರೀಂ ಕೋರ್ಟ್‌ನಲ್ಲಿದೆ. ನ್ಯಾಯಾಲಯ ದೇವಾಲಯ ತೆರವಿಗೆ ಯಾವುದೇ ತಡೆಯನ್ನು ನೀಡಿಲ್ಲ. ಶಿಷ್ಟಾಚಾರದ ಪ್ರಕಾರ ಧ್ವಂಸ ಕಾರ್ಯಾಚರಣೆ ಕೈಗೊಳ್ಳಲಾಗಿದೆ ಎಂದು ಬಿಎಂಸಿಯ ಕೆ ಪೂರ್ವ ವಾರ್ಡ್ ಅಧಿಕಾರಿಗಳು ಹೇಳಿದ್ದಾರೆ.

# ಕಾರ್ಮಿಕರ ಉಗುರು ಕಿತ್ತು ವಿದ್ಯುತ್ ಶಾಕ್ ನೀಡಿ ಚಿತ್ರಹಿಂಸೆ

**ರಾಯ್ಪುರ, ಏ.19:** ಕಳ್ಳತನದ ಶಂಕೆ ಮೇಲೆ ಐಸ್ಕ್ರೀಮ್ ಫ್ಯಾಕ್ಟರಿ ಮಾಲೀಕ ಮತ್ತು ಆತನ ಸಹಾಯಕ ಇಬ್ಬರು ಕಾರ್ಮಿಕರಿಗೆ ವಿದ್ಯುತ್ ಶಾಕ್ ಕೊಟ್ಟು, ಉಗುರು ಕಿತ್ತು ಚಿತ್ರಹಿಂಸೆ ನೀಡಿರುವ ಘಟನೆ ಛತ್ತೀಸ್‌ಗಢದ ಕೊರ್ಬಾ ಜಿಲ್ಲೆಯಲ್ಲಿ ನಡೆದಿದೆ.

ರಾಜಸ್ಥಾನದ ಭಿಲ್ವಾರಾ ಜಿಲ್ಲೆಯವರಾದ ಅಭಿಷೇಕ್ ಭಂಬಿ ಮತ್ತು ವಿನೋದ್ ಭಂಬಿ ದೌರ್ಜನ್ಯಕ್ಕೊಳಗಾದ ಕಾರ್ಮಿಕರು. ಇವರನ್ನು ಛತ್ತೀಸ್ಗಢದ ಕೊರ್ಬಾ ಜಿಲ್ಲೆಯ ಸಿವಿಲ್ ಲೈನ್ಸ್ ಪೊಲೀಸ್ ಠಾಣೆ ವ್ಯಾಪ್ತಿಯ ಖಪ್ರಭಟ್ಟಿ ಪ್ರದೇಶದ ಐಸ್ಕ್ರೀಮ್ ಫ್ಯಾಕ್ಟರಿಯಲ್ಲಿ ಕೆಲಸ ಮಾಡಲು ಗುತ್ತಿಗೆದಾರರ ಮೂಲಕ ನೇಮಿಸಿಕೊಳ್ಳಲಾಗಿತ್ತು ಎಂದು ವರದಿಯಾಗಿದೆ.




ಏಪ್ರಿಲ್ 14 ರಂದು ಫ್ಯಾಕ್ಟರಿ ಮಾಲೀಕ ಭೋಟು ಗುರ್ಜರ್ ಮತ್ತು ಆತನ ಸಹಾಯಕ ಮುಖೇಶ್ ಶರ್ಮಾ ಕಾರ್ಮಿಕರ ಮೇಲೆ ಕಳ್ಳತನದ ಆರೋಪ ಹೊರಿಸಿದ್ದಾರೆ. ಬಳಿಕ ಇಬ್ಬರನ್ನೂ ವಿವಸ್ತ್ರಗೊಳಿಸಿ, ವಿದ್ಯುತ್ ಶಾಕ್ ನೀಡಿ, ಉಗುರುಗಳನ್ನು ಕಿತ್ತಿದ್ದಾರೆ. ಕಾರ್ಮಿಕರಿಗೆ ಚಿತ್ರಹಿಂಸೆ ನೀಡಿದ ವಿಡಿಯೋ ವೈರಲ್ ಆಗಿದೆ. ಅದರಲ್ಲಿ ಅರೆನಗ್ನ ವ್ಯಕ್ತಿಗೆ ವಿದ್ಯುತ್ ಶಾಕ್ ನೀಡಿ ಥಳಿಸಿದ ದೃಶ್ಯವಿದೆ ಎಂದು ಪೊಲೀಸರು ಹೇಳಿದ್ದಾಗಿ ವರದಿಗಳು ತಿಳಿಸಿವೆ.

ದೌರ್ಜನ್ಯಕ್ಕೊಳಗಾದ ಕಾರ್ಮಿಕರು ತಪ್ಪಿಸಿಕೊಂಡು ಹೋಗಿ ತಮ್ಮ ಊರಾದ ಭಿಲ್ವಾರ ತಲುಪುವಲ್ಲಿ ಯಶಸ್ವಿಯಾಗಿದ್ದರು. ಬಳಿಕ ಅವರು ಅಲ್ಲಿನ ಗುಲಾಬ್ಪುರ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ. ರಾಜಸ್ಥಾನ ಪೊಲೀಸರು ಝೀರೋ ಎಫ್ಐಆರ್ ದಾಖಲಿಸಿ, ಮುಂದಿನ ಕ್ರಮಕ್ಕಾಗಿ ಪ್ರಕರಣವನ್ನು ಕೊರ್ಬಾ ಪೊಲೀಸರಿಗೆ ವರ್ಗಾಯಿಸಿದ್ದರು. ಝೀರೋ ಎಫ್ಐಆರ್ ಅಡಿಯಲ್ಲಿ, ಅಪರಾಧದ ಸ್ಥಳವನ್ನು ಲೆಕ್ಕಿಸದೆ ಯಾವುದೇ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಬಹುದು.

ಕೊರ್ಬಾದ ಸಿವಿಲ್ ಲೈನ್ಸ್ ಪೊಲೀಸ್ ಠಾಣೆಯಲ್ಲಿ ಐಸ್ಕ್ರೀಮ್ ಫ್ಯಾಕ್ಟರಿ ಮಾಲೀಕರಾದ ಗುರ್ಜರ್ ಮತ್ತು ಶರ್ಮಾ ವಿರುದ್ಧ ಪ್ರಕರಣ ದಾಖಲಾಗಿದೆ. ಹಲ್ಲೆಗೊಳಗಾದ ಕಾರ್ಮಿಕರಲ್ಲಿ ಒಬ್ಬರಾದ ಅಭಿಷೇಕ್ ಭಂಬಿ, ತನ್ನ ವಾಹನ ದುರಸ್ಥಿಗೆ ಮಾಲೀಕನಿಂದ 20,000 ರೂ. ಹಣವನ್ನು ಮುಂಗಡವಾಗಿ ಕೇಳಿದ್ದರು.

ಮಾಲೀಕ ನಿರಾಕರಿಸಿದಾಗ, ಅಭಿಷೇಕ್ ಕೆಲಸ ಬಿಡುವ ಇಚ್ಛೆಯನ್ನು ವ್ಯಕ್ತಪಡಿಸಿದ್ದರು. ಇದರಿಂದ ಕೋಪಗೊಂಡ ಮಾಲೀಕ ಮತ್ತು ಆತನ ಸಹಾಯಕ ಇಬ್ಬರೂ ಕಾರ್ಮಿಕರ ಮೇಲೆ ಹಲ್ಲೆ ನಡೆಸಿದ್ದಾರೆ ಎಂದು ಆರೋಪಿಸಲಾಗಿದೆ. ಪ್ರಕರಣದಲ್ಲಿ ಇಲ್ಲಿಯವರೆಗೆ ಯಾರನ್ನೂ ಬಂಧಿಸಲಾಗಿಲ್ಲ. ಹೆಚ್ಚಿನ ತನಿಖೆ ನಡೆಯುತ್ತಿದೆ ಎಂದು ಸಿವಿಲ್ ಲೈನ್ಸ್ ಪೊಲೀಸ್ ಠಾಣೆಯ ಸ್ಟೇಷನ್ ಹೌಸ್ ಆಫೀಸರ್ ಪ್ರಮೋದ್ ದಾಡ್ಸೇನ ಹೇಳಿದ್ದಾಗಿ ವರದಿ ಹೇಳಿದೆ.



ಕತಾರ್‌ನ ದೋಹಾದಲ್ಲಿ ನಡೆದ 17ನೇ ಎಫ್‌ಐಜಿ ಆರ್ಟಿಸ್ಟಿಕ್ ಜಿಮ್ನಾಸ್ಟಿಕ್ಸ್ ವಿಶ್ವಕಪ್‌ನಲ್ಲಿ ಪುರುಷರ ಪೊಮ್ಮೆಲ್ ಹಾರ್ಸ್ ಫೈನಲ್‌ನ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಚಿನ್ನದ ಪದಕ ವಿಜೇತ ಅರ್ಮೇನಿಯಾದ ಹ್ಯಾಮ್ಲೆಟ್ ಮನುಕ್ಯಾನ್, ಬೆಳ್ಳಿ ಪದಕ ವಿಜೇತ ಚೀನಾದ ಹಾಂಗ್ ಯಾನ್ಮಿಂಗ್ ಮತ್ತು ಕಂಚಿನ ಪದಕ ವಿಜೇತ ಕಜಕಿಸ್ತಾನದ ನಾರಿಮನ್ ಕುರ್ಬನೋವ್ ಫೋಟೋಗಳಿಗೆ ಪೋಸ್ ನೀಡಿದರು.

# ಆಜಾನ್ ಕೂಗುವ ಬಗ್ಗೆ ಬಿಜೆಪಿ ಸಂಸದೆಯಿಂದ ಬೆದರಿಕೆ

**ಪುಣೆ, ಏ.19:** ಮಹಾರಾಷ್ಟ್ರದ ಪುಣೆ ಜಿಲ್ಲೆಯಲ್ಲಿ ಹನುಮಾನ್ ಜಯಂತಿ ಆಚರಣೆಯ ಸಂದರ್ಭದಲ್ಲಿ ಭಾರತೀಯ ಜನತಾ ಪಕ್ಷದ (ಬಿಜೆಪಿ) ಸಂಸದೆ ಮೇಧಾ ಕುಲಕರ್ಣಿ ಮುಸ್ಲಿಂ ಧಾರ್ಮಿಕ ಸ್ಥಳದ ಟ್ರಸ್ಟಿಗಳಿಗೆ ಬೆದರಿಕೆ ಹಾಕಿ, ಆಜಾನ್ (ಇಸ್ಲಾಮಿಕ್ ಪ್ರಾರ್ಥನೆ ಕರೆ) ತಡೆಯಲು ಪ್ರಯತ್ನಿಸಿದ್ದಾರೆ ಎಂದು ಆರೋಪಿಸಲಾಗಿದೆ.

ಬಿಜೆಪಿ ಸಂಸದೆ ಮತ್ತು ಮುಸ್ಲಿಂ ಸದಸ್ಯರ ನಡುವಿನ ವಾಗ್ವಾದದ ವೀಡಿಯೊ ಸಾಮಾಜಿಕ ಮಾಧ್ಯಮ ವೇದಿಕೆಗಳಲ್ಲಿ ವೈರಲ್ ಆಗಿದೆ. ಈ ಘಟನೆ ಏಪ್ರಿಲ್ 12 ರಂದು ಪುಣ್ಯೇಶ್ವರ ದೇವಸ್ಥಾನ ಮತ್ತು ಶೇಖ್ ಸಲಾಹುದ್ದೀನ್ ದರ್ಗಾ ಬಳಿ ಸಂಭವಿಸಿದೆ. ವಿಡಿಯೋದಲ್ಲಿ, ಕೇಸರಿ ಶಾಲು ಧರಿಸಿ ತಮ್ಮ ಬೆಂಬಲಿಗರೊಂದಿಗೆ ಮುಸ್ಲಿಂ ಸಮುದಾಯದ ಸದಸ್ಯರನ್ನು ಸಮೀಪಿಸುತ್ತಿರುವ ಸಂಸದೆ ಕುಲಕರ್ಣಿ ಕಾಣಿಸಿಕೊಳ್ಳುತ್ತಿದ್ದಾರೆ. ಧ್ವನಿವರ್ಧಕದಲ್ಲಿ ಹೆಚ್ಚಿನ ಶಬ್ದದಲ್ಲಿ ಆಜಾನ್ ನುಡಿಸಲಾಗುತ್ತಿದೆ ಎಂದು ಅವರು ಆರೋಪಿಸಿದ್ದಾರೆ.

ಶೇಖ್ ಸಲಾಹುದ್ದೀನ್ ದರ್ಗಾದ ಟ್ರಸ್ಟಿಗಳು ಬಿಜೆಪಿ ಸಂಸದರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕೆಂದು ಒತ್ತಾಯಿಸಿದ್ದಾರೆ. ಆದರೂ, ಕುಲಕರ್ಣಿ ಆರೋಪಗಳನ್ನು ತೀವ್ರವಾಗಿ ನಿರಾಕರಿಸಿದ್ದಾರೆ. ಹೇಳಿಕೆಗಳು ತಪ್ಪು ಎಂದು ಸಾಬೀತಾದರೆ ಆರೋಪ ಮಾಡಿದವರ ವಿರುದ್ಧ ಮಾನನಷ್ಟ ಮೊಕದ್ದಮೆ ಹೂಡುವುದಾಗಿ ಬೆದರಿಕೆ ಹಾಕಿದ್ದಾರೆ. ?ಆರತಿ ಮತ್ತು ಹನುಮಾನ್ ಪ್ರಾರ್ಥನೆಗಳು ನಡೆಯುತ್ತಿರುವಾಗ, ಪಕ್ಕದ ದರ್ಗಾದಲ್ಲಿ ಅಜಾನ್ ಜೋರಾಗಿ ನುಡಿಸಲಾಯಿತು. ನಮ್ಮ ಆಚರಣೆಗಳು ನಡೆಯುತ್ತಿರುವುದರಿಂದ ನಾವು ಅವರ ಧ್ವನಿಯನ್ನು ಕಡಿಮೆ ಮಾಡಲು ವಿನಂತಿಸಿದ್ದೇವೆ. ಆದರೆ, ಅವರು ನನ್ನೊಂದಿಗೆ ವಾದಿಸಿದರು, ಎಂದು ಕುಲಕರ್ಣಿ ಅವರನ್ನು ಉಲ್ಲೇಖಿಸಿ ಸ್ಥಳೀಯ ಮಾಧ್ಯಮಗಳು ವರದಿ ಮಾಡಿವೆ.



ವಿವಾದದ ನಂತರ ನಾನು ಪ್ರಯಾಣಿಸುತ್ತಿದ್ದೆ, ನಂತರದ ಬೆಳವಣಿಗೆಗಳ ಬಗ್ಗೆ ನನಗೆ ತಿಳಿದಿರಲಿಲ್ಲ. ಆದರೆ, ಘಟನೆಯ ವೀಡಿಯೊಗಳು ವೈರಲ್ ಆಗಿವೆ ಎಂದು ತಿಳಿದುಬಂದಿದೆ. ಆ ಕ್ಲಿಪ್‌ಗಳಲ್ಲಿ, ಜೋರಾದ ಶಬ್ದದಿಂದಾಗಿ ನಾನು ನನ್ನ ಕಿವಿಗಳನ್ನು ಮುಚ್ಚಿಕೊಂಡಿರುವುದು ಗೋಚರಿಸುತ್ತದೆ. ನಾನು ಅವರ ಧ್ವನಿಯನ್ನು ಕಡಿಮೆ ಮಾಡಲು ವಿನಂತಿಸಿದೆ. ಆದರೆ, ಅವರು ವಾದಿಸಿದರು. ಪೊಲೀಸರು ನಮ್ಮನ್ನು ಸಂಪರ್ಕಿಸಿದಾಗ ಅವರನ್ನು ತಡೆಯುವುದನ್ನು ಸಹ ಚಿತ್ರಗಳು ತೋರಿಸುತ್ತವೆ. ಈಗ ಅವರ ಆರೋಪಗಳನ್ನು ಸಾಬೀತುಪಡಿಸುವುದು ಟ್ರಸ್ಟಿಗಳ ಮೇಲಿದೆ. ಅವರು ವಿಫಲವಾದರೆ, ನಾನು ಅವರ ವಿರುದ್ಧ ದೂರು ದಾಖಲಿಸುತ್ತೇನೆ ಎಂದು ಅವರು ಹೇಳಿದರು.

# ಅರ್ಕಾವತಿ ನದಿ ಜಲಾನಯನ ಪ್ರದೇಶದಲ್ಲಿ ಮಾಲಿನ್ಯ ತಡೆಯಲು 8 ವಾರಗಳ ಗಡುವು: ಹೈಕೋರ್ಟ್ ನಿರ್ದೇಶನ

**ಬೆಂಗಳೂರು, ಏ.19–** ವಸತಿ ಕಟ್ಟಡ ಮತ್ತು ಕಾರ್ಖಾನೆಗಳಿಂದ ಅರ್ಕಾವತಿ ನದಿ ಜಲಾಯನ ಪ್ರದೇಶದಲ್ಲಿ ಉಂಟಾಗುತ್ತಿರುವ ಮಾಲಿನ್ಯ ತಡೆಯಲು ಎಂಟು ವಾರಗಳಲ್ಲಿ ಕ್ರಮ ಜರುಗಿಸಬೇಕು ಎಂದು ರಾಜ್ಯ ಸರ್ಕಾರ ಮತ್ತು ಕರ್ನಾಟಕ ಮಾಲಿನ್ಯ ನಿಯಂತ್ರಣ ಮಂಡಳಿಗೆ ಹೈಕೋರ್ಟ್ ನಿರ್ದೇಶನ ನೀಡಿದೆ.

ಅರ್ಕಾವತಿ ನದಿಯ ಮಾಲಿನ್ಯ ತಡೆಯಲು ಮತ್ತು ನದಿಯ ಜಲಾನಯನ ಪ್ರದೇಶದಿಂದ ಬಫರ್ ವಲಯದ ರಕ್ಷಣೆ ಮಾಡುವಂತೆ ರಾಜ್ಯ ಸರ್ಕಾರಕ್ಕೆ ನಿರ್ದೇಶಿಸುವಂತೆ ಕೋರಿ ವಕೀಲ ಎನ್ ಕಿರಣ್ ಸಲ್ಲಿಸಿದ್ದ ಸಾರ್ವಜನಿಕ ಹಿತಾಸಕ್ತಿ ಅರ್ಜಿ ವಿಚಾರಣೆಯನ್ನು ಮುಖ್ಯ ನ್ಯಾಯಮೂರ್ತಿ ಎನ್ ವಿ ಅಂಜಾರಿಯಾ ಮತ್ತು ನ್ಯಾಯಮೂರ್ತಿ ಕೆ ವಿ ಅರವಿಂದ್ ಅವರ ವಿಭಾಗೀಯ ಪೀಠ ನಡೆಸಿತು.

ಅರ್ಜಿದಾರರು ತಮ್ಮ ಕೋರಿಕೆಗಳ ಕುರಿತು ಮೂರು ವಾರಗಳಲ್ಲಿ ರಾಜ್ಯ ಸರ್ಕಾರಕ್ಕೆ ಮನವಿ ಪತ್ರ ಮುಖೇನ ಸಲ್ಲಿಸಬೇಕು. ಅರ್ಜಿದಾರರು ಮನವಿ ಸಲ್ಲಿಸಿದ ಎಂಟು ವಾರಗಳಲ್ಲಿ ಅರ್ಕಾವತಿ ನದಿ ಮಾಲಿನ್ಯದ ತಡೆಗೆ ಸರ್ಕಾರ ಕ್ರಮ ಜರುಗಿಸಬೇಕು. ನದಿಯನ್ನು ಮಾಲಿನ್ಯಗೊಳಿಸುತ್ತಿರುವ ಕಾರ್ಖಾನೆಗಳ ವಿರುದ್ಧ ಕ್ರಮ ಕೈಗೊಳ್ಳಬೇಕು. ನದಿಯ ಬಫರ್ ವಲಯದಲ್ಲಿ ನಡೆದಿರುವ ಒತ್ತುವರಿ ತೆರವುಗೊಳಿಸಬೇಕು. ಒತ್ತುವರಿದಾರರ ವಿರುದ್ಧ ಕಾನೂನು ಪ್ರಕಾರ ಅಗತ್ಯ ಕ್ರಮ ಜರುಗಿಸಬೇಕು ಎಂದು ನ್ಯಾಯಾಲಯ ನಿರ್ದೇಶಿಸಿದೆ.



ಅರ್ಕಾವತಿ ನದಿಯ ಜಲಾಯನ ಪ್ರದೇಶದ ಒಂದು ಕಿಲೋ ಮೀಟರ್ ಸುತ್ತಳತೆಯಲ್ಲಿ ಬಫರ್ ವಲಯದ ನಿಯಮಗಳನ್ನು ಕಟ್ಟುನಿಟ್ಟಾಗಿ ಜಾರಿ ಮಾಡಬೇಕು. ಬಫರ್ ವಲಯದಲ್ಲಿ ಯಾವುದೇ ವಸತಿ ಕಟ್ಟಡ ಅಥವಾ ಕೈಗಾರಿಕೆ ನಿರ್ಮಾಣ ಮಾಡಲು ಅನುಮತಿ ನೀಡಬಾರದು. ನದಿಯ ಸಂರಕ್ಷಣೆ ಮತ್ತು ನಿರ್ವಹಣೆಗೆ ಶಾಸನಬದ್ಧ ಪ್ರಾಧಿಕಾರ ರಚನೆ ಮಾಡಬೇಕು. ಅರ್ಕಾವತಿ ನದಿ ಜಲಾಶಯನ ಪ್ರದೇಶದಲ್ಲಿ ಆಗಿರುವ ಒತ್ತುವರಿ ಮತ್ತು ಅದರ ತೆರವಿಗೆ ಸಂಬಂಧಿಸಿದಂತೆ ಸಮಗ್ರ ವರದಿ ಸಲ್ಲಿಸಬೇಕು. ನದಿಗೆ ನಿರ್ಮಿಸಲಾಗಿರುವ ಚಾಮರಾಜಸಾಗರ ಮತ್ತು ಮಂಚನ ಬೆಲೆ ಜಲಾಶಯದಲ್ಲಿ ನೀರು, ಡೆಡ್ ಸ್ಟೋರೇಜ್ ಮತ್ತು ಹೂಳಿನ ಮಟ್ಟದ ಬಗ್ಗೆ ವರದಿ ಸಲ್ಲಿಸಲು ರಾಜ್ಯ ಸರ್ಕಾರ, ಕೆಎಸ್‌ಪಿಸಿಬಿ, ಜಲಸಂಪನ್ಮೂಲ ಇಲಾಖೆ, ರಾಮನಗರ ಜಿಲ್ಲಾಡಳಿತ ಮತ್ತು ಬೆಂಗಳೂರು ಜಲಮಂಡಳಿಗೆ ನಿರ್ದೇಶಿಸಬೇಕು ಎಂದು ಅರ್ಜಿದಾರರು ಕೋರಿದ್ದಾರೆ.



ಬೀದರ್ ಮತ್ತು ಶಿವಮೊಗ್ಗದಲ್ಲಿ ನಡೆದ ಸಿಇಟಿ ಸಂದರ್ಭದಲ್ಲಿ ಬ್ರಾಹ್ಮಣ ವಿದ್ಯಾರ್ಥಿಗಳ ಜನಿವಾರವನ್ನು ಬಲವಂತವಾಗಿ ಹೊರತೆಗೆಸಿದ ಪ್ರಕರಣವನ್ನು ಖಂಡಿಸಿ, ಎಕೆಬಿಎಂಎಸ್ ಅಧ್ಯಕ್ಷ ರಘುನಾಥ್ ನೇತೃತ್ವದಲ್ಲಿ ಬ್ರಾಹ್ಮಣ ಸಮುದಾಯದ ಸದಸ್ಯರು ಶನಿವಾರ ಬೆಂಗಳೂರಿನಲ್ಲಿ ಪ್ರತಿಭಟನೆ ನಡೆಸಿದರು.

## ಮುತ್ತಪ್ಪ ರೈ ಪುತ್ರ ರಿಕ್ಕಿ ರೈ ಹತ್ಯೆ ಯತ್ನ: ಶಂಕಿತರ ಮೇಲೆ ಎಫ್‌ಐಆರ್ ದಾಖಲು



**ಬೆಂಗಳೂರು, ಏ.19–** ಮುತ್ತಪ್ಪ ರೈ ಅವರ ಪುತ್ರ ರಿಕ್ಕಿ ರೈ ಅವರ ಮೇಲೆ ತಡರಾತ್ರಿ ಗುಂಡಿನ ದಾಳಿ ನಡೆಸಿ ಕೊಲೆಗೆ ಯತ್ನಿಸಿದ್ದು, ಇದರಲ್ಲಿ ಯಾರ ಕೈವಾಡವಿದೆ ಎನ್ನುವ ಕುತೂಹಲ ಅಪರಾಧ ವಲಯದಲ್ಲಿ ಮನೆ ಮಾಡಿದೆ. ಕೊಲೆ ಯತ್ನದ ವಿರುದ್ಧ ಇದೀಗ ನಾಲ್ವರ ವಿರುದ್ಧ ಎಫ್‌ಐಆರ್ ದಾಖಲಾಗಿದೆ. ಆದರೂ ಕಾಣದ ಕೈಗಳನ್ನು ಪತ್ತೆ ಹಚ್ಚಲು ಪೊಲೀಸರು ವ್ಯಾಪಕ ತನಿಖೆಯಲ್ಲಿ ನಿರತರಾಗಿದ್ದಾರೆ.

ರಿಕ್ಕಿ ರೈ ಹತ್ಯೆ ಯತ್ನದ ಹಿಂದೆ ಅನುರಾಧ, ರಾಕೇಶ್ ಮಲ್ಲಿ, ನಿತೀಶ್‌ಶೆಟ್ಟಿ ಮತ್ತು ವೈದ್ಯನಾಥನ್ ಅವರ ಕೈವಾಡವಿರಬಹುದು ಎಂದು ಕಾರು ಚಾಲಕ ಬಸವರಾಜು ಪೊಲೀಸರಿಗೆ ನೀಡಿರುವ ದೂರಿನಲ್ಲಿ ಶಂಕೆ ವ್ಯಕ್ತಪಡಿಸಿದ್ದಾರೆ. ಬಸವರಾಜ್ ದೂರು ಆಧರಿಸಿ ಬಿಡದಿ ಠಾಣೆ ಪೊಲೀಸರು ಅನುರಾಧಾ, ರಾಕೇಶ್ ಮಲ್ಲಿ, ನಿತೀಶ್ ಶೆಟ್ಟಿ ಹಾಗೂ ವೈದ್ಯನಾಥನ್ ಅವರ ವಿರುದ್ಧ ಎಫ್‌ಐಆರ್ ದಾಖಲಿಸಿಕೊಂಡು ಮುಂದಿನ ಕ್ರಮ ಜರುಗಿಸಿದ್ದಾರೆ.

ಬಿಡದಿ ಮನೆ ಬಳಿ ರಿಕ್ಕಿ ರೈ ಮೇಲೆ ಗುಂಡಿನ ದಾಳಿ ನಡೆಸಿ ಹತ್ಯೆಗೆ ಯತ್ನಿಸಿದ ಪ್ರಕರಣದ ತನಿಖೆಯನ್ನು ತೀವ್ರಗೊಳಿಸಿರುವ ರಾಮನಗರ ಉಪ ವಿಭಾಗದ ಪೊಲೀಸರು ವಿವಿಧ ಆಯಾಮಗಳಲ್ಲಿ ತನಿಖೆ ಕೈಗೊಂಡಿದ್ದಾರೆ. ಕೌಟುಂಬಿಕ ಕಲಹ, ರಿಯಲ್ ಎಸ್ಟೇಟ್ ವ್ಯವಹಾರ, ಹಳೆ ದ್ವೇಷ, ಹಣಕಾಸು ವ್ಯವಹಾರ ಸೇರಿದಂತೆ ಮುಂತಾದ ಕಾರಣಗಳ ಬಗ್ಗೆ ತನಿಖೆ ನಡೆಯುತ್ತಿದೆ. ಈಗಾಗಲೇ ರಚಿಸಲಾಗಿರುವ ನಾಲ್ಕು ವಿಶೇಷ ತಂಡಗಳು ಒಂದೊಂದು ಆಯಾಮಗಳಲ್ಲಿ ತನಿಖೆ ಕೈಗೊಂಡು ಮಾಹಿತಿಗಳನ್ನು ಸಂಗ್ರಹಿಸುತ್ತಿವೆ.

**"ಮುತ್ತಪ್ಪ ರೈ ಪುತ್ರ ರಿಕ್ಕಿ ರೈ ಮೇಲೆ ಗುಂಡಿನ ದಾಳಿ ನಡೆದಿರುವ ವಿಚಾರ ಗೊತ್ತಾಗಿದೆ. ಈ ಬಗ್ಗೆ ಹೆಚ್ಚಿನ ಮಾಹಿತಿಯನ್ನು ನೀಡುವಂತೆ ಅಧಿಕಾರಿಗಳನ್ನು ಕೇಳಿದ್ದೇನೆ. ಗಾಯಾಳುವನ್ನು ಮಣಿಪಾಲ್ ಆಸ್ಪತ್ರೆಗೆ ದಾಖಲಿಸಿದ್ದು, ಪ್ರಾಣಾಪಾಯ ದಿಂದ ಪಾರಾಗಿದ್ದಾರೆ ಎನ್ನಲಾಗಿದೆ. ಪೊಲೀಸರು ತನಿಖೆ ಆರಂಭಿಸಿದ್ದಾರೆ" ಎಂದರು – ಸಚಿವ ಜಿ.ಪರಮೇಶ್ವರ್**

ಒಂದು ತಂಡ ಘಟನೆ ನಡೆದ ರಿಕ್ಕಿ ಅವರ ಬಿಡದಿ ಮನೆಗೆ ತೆರಳಿ ಅಲ್ಲಿ ಮಾಹಿತಿಗಳನ್ನು ಪಡೆದುಕೊಳ್ಳುತ್ತಿದೆ. ಘಟನೆ ಯಾವಾಗ, ಎಷ್ಟು ಗಂಟೆಗೆ ನಡೆಯಿತು. ಮನೆಯಲ್ಲಿ ಯಾವ ಯಾವ ಸಿಬ್ಬಂದಿ ಇದ್ದರು. ರಿಕ್ಕಿ ರೈ ವಿದೇಶದಿಂದ ಯಾವಾಗ ಬಂದರು, ಅವರ ಜೊತೆ ಬೇರೆ ಯಾರಾದರು ಬಂದಿದ್ದರೇ, ಮನೆಯಲ್ಲಿ ಯಾರ್ಯಾರು ಯಾವ ಯಾವ ಕೆಲಸಗಳನ್ನು ಮಾಡುತ್ತಿದ್ದಿರಿ, ಇತ್ತೀಚಿಗೆ ಮನೆಗೆ ಯಾರಾದರೂ ಬಂದು ಹೋಗಿದ್ದಾರೆಯೇ ಎಂಬ ಬಗ್ಗೆ ಮಾಹಿತಿ ಕಲೆ ಹಾಕುತ್ತಿದೆ.

ಇಂದೊಂದು ತಂಡ ರಿಕ್ಕಿ ಅವರ ಬೆಂಗಳೂರಿನ ಸದಾಶಿವನಗರದಲ್ಲಿರುವ ಮನೆಗೆ ತೆರಳಿ ನೆರೆ ಹೊರೆಯವರಿಂದ ಮಾಹಿತಿ ಪಡೆದುಕೊಳ್ಳುತ್ತಿವೆ. ಆ ಮನೆಯಲ್ಲಿ ಯಾರ್ಯಾರು ಇದ್ದಾರೆ. ಯಾವ ಕೆಲಸ ಮಾಡುತ್ತಿದ್ದಾರೆ ಎಂಬುವುದನ್ನು ಸಂಗ್ರಹಿಸುತ್ತಿದೆ.ಮತ್ತೊಂದು ತಂಡ ರಿಕ್ಕಿ ರೈ ಅವರ ರಿಯಲ್ ಎಸ್ಟೇಟ್ ವ್ಯವಹಾರ ಹಾಗೂ ಇನ್ನೊಂದು ತಂಡ ಅವರ ಕುಟುಂಬದವರ ಬಗ್ಗೆ ಮಾಹಿತಿಗಳನ್ನು ಕಲೆ ಹಾಕುತ್ತಿದೆ. ಒಟ್ಟಾರೆ ರಿಕ್ಕಿ ರೈ ಅವರ ಮೇಲಿನ ಗುಂಡಿನ ದಾಳಿಗೆ ನಿಖರ ಕಾರಣಗಳನ್ನು ಈ ತನಿಖಾ ತಂಡಗಳು ಪತ್ತೆಹಚ್ಚುತ್ತಿವೆ.

## ಕರ್ನಾಟಕ ರಾಜ್ಯ ರೆಡ್ಡಿ ಜನಸಂಘ ಎಚ್ಚರಿಕೆ

# ಸಾಮಾಜಿಕ, ಆರ್ಥಿಕ ಸಮೀಕ್ಷೆಯಲ್ಲಿ ಜನಾಂಗದ ವಿರುದ್ಧ ತೀರ್ಮಾನ ಕೈಗೊಂಡಲ್ಲಿ ಉಗ್ರ ಹೋರಾಟ

**ಬೆಂಗಳೂರು, ಏ.19–** ರಾಜ್ಯದಲ್ಲಿ ನಡೆದ ಸಾಮಾಜಿಕ, ಆರ್ಥಿಕ ಸಮೀಕ್ಷೆಯಲ್ಲಿ ರೆಡ್ಡಿ ಜನಾಂಗದ ಜನಸಂಖ್ಯೆ ಕಡಿಮೆ ಇದ್ದು, ರೆಡ್ಡಿ ಜನರ ಹಿತಾಸಕ್ತಿಗೆ ವ್ಯತಿರಿಕ್ತ ತೀರ್ಮಾನ ಕೈಗೊಂಡಲ್ಲಿ ಸರ್ಕಾರದ ವಿರುದ್ಧ ಉಗ್ರ ಹೋರಾಟ ಮಾಡುವುದಾಗಿ ಕರ್ನಾಟಕ ರಾಜ್ಯ ರೆಡ್ಡಿ ಜನಸಂಘ ಎಚ್ಚರಿಕೆ ನೀಡಿದೆ.

ವರದಿ ಜಾರಿ ಕುರಿತು ಸಂಘದ ಆಡಳಿತ ಮಂಡಳಿಯಲ್ಲಿ ಕೈಗೊಂಡ ನಿರ್ಣಯದಂತೆ ರಾಜ್ಯದ ಎಲ್ಲಾ ಜಿಲ್ಲಾ, ತಾಲ್ಲೂಕು ಸಂಘದ ಅಧ್ಯಕ್ಷರು, ಪದಾಧಿಕಾರಿಗಳ ಸಭೆಯಲ್ಲಿ ಅಭಿಪ್ರಾಯ ಸಂಗ್ರಹಿಸಿ ಮಾತನಾಡಿದ ಕರ್ನಾಟಕ ರೆಡ್ಡಿ ಜನಸಂಘದ ಅಧ್ಯಕ್ಷ ಜಯರಾಮರೆಡ್ಡಿ, ರಾಜ್ಯದಲ್ಲಿ ವಾಸ್ತವವಾಗಿ ನಮ್ಮ ಜನಾಂಗದ ಜನಸಂಖ್ಯೆ 40 ರಿಂದ 50 ಲಕ್ಷದಷ್ಟಿದೆ. ಆದರೆ ವರದಿಯಲ್ಲಿ ಕೇವಲ 8.5 ಲಕ್ಷ ತೋರಿಸಿದ್ದಾರೆ. ನಮ್ಮ ಸಂಘದಿಂದಲೇ ರೆಡ್ಡಿ ಜನಾಂಗದ ಗಣತಿ ಮಾಡುತ್ತೇವೆ ಎಂದರು.

ಸಭೆಯ ಅಭಿಪ್ರಾಯಗಳನ್ನು ಕ್ರೋಢೀಕರಿಸಿ ನಮ್ಮ ಸಲಹಾ ಮಂಡಳಿ ಸಭೆಯಲ್ಲಿ ಸೂಕ್ತ ತೀರ್ಮಾನ ಕೈಗೊಂಡು ಸರ್ಕಾರಕ್ಕೆ ಶಿಫಾರಸ್ಸು ಮಾಡುತ್ತೇವೆ. ನಮ್ಮ ಹಿತಾಸಕ್ತಿಗೆ ವಿರುದ್ಧವಾಗಿ ಸರ್ಕಾರ ನಡೆದುಕೊಂಡರೆ ಹೋರಾಟ ಮಾಡುತ್ತೇವೆ. ಹತ್ತು ವರ್ಷಗಳ ಹಿಂದೆ ನಡೆದ ಸಮೀಕ್ಷೆಯಲ್ಲಿ ನಮ್ಮ ಸಮುದಾಯದ ಜನಸಂಖ್ಯೆ ಕಡಿಮೆ ಇದ್ದು, ಇದೀಗ ಮತ್ತೆ ಸಮೀಕ್ಷೆ ನಡೆದರೆ ಜನಸಂಖ್ಯೆ ನಿಶ್ಚಿತವಾಗಿಯೂ ಹೆಚ್ಚಾಗಲಿದೆ. ಸಾರಿಗೆ ಸಚಿವ ರಾಮಲಿಂಗಾ ರೆಡ್ಡಿ ಮತ್ತಿತರ ಮುಖಂಡರನ್ನು ಭೇಟಿಮಾಡಿ ಇಂದಿನ ಸಭೆಯ ಅಭಿಪ್ರಾಯಗಳನ್ನು ತಿಳಿಸುತ್ತೇವೆ ಎಂದರು.

ರೆಡ್ಡಿ ಜನಾಂಗಕ್ಕಾಗಿ ಪ್ರತ್ಯೇಕ ನಿಗಮ ಸ್ಥಾಪಿಸಬೇಕು. ನಮ್ಮ ಸಮುದಾಯವನ್ನು ಕೇಂದ್ರದ ಒಬಿಸಿ ಪಟ್ಟಿಗೆ ಸೇರಿಸುವಂತೆ ಸಿದ್ದರಾಮಯ್ಯ ಅವರಿಗೆ ಈಗಾಗಲೇ ಮನವಿ ಸಲ್ಲಿಸಿದ್ದೇವೆ. ಸಂಘದ ಶತಮಾನೋತ್ಸವಕ್ಕೆ ಮುನ್ನ ಈ ಬೇಡಿಕೆಗಳನ್ನು ಕಾಲಮಿತಿಯಲ್ಲಿ ಈಡೇರಿಸಬೇಕು ಎಂದರು.

ಸಭೆಯಲ್ಲಿ ಸಂಘದ ಪ್ರಧಾನ ಕಾರ್ಯದರ್ಶಿ ಶೇಖರ್ ರೆಡ್ಡಿ, ಉಪಾಧ್ಯಕ್ಷರಾದ ಕೃಷ್ಣಾ ರೆಡ್ಡಿ, ಜಿಲ್ಲಾ, ತಾಲ್ಲೂಕು ಘಟಕದ ಅಧ್ಯಕ್ಷರು, ಜಿಲ್ಲಾ ಪ್ರತಿನಿಧಿಗಳನು ಸಭೆಯಲ್ಲಿ ಪಾಲ್ಗೊಂಡಿದ್ದರು. ಜೊತೆಗೆ ನಮ್ಮ ಬೇಡಿಕೆಗಳನ್ನು ಅನಷ್ಠಾನಗೊಳಿಸಬೇಕು ಎಂದು ಜಯರಾಮರೆಡ್ಡಿ ಒತ್ತಾಯಿಸಿದರು.

# ಬೆಂಗಳೂರು ಮೆಟ್ರೋ ರೈಲು ಸಂಚಾರ

## ಗಣನೀಯವಾಗಿ ಹೆಚ್ಚುತ್ತಿರುವ ಪ್ರಯಾಣಿಕರ ಸಂಖ್ಯೆ



**ಬೆಂಗಳೂರು, ಏ.19–** ಬೆಂಗಳೂರಿನಾದ್ಯಂತ ಜಾಲ ವಿಸ್ತರಣೆಯಲ್ಲಿ ತೊಡಗಿರುವ 'ಬೆಂಗಳೂರು ಮೆಟ್ರೋ ರೈಲು ನಿಗಮ ಮತ್ತೊಂದು ಮೈಲಿಗಲ್ಲಿಗೆ ಸಾಕ್ಷಿಯಾಗಿದೆ. ಪ್ರಯಾಣದ ದರ ಹೆಚ್ಚಿಸಿದ್ದರಿಂದ ಸಾರ್ವಜನಿಕರ ಆಕ್ರೋಶ ಹೆಚ್ಚಾಗಿತ್ತು. ಈ ಮಧ್ಯೆಯು ಒಂದೇ ದಿನದಲ್ಲಿ ಅತ್ಯಧಿಕ ಪ್ರಯಾ ಣಿಕರು ಮೆಟ್ರೋದಲ್ಲಿ ಸಂಚರಿಸಿದ್ದಾರೆ ಎಂದಿರುವ ನಿಗಮ ಈ ಸಂಬಂಧ ಪ್ರಯಾಣಿಕರಿಗೆ ಅಭಿನಂದನೆ ತಿಳಿಸಿದೆ.

ಬೆಂಗಳೂರು ನಮ್ಮ ಮೆಟ್ರೋ ಮತ್ತೆ ಪ್ರಯಾಣಿಕರ ಸಂಖ್ಯೆ ಮತ್ತೆ ಎಂದಿನಂತಾಗಿದೆ. ಮೊನ್ನೆ ಏಪ್ರಿಲ್ 17ರಂದು ಒಂದೇ ದಿನ ನಮ್ಮ ಮೆಟ್ರೋ ಪ್ರಯಾಣಿಕರ ಸಂಖ್ಯೆ 9,08,153ಕ್ಕೆ ಹೆಚ್ಚಾಗಿದೆ. ಹಾಲಿ ಹಸಿರು ಮತ್ತು ನೇರಳೆ ಮಾರ್ಗದಲ್ಲಿ ಎರಡು ಮಾರ್ಗಗಳಲ್ಲಿ ಜನ ಸಂಚಾರ ಏರಿಕೆ ಆಗಿದೆ ಎಂದು 'ಬೆಂಗಳೂರು ಮೆಟ್ರೋ ರೈಲು ನಿಗಮ' ಅಧಿಕಾರಿಗಳು ಶನಿವಾರ ಮಾಹಿತಿ ನೀಡಿದ್ದಾರೆ.

ನೇರಳೆ ಮೆಟ್ರೋ ಮಾರ್ಗದಲ್ಲಿ ಆ ದಿನ 4 ಲಕ್ಷಕ್ಕೂ ಅತ್ಯಧಿಕ ಪ್ರಮಾಣಿಕರು ಸಂಚರಿಸಿದ್ದಾರೆ. 4,35,516 ಪ್ರಯಾಣಿಕರನ್ನು ನೇರಳೆ ಮಾರ್ಗ ದಾಖಲಿಸಿದೆ. ಹಸಿರುವ ಮಾರ್ಗವು 2,85,240 ಪ್ರಯಾಣಿಕ ರನ್ನು ದಾಖಲಿಸಿದೆ. ಇನ್ನು ಪ್ರಮುಖ ಇಂಟರ್ಚೇಂಜ್ ನಿಲ್ದಾಣ ಆಗಿರುವ ನಾಡಪ್ರಭು ಕೆಂಪೇಗೌಡ (ಮೆಜೆಸ್ಟಿಕ್) ಮೆಟ್ರೋ ನಿಲ್ದಾಣದಲ್ಲಿ ಅಂದು ಒಂದೇ ದಿನ 1,87,397 ಮಂದಿ ಮಾರ್ಗ ಬದಲಾವಣೆ ಮಾಡಿಕೊಂಡಿ ದ್ದಾರೆ ಎಂದು ಬಿಎಂಆರ್‌ಸಿಎಲ್ ಅಂಕಿ ಸಂಖ್ಯೆ ನೀಡಿದೆ.

ರಾಜ್ಯ ಸರ್ಕಾರ ಅಗತ್ಯ ವಸ್ತುಗಳ ಬೆಲೆ ಮೇಲಿಂದ ಮೇಲೆ ಹೆಚ್ಚಿಸಿ ಜನರಿಗೆ ಆರ್ಥಿಕ ಬರೆ ನೀಡುತ್ತಿದೆ ಎಂದು ಜನರು ದೂರಿದ್ದರು. ಇದಕ್ಕೆ ಸಾಲದೆಂಬಂತೆ ನಿರ್ವಹಣಾ ವೆಚ್ಚದ ನೆಪದಲ್ಲಿ ನಮ್ಮ ಮೆಟ್ರೋ ದರವನ್ನು ಏರಿಕೆ ಮಾಡಲಾಗಿತ್ತು. ಕನಿಷ್ಠ 60 ಹಾಗೂ ಗರಿಷ್ಠ 100 ರೂಪಾಯಿ ದರ ವಿಧಿಸಲಾಯಿತು. ಪ್ರಯಾಣಿಕರು ಆಕ್ರೋಶ, ಅಸಮಾಧಾನ ವ್ಯಕ್ತಪಡಿಸಿದ ನಂತರ ಸ್ಟೇಜ್ ಬೈ ಸ್ಟೇಜ್ ಮರ್ಜ್ ಮಾಡುವುದಾಗಿ ತಿಳಿಸಿದ್ದ ಅಧಿಕಾರಿಗಳು ಒಂದೆರಡು ಕಡಿಮೆ ದೂರದ ಮಾರ್ಗಗಳ ದರ ಇಳಿಕೆ ಮಾಡಿದರು. ಅದರ ಹೊರತಾಗಿ ಯಾವ ಬದಲಾವಣೆ ಆಗಲಿಲ್ಲ. ಇದರಿಂದಾಗಿ ಅಭಿಯಾನ, ನಮ್ಮ ಮೆಟ್ರೋ ಬಹಿಷ್ಕಾರಗಳು ನಡೆದವು. ನಮ್ಮ ಮೆಟ್ರೋ ನಡೆಯನ್ನು ಖಂಡಿಸಲಾಯಿತು.

ಬಳಿಕ ಜನರು ಅನಿವಾರ್ಯವಾಗಿ ಇದೇ ಮೆಟ್ರೋದಲ್ಲಿ ಓಡಾಡು ವಂತಾಗಿದೆ. ಕಾರಣ ಬೆಂಗಳೂರಿನಂತಹ ಸಂಚಾರ ದಟ್ಟಣೆಯಲ್ಲಿ ಸ್ವಂತ ವಾಹನ ಗಳೊಂದಿಗಿನ ಸಂಚಾರ ಕಷ್ಟಕರವಾಗುತ್ತದೆ. ಇನ್ನೂ ಬಸ್ ದರವು ದುಬಾರಿಯಾಗಿದೆ. ಸಮಯ ವ್ಯರ್ಥವಾಗುತ್ತದೆ. ಸರಿಯಾದ ಸಮಯಕ್ಕೆ ಕ್ಷಿಪ್ರವಾಗಿ ಸಾಗುವುದು ನಮ್ಮ ಮೆಟ್ರೋ, ಈ ಕಾರಣದಿಂದ ಬೆಲೆ ಹೆಚ್ಚಾದರೂ ಅನಿವಾರ್ಯವಾಗಿ ಮೆಟ್ರೋ ಏರುವಂತಾಗಿದೆ. ಇನ್ನೂ ನಮ್ಮ ದರ ಏರಿಕೆ ಬಳಿಕ ದಿನದಿಂದ ದಿನಕ್ಕೆ ಮೆಟ್ರೋ ಪ್ರಯಾಣಿಕರ ಸಂಚಾರ ಕಡಿಮೆ ಆಗಿತ್ತು. ಸುಮಾರು ಒಂದರಿಂದ ಒಂದೂವರೆ ಲಕ್ಷದಷ್ಟು ಪ್ರಯಾಣಿಕರ ಸಂಖ್ಯೆಯಲ್ಲಿ ಕುಸಿಯಿತು. ಇದು ಹೀಗೆ ಮುಂದುವರಿದರೆ ಹೇಗೆ ಎನ್ನುವ ಸ್ಥಿತಿ ಇತ್ತು. ಪ್ರಯಾಣಿಕರ ಸಂಖ್ಯೆ ಕಡಿಮೆ ಆದರೂ ಸಹಿತ ನಮ್ಮ ಮೆಟ್ರೋ ತನ್ನ ಪ್ರಯಾಣ ಏರಿಕೆ ನಿರ್ಧಾರದಿಂದ ಹಿಂದೆ ಸರಿಯಲಿಲ್ಲ. ಇದೀಗ ಮೊದಲಿನಂತೆ ಪ್ರಯಾಣಿಕರು ಸಂಚಾರ ಮಾಡುತ್ತಿದ್ದಾರೆ. ಮುಂದಿನ ದಿನಗಳಲ್ಲಿ ಬೆಂಗಳೂರು ಮೆಟ್ರೋ ರೈಲು ನಿಗಮ 10 ಲಕ್ಷ ಪ್ರಯಾಣಿಕರನ್ನು ದಾಖಲಿಸಬಹುದು ಎಂದು ಅಂದಾಜಿಸಲಾಗಿದೆ.

# ಸರ್ಕಾರದ ಸರ್ವೋತ್ತಮ ಸೇವಾ ಪ್ರಶಸ್ತಿ ಪ್ರಕಟ

**ಬೆಂಗಳೂರು, ಏ.19–** 2023ನೇ ಸಾಲಿನ ರಾಜ್ಯ ಸರ್ಕಾರದ ಸರ್ವೋತ್ತಮ ಸೇವಾ ಪ್ರಶಸ್ತಿಯನ್ನು ಪ್ರಕಟಿಸಲಾಗಿದೆ. 30 ಸರ್ಕಾರಿ ಅಧಿಕಾರಿ, ನೌಕರರಿಗೆ ಪ್ರಶಸ್ತಿಯನ್ನು ನೀಡಿ ಸರ್ಕಾರ ಗೌರವಿಸುತ್ತಿದೆ.ಈ ಕುರಿತಂತೆ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ಸರ್ಕಾರದ ಅಧೀನ ಕಾರ್ಯದರ್ಶಿ ನಡವಳಿಯನ್ನು ಹೊರಡಿಸಿದ್ದು, ರಾಜ್ಯದಲ್ಲಿ ಅತ್ಯುನ್ನತ ಸೇವೆಗೈದ, ಸಾಧನೆಗೈದ ರಾಜ್ಯ ಸರ್ಕಾರಿ ನೌಕರರಿಗೆ ಸರ್ವೋತ್ತಮ ಸೇವಾ ಪ್ರಶಸ್ತಿ ನೀಡುವ ಯೋಜನೆ ಜಾರಿಗೆ ತರಲಾಗಿದೆ ಎಂದಿದ್ದಾರೆ.

# ಹಿಂದೂ ವಿರೋಧಿ ಮನೋಭಾವನೆ ಕಾಂಗ್ರೆಸ್ ಸರ್ಕಾರದ ಎಲ್ಲಾ ಇಲಾಖೆಗಳಲ್ಲಿ ಪ್ರವೇಶ

**ಬೆಂಗಳೂರು, ಏ.19–** ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರದ ಹಿಂದೂ ವಿರೋಧಿ ಮನೋಭಾವನೆ ತುಂಬಿ ತುಳುಕಿ ಎಲ್ಲಾ ಇಲಾಖೆಗಳಲ್ಲಿಯೂ ಪ್ರವೇಶಿಸಿದೆ ಎಂದು ವಿಧಾನ ಪರಿಷತ್ತಿನ ಪ್ರತಿಪಕ್ಷದ ಮುಖ್ಯ ಸಚೇತಕ ಎನ್.ರವಿ ಕುಮಾರ್ ಆರೋಪಿಸಿದ್ದಾರೆ.

ಈ ಸಂಬಂಧ ಪತ್ರಿಕಾ ಹೇಳಿಕೆ ನೀಡಿರುವ ಅವರು, ತೀರ್ಥಹಳ್ಳಿ ಮತ್ತು ಬೀದರ್‌ನಲ್ಲಿ ನಡೆದ ಅಧಿಕಾರಿಗಳ ನಿಂದನೀಯ ಕೃತ್ಯಗಳಿಂದ ಇದು ಸ್ಪಷ್ಟವಾಗಿದೆ ಎಂದಿದ್ದಾರೆ. ತೀರ್ಥಹಳ್ಳಿಯಲ್ಲಿ ಬ್ರಾಹ್ಮಣ ವಿದ್ಯಾರ್ಥಿಯಿಂದ ಜನಿವಾರವನ್ನು ಬಲವಂತವಾಗಿ ತೆಗೆಸಿಕೊಳ್ಳಲಾಗಿದೆ ಹಾಗೂ ಬೀದರ್‌ನಲ್ಲಿ ಜನಿವಾರ ತೆಗೆಯಲು ನಿರಾಕರಿಸಿದ ವಿದ್ಯಾರ್ಥಿಗೆ ಪರೀಕ್ಷೆ ಬರೆಯಲು ಅನುಮತಿ ನಿರಾಕರಿಸಲಾಗಿದೆ ಎಂದು ಅವರು ಆರೋಪಿಸಿದ್ದಾರೆ. ಕೆಲವು ತಿಂಗಳ ಹಿಂದೆ, ಸ್ಪರ್ಧಾತ್ಮಕ ಪರೀಕ್ಷೆ ಬರೆಯುವ ಮುನ್ನ ಕೆಲವು ಮಹಿಳೆಯರ ಮಂಗಳಸೂತ್ರ ತೆಗೆಯಲು ಸೂಚಿಸಲಾಗಿತ್ತು. ಸಿದ್ದರಾಮಯ್ಯ ಅವರು ಪ್ರಜಾಪ್ರಭುತ್ವಾಧಾರಿತ, ಸಕಾರಾತ್ಮಕ ಹಾಗೂ ನಿಜವಾದ ಧರ್ಮನಿರಪೇಕ್ಷ ಸರ್ಕಾರವನ್ನು ನಡೆಸುತ್ತಿದ್ದಾರೋ ಅಥವಾ ತಾಲಿಬಾನ್ ರೀತಿಯ ಆಡಳಿತ ನಡೆಸುತ್ತಿದ್ದಾರೋ ಎಂಬ ಅನುಮಾನ ಉಂಟಾಗುತ್ತದೆ ಎಂದು ಪ್ರಶ್ನಿಸಿದ್ದಾರೆ.ಹೀಗೆ ಹಿಂದು ವಿರೋಧಿ ಕೃತ್ಯಗಳು ಪುನಃ



ಪುನಃ ನಡೆಯುತ್ತಿವೆ. ಧಾರ್ಮಿಕ ಭಾವನೆಗಳಿಗೆ ಸಂಬಂಧಿಸಿದ ನಾಜೂಕಾದ ವಿಷಯಗಳಲ್ಲಿ ಜನಿವಾರ ತೆಗೆಸುವಂತಹ ನಿಷ್ಟುರ ತೀರ್ಮಾನಗಳನ್ನು ಅಧಿಕಾರಿಗಳು ತಾವೇ ತೆಗೆದುಕೊಳ್ಳುವುದಿಲ್ಲ. ನಾನು ಖಚಿತವಾಗಿ ಹೇಳುತ್ತೇನೆ. ಈ ರೀತಿಯ ಸೂಚನೆಗಳು ಮತ್ತು ಮಾರ್ಗಸೂಚಿಗಳನ್ನು ಸರ್ಕಾರವೇ ನೀಡಿದೆ. ಸಂಬಂಧಿತ ಸಚಿವರು ಈ ನಿಂದನೀಯ ಘಟನೆ ಬಗ್ಗೆ ಸ್ಪಷ್ಟನೆ ನೀಡಬೇಕು. ಈ ನಿಂದನಾರ್ಹ ಘಟನೆಯ ಕುರಿತಾಗಿ ಸಂಪೂರ್ಣ ತನಿಖೆ ನಡೆಯಬೇಕು ಎಂದು ರವಿ ಕುಮಾರ್ ಆಗ್ರಹಿಸಿದ್ದಾರೆ.

## ಜಾತಿಗಣತಿ ಬಗ್ಗೆ ಸಾರ್ವಜನಿಕರಲ್ಲಿ ಸಂಶಯ

# ಸರ್ವಪಕ್ಷ ಸಭೆ ಕರೆಯಲು ಸಿಎಂಗೆ ನಿಖಿಲ್ ಕುಮಾರಸ್ವಾಮಿ ಒತ್ತಾಯ

**ಬೆಂಗಳೂರು, ಏ.19–** ಜಾತಿ ಗಣತಿ ವಿಚಾರದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಸರ್ವ ಪಕ್ಷ ಸಭೆ ಕರೆಯುವಂತೆ ಜಾತ್ಯತೀತ ಜನತಾದಳ ಯುವಘಟಕದ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಒತ್ತಾಯಿಸಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಹಿಂದುಳಿದ ವರ್ಗಗಳ ಮೀಸಲಾತಿ ವರದಿಗೆ ವಿರೋಧವಿಲ್ಲ, ಆದರೆ, ವರದಿ ದತ್ತಾಂಶ ಬಗ್ಗೆ ಸಾರ್ವಜನಿಕರಲ್ಲಿ ಸಂಶಯ ಮೂಡಿದೆ ಎಂದರು. ಎಲ್ಲ ಗೊಂದಲ ಬಗೆಹರಿಸಲು ಚಿಂತಕರು ಮತ್ತು ಸರ್ವಪಕ್ಷ ನಾಯಕರ ಸಭೆ ಕರೆದು ಸರ್ಕಾರ ಮುಂದಿನ ನಿರ್ಣಯ ಕೈಗೊಳ್ಳಬೇಕು. ನಾವು ಯಾವುದೇ ಜಾತಿ, ಧರ್ಮದ ವಿರುದ್ಧ ಇಲ್ಲ, ಸಮೀಕ್ಷೆ ಸರಿಯಿಲ್ಲ ಎಂದಷ್ಟೇ ಹೇಳುತ್ತಿದ್ದೇವೆ. ವರದಿಯ ಅಂಕಿ–ಅಂಶಗಳನ್ನು ಜನರ ಮುಂದಿಡಿ ಸಾರ್ವಜನಿಕವಾಗಿ ಚರ್ಚೆಯಾಗಲಿ. ಯಾವುದನ್ನೋ ಮರೆಮಾಚಲು ವರದಿಯನ್ನು ಮುಂದಿಟ್ಟು ರಾಜಕೀಯ ಮಾಡುವುದನ್ನು ಬಿಡಿ ಎಂದು ಮುಖ್ಯಮಂತ್ರಿ ಅವರಿಗೆ ಕಿವಿಮಾತು ಹೇಳಿದರು.

ಕರ್ನಾಟಕದ ಭೂಪಟ ಅರಿಯದ ಕಾಂಗ್ರೆಸ್ನ ದೆಹಲಿ ವರಿಷ್ಠರು ಮೀಸಲಾತಿ ವಿಷಯದಲ್ಲಿ ಮೂಗು ತೂರಿಸುವುದು ಸರಿಯಲ್ಲ. ವರಿಷ್ಠರನ್ನು ಮುಂದಿಟ್ಟುಕೊಂಡು ವರದಿ ಶಿಫಾರಸು ಜಾರಿ ಪ್ರಯತ್ನ ಮಾಡಬೇಡಿ, ಸಾರ್ವಜನಿಕರ ಕೂಗಿಗೆ ಮನ್ನಣೆ ನೀಡದಿದ್ದರೆ, ಅಧಿಕಾರ ಕಳೆದುಕೊಳ್ಳ ಬೇಕಾಗುತ್ತದೆ ಎಂದು ಎಚ್ಚರಿಸಿದರು.



ರಾಜ್ಯ ಸರ್ಕಾರದ ಆಡಳಿತದಲ್ಲಿ ವೈಫಲ್ಯಗಳು, ಲೋಪದೋಷಗಳು ಕಂಡುಬಂದಾಗ ಮುಖ್ಯಮಂತ್ರಿ ಅವರು ಒಂದಲ್ಲಾ ಒಂದು ವಿವಾದವನ್ನು ಮುನ್ನೆಲೆಗೆ ಬಿಟ್ಟು ತಮ್ಮ ರಾಜಕೀಯ ಚಾಣಕ್ಯತನ ತೋರುತ್ತಾರೆ. ಹನಿಟ್ರ್ಯಾಪ್, ಚಿನ್ನ ಕಳ್ಳಸಾಗಣೆ, ನಾಯಕತ್ವ ಬದಲಾವಣೆ, ಕಮಿಷನ್ ದಂಧೆ ವಿಚಾರಗಳು ಮುನ್ನೆಲೆಗೆ ಬರುತ್ತಿದ್ದಂತೆ ಕಾಂತರಾಜ್ ವರದಿ ಬಹಿರಂಗ ಪಡಿಸಿದ್ದಾರೆ.

ಇದರ ಬಗ್ಗೆ ಇನ್ನು ಮೂರು ನಾಲ್ಕು ತಿಂಗಳು ಚರ್ಚೆ ನಡೆಯುತ್ತಿರುತ್ತದೆ, ಅಲ್ಲಿಯವರೆಗೂ ಮುಖ್ಯಮಂತ್ರಿ ನಿರಾಳರಾಗಿರುತ್ತಾರೆ. ಸಿದ್ದರಾಮಯ್ಯ ಕಳೆದ 2 ವರ್ಷಗಳಿಂದ ಅಭಿವೃದ್ಧಿ ಮಾಡದೆ ಇಂತಹ ರಾಜಕೀಯ ಚಮತ್ಕಾರಗಳನ್ನು ಮಾಡಿಕೊಂಡೇ ಕಾಲ ಕಳೆದಿದ್ದಾರೆ ಎಂದು ಆರೋಪಿಸಿದರು. ಗೊಂದಲದ ಗೂಡಾಗಿರುವ ಕಾಂತರಾಜ್ ವರದಿ ಯಾರಿಗೂ ಬೇಡವಾಗಿದೆ, ಈ ವರದಿ ಬಗ್ಗೆ ನಂತರ ಬಂದ ಹಿಂದುಳಿದ ವರ್ಗಗಳ ಆಯೋಗದ ಅಧ್ಯಕ್ಷ ಜಯಪ್ರಕಾಶ್ ಹೆಗ್ಡೆ ಅವರೇ ಅಪಸ್ವರ ಎತ್ತಿದ್ದರು. ಇಂತಹ ವರದಿಯನ್ನು ಮುಖ್ಯಮಂತ್ರಿ ತಮ್ಮ ರಾಜಕೀಯ ಸ್ವಾರ್ಥಕ್ಕಾಗಿ ಬಳಸಿಕೊಳ್ಳುತ್ತಿದ್ದಾರೆಯೇ ಹೊರತು ಸಾರ್ವಜನಿಕರ ಹಿತಕ್ಕಲ್ಲ ಎಂದರು.

# 16,500 ಸರ್ಕಾರಿ ವಸತಿ ಶಾಲೆಗಳಿಗೆ ಹೊಸ ಪಾತ್ರೆ, ಉಚಿತ ವಿದ್ಯುತ್ ಸೌಲಭ್ಯ: ಮಧು ಬಂಗಾರಪ್ಪ

**ಬೆಂಗಳೂರು, ಏ.19–** ರಾಜ್ಯದ 16,500 ಸರ್ಕಾರಿ ವಸತಿ ಶಾಲೆಗಳಿಗೆ ಹೊಸ ಪಾತ್ರೆ ನೀಡುವುದಾಗಿ ಸಚಿವ ಮಧು ಬಂಗಾರಪ್ಪ ತಿಳಿಸಿದ್ದಾರೆ.

ಅಲ್ಲದೇ ವಿದ್ಯಾರ್ಥಿಗಳ ಕಲಿಕೆ ಹೆಚ್ಚಿಸುವ ನಿಟ್ಟಿನಲ್ಲಿ ಸ್ಮಾರ್ಟ್ ಕ್ಲಾಸ್ ವ್ಯವಸ್ಥೆ ಮಾಡಲಾಗುತ್ತದೆ. ಶಾಲೆಗಳಿಗೆ ಉಚಿತ ವಿದ್ಯುತ್ ಸೌಲಭ್ಯ ಕಲ್ಪಿಸುವುದಾಗಿಯೂ ಹೇಳಿದ್ದಾರೆ.

ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆ, ಬಿಳಾಗಿ ಇದರ ಸುವರ್ಣ ಮಹೋತ್ಸವ ಕಾರ್ಯಕ್ರಮವನ್ನು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಹಾಗೂ ಶಿವಮೊಗ್ಗ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್. ಮಧು ಬಂಗಾರಪ್ಪ ನವರು ಇಂದು ಶನಿವಾರ ಉದ್ಘಾಟಿಸಿದರು. ಈ ಬಳಿಕ ಮಾತನಾಡಿದರು.ಮಕ್ಕಳ ಆರೋಗ್ಯದ ದೃಷ್ಟಿಯಿಂದ ಶಾಲಾ ಅಡುಗೆಯಲ್ಲಿ ಅಲ್ಯೂಮಿನಿಯಂ ಪಾತ್ರೆಗಳ ಬಳಕೆಯನ್ನು ನಿಲ್ಲಿಸುವ ನಿರ್ಧಾರವನ್ನು ಸರ್ಕಾರ ತೆಗೆದುಕೊಂಡಿದೆ. ಈ ನಿಟ್ಟಿನಲ್ಲಿ ರಾಜ್ಯದ 16,500 ಸರ್ಕಾರಿ ಶಾಲೆಗಳಿಗೆ ಹೊಸ ಅಡುಗೆ ಪಾತ್ರೆಗಳನ್ನು ಒದಗಿಸಲಾಗುವುದು

ಮಕ್ಕಳಿಗೆ ಮೊಟ್ಟೆ ಮತ್ತು ಬಾಳೆಹಣ್ಣುಗಳನ್ನು ನೀಡಿ ಅಲ್ಯೂಮಿನಿಯಂ ಪಾತ್ರೆಗಳಲ್ಲಿ ಆಹಾರ ತಯಾರಿಸುವುದು ಒಳ್ಳೆಯದಲ್ಲ, ಹಾಗಾಗಿ ಹಳೆಯ ಪಾತ್ರೆಗಳನ್ನ ಬದಲಾಯಿಸಲಾಗುವುದು.

ಸರ್ಕಾರಿ ಶಾಲೆಗಳಲ್ಲಿ ಮಕ್ಕಳನ್ನು ಓದಿಸುವ ಮನೋಭಾವವನ್ನು ಹೆಚ್ಚಿಸುವ ಅಗತ್ಯವನ್ನು ಸಚಿವರು ಒತ್ತಿ ಹೇಳಿದರು. ದೇವಸ್ಥಾನಗಳಲ್ಲಿ ಪ್ರಾರಂಭವಾದ ಸರ್ಕಾರಿ ಶಾಲೆಗಳಲ್ಲಿ ಓದಿದ ಅನೇಕ ಮಹಾನ್ ವ್ಯಕ್ತಿಗಳು ರಾಜ್ಯದ ಉನ್ನತ ಸ್ಥಾನಗಳನ್ನು ಅಲಂಕರಿಸಿದ್ದಾರೆ. ತಮ್ಮ ತಂದೆ ಬಂಗಾರಪ್ಪನವರು ಮತ್ತು ಮುಖ್ಯಮಂತ್ರಿ ಸಿದ್ದರಾಮಯ್ಯನವರು ಸಹ ಸರ್ಕಾರಿ ಶಾಲೆಗಳಲ್ಲಿ ಓದಿದವರೇ. ಮುಂದಿನ ದಿನಗಳಲ್ಲಿ ಎಲ್.ಕೆ.ಜಿ. ಶಾಲೆಗಳನ್ನು ಪ್ರಾರಂಭಿಸುವ ಯೋಜನೆಯನ್ನು ಸರ್ಕಾರ ಹೊಂದಿದೆ. ಅಂಗನವಾಡಿಗಳಿಗೆ ತೊಂದರೆಯಾಗದ ರೀತಿಯಲ್ಲಿ ಈ ಶಾಲೆಗಳನ್ನು ಪ್ರಾರಂಭಿಸಲಾಗುವುದು. ಸರ್ಕಾರಿ ಶಾಲೆಗಳಲ್ಲಿ ಸ್ಮಾರ್ಟ್ ಕ್ಲಾಸ್ ಮತ್ತು ಟಿವಿಗಳ ಬಳಕೆಯನ್ನು ಹೆಚ್ಚಿಸಲು ಸರ್ಕಾರ ಬದ್ಧವಾಗಿದೆ. ಈ ನಿಟ್ಟಿನಲ್ಲಿ ಸುಮಾರು 46,000 ಸರ್ಕಾರಿ ಶಾಲೆಗಳಿಗೆ ಉಚಿತ ವಿದ್ಯುತ್ ಸೌಲಭ್ಯವನ್ನು ಒದಗಿಸಲಾಗಿದೆ. ಇದರಿಂದ ಮಕ್ಕಳು ಸ್ಮಾರ್ಟ್ ಕ್ಲಾಸ್ ಗಳ



ಸದುಪಯೋಗ ಪಡೆಯುತ್ತಿದ್ದಾರೆ. ತಂದೆಯವರ ಶಾಲೆಗೆ ನೆರವು:ತಮ್ಮ ತಂದೆ ಬಂಗಾರಪ್ಪನವರು ಓದಿದ ಸರ್ಕಾರಿ ಶಾಲೆಗೆ ತಮ್ಮ ಸಂಬಳದಿಂದ 10 ಲಕ್ಷ ರೂಪಾಯಿಗಳನ್ನು ನೀಡಿದ್ದಾಗಿ ಸಚಿವರು ತಿಳಿಸಿದರು.

ಅದೇರೀತಿ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಓದಿದ ಎರಡು ಸರ್ಕಾರಿ ಶಾಲೆಗಳಿಗೂ ತಲಾ 10 ಲಕ್ಷ ರೂಪಾಯಿಗಳನ್ನು ನೀಡುವ ವ್ಯವಸ್ಥೆ ಮಾಡಲಾಗಿದೆ ಎಂದು ಅವರು ಹೇಳಿದರು.ಜನರಿಗೆ ಅನುಕೂಲವಾಗುವಂತೆ ಈ ವರ್ಷ 500 ಕರ್ನಾಟಕ ಪಬ್ಲಿಕ್ ಶಾಲೆಗಳನ್ನು ಪ್ರಾರಂಭಿಸಲಾಗುವುದು.

**ಪರೀಕ್ಷಾ ವ್ಯವಸ್ಥೆಯಲ್ಲಿ ಸುಧಾರಣೆ:** ಈ ಬಾರಿ ಪರೀಕ್ಷೆಗಳಲ್ಲಿ ನಕಲು ತಡೆಯಲು ಕಟ್ಟುನಿಟ್ಟಿನ ಕ್ರಮಗಳನ್ನು ಕೈಗೊಳ್ಳಲಾಗಿತ್ತು. ಇದರಿಂದ ಉತ್ತೀರ್ಣ ಪ್ರಮಾಣ ಸ್ವಲ್ಪ ಕಡಿಮೆಯಾಗಿದೆ. ಆದರೆ ಮಕ್ಕಳ ಗುಣಮಟ್ಟ ಹೆಚ್ಚಾಗಬೇಕು ಎಂಬುದು ಸರ್ಕಾರದ ಉದ್ದೇಶ. ಪರೀಕ್ಷಾ ಕೇಂದ್ರಗಳಲ್ಲಿ ಸಿಸಿಟಿವಿ ಕ್ಯಾಮೆರಾಗಳನ್ನು ಅಳವಡಿಸಲಾಗಿದೆ. ಈ ಮಾದರಿಯನ್ನು ದೇಶದ ಹಲವು ರಾಜ್ಯಗಳು ಅನುಸರಿಸುತ್ತಿವೆ ಎಂದು ಸಚಿವರು ಹೇಳಿದರು.

ಪೋಷಕರು ತಮ್ಮ ಮಕ್ಕಳನ್ನು ಪ್ರತಿನಿತ್ಯ ಶಾಲೆಗೆ ಕಳುಹಿಸಬೇಕು ಮತ್ತು ಅವರ ಹಾಜರಾತಿಯನ್ನು ಖಚಿತಪಡಿಸಿಕೊಳ್ಳಬೇಕು ಎಂದು ಸಚಿವರು ಕರೆ ನೀಡಿದರು. ಒಂದು ದಿನ ಶಾಲೆಗೆ ಗೈರು ಹಾಜರಾದರೆ, ಆ ದಿನವನ್ನು ಮಗು ಮತ್ತೆ ಪಡೆಯಲು ಸಾಧ್ಯವಿಲ್ಲ ಎಂದು ಅವರು ಹೇಳಿದರು. ಸರ್ಕಾರಿ ಶಾಲಾ ಶಿಕ್ಷಕರು ಮಕ್ಕಳನ್ನು ಸರ್ಕಾರಿ ಶಾಲೆಗೆ ಸೇರಿಸಲು ಪ್ರೇರೇಪಿಸಬೇಕು ಮತ್ತು ಸರ್ಕಾರದ ಸೌಲಭ್ಯಗಳ ಬಗ್ಗೆ ತಿಳಿಸಬೇಕು ಎಂದು ಸಚಿವರು ತಿಳಿಸಿದರು.






ಪೂರ್ವ ಮುಂಗಾರು ಮಳೆ ಹೊಡೆತಕ್ಕೆ ಬೆಂಗಳೂರಿನ ಕಬ್ಬನ್ ಪಾರ್ಕ್‌ನಲ್ಲಿ ಸಿಲುಕಿಕೊಂಡ ಜನ

### ಒಂದೇ ಮಗು ಹೆತ್ತು ಮುಸ್ಲಿಮರಿಗೆ ಧಾರೆ ಎರೆಯಬೇಡಿ

# ಹಿಂದೂ ದಂಪತಿ ಮೂರು, ನಾಲ್ಕು ಮಕ್ಕಳಿಗೆ ಜನ್ಮ ನೀಡಿ, ನಾವು ಸಾಕುತ್ತೇವೆ: ಪ್ರಮೋದ್ ಮುತಾಲಿಕ್ ಭರವಸೆ



**ಹುಬ್ಬಳ್ಳಿ, ಏ.19–** ಒಂದು-ಎರಡು ಮಕ್ಕಳನ್ನು ಹೆತ್ತು ಆಸ್ತಿ ಮಾಡಿಟ್ಟುಕೊಂಡರೆ ಉಪಯೋಗವಿಲ್ಲ. ಅದೆಲ್ಲವೂ ಮುಮದೆ ಮುಸ್ಲಿಮರ ಪಾಲಾಗುತ್ತದೆ. ಎಲ್ಲ ಸರ್ಕಾರಗಳೂ ಮುಸ್ಲಿಮರಿಗೆ ಓಲೈಸುವ ಮೂಲಕ ನಿಮ್ಮ ಹಣವನ್ನು ಅವರಿಗೆ ಧಾರೆ ಎರೆಯುತ್ತಿದ್ದಾರೆ. ಮುಂದೆ ನಿಮ್ಮ ಆಸ್ತಿ ಪಾಸ್ತಿ ಕೂಡ ಅವರ ಪಾಲಾಗುತ್ತದೆ ಎಚ್ಚರಿಕೆ! ಆದ್ದರಿಂದ ಹಿಂದೂ ದಂಪತಿಗಳು ಮೂರು ನಾಲ್ಕು ಮಕ್ಕಳಿಗೆ ಜನ್ಮ ನೀಡಿ. ನಿಮಗೆ ಸಾಕಲಾಗದಿದ್ದರೆ ನಾವು ಅವರನ್ನು ಸಾಕಿ ಒಳ್ಳೆಯ ಶಿಕ್ಷಣ ನೀಡಿ ಬೆಳೆಸುತ್ತೇವೆ ಎಂದು ಶ್ರೀರಾಮ ಸೇನೆ ಸಂಸ್ಥಾಪಕ ಪ್ರಮೋದ ಮುತಾಲಿಕ ಹೇಳಿದರು.

ಲವ್ ಜಿಹಾದ್ ಮೂಲಕ ಮತ್ತು ಬೆದರಿಕೆಯ ಮೂಲಕ ನಮ್ಮ ಹಿಂದೂ ಯುವತಿಯರನ್ನು ಅಪಹರಿಸುತ್ತಿದ್ದಾರೆ. ಆದ್ದರಿಂದ ಮಹಿಳೆಯರು, ಯುವತಿಯರು ನಿಮ್ಮ ವ್ಯಾನಿಟಿ ಬ್ಯಾಗ್‌ನಲ್ಲಿ ತ್ರಿಶೂಲ ಇಟ್ಟುಕೊಳ್ಳಿ. ಯಾರಾದರೂ ನಿಮಗೆ ಕೆಣಕಿದರೆ ಅಥವಾ ಅತ್ಯಾಚಾರಕ್ಕೆ ಯತ್ನಿಸಿದರೆ ತ್ರಿಶೂಲದಿಂದ ಅವರಿಗೆ ಚುಚ್ಚಿಬಿಡಿ. ಅವರಿಗೆ ಎಲ್ಲಿ ಒದಿಯಬೇಕು ಅಂತ ಗೊತ್ತಿದೆಯಲ್ವಾ? ಅಲ್ಲಿಗೆ ಒದ್ದುಬಿಡಿ ಎಂದು ಸಲಹೆ ನಿಡಿದರು.

ಹುಬ್ಬಳ್ಳಿಯ ಶಿವಕೃಷ್ಣ ಮಂದಿರದಲ್ಲಿ ಶ್ರೀರಾಮ ಸೇನೆವತಿಯಿಂದ ಹಿಂದೂ ಮಹಿಳೆಯರಿಗೆ ತ್ರಿಶೂಲ ದೀಕ್ಷೆ ನೀಡಿ ಮಾತನಾಡಿದವರು, ಈ ಕಾರ್ಯಕ್ರಮಕ್ಕೆ ಬಂದ ಪ್ರತಿಯೊಬ್ಬ ಹೆಣ್ಮಕ್ಕಳಿಗೂ ಶ್ರೀರಾಮಸೇನೆ ಕಾರ್ಯಕರ್ತರು ತ್ರಿಶೂಲ ಹಂಚಿದರು. ತ್ರಿಶೂಲಗಳನ್ನು ಪಡೆದ ಮಹಿಳೆಯರು ಅದನ್ನು ಪ್ರದರ್ಶನ ಮಾಡಿದರು.

ತ್ರಿಶೂಲ ದೀಕ್ಷೆ ಬಳಿಕ ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ಪ್ರಮೋದ್ ಮುತಾಲಿಕ್, ಆಯುಧ ಪೂಜೆ ದಿನ ಮನೆಯಲ್ಲಿ ತಲವಾರ ಪೂಜೆ ಮಾಡಬೇಕು. ಆದರೆ, ಇಂದು ಪುಸ್ತಕ ಪೆನ್ನು ಇಟ್ಟು ಪೂಜೆ ಮಾಡುತ್ತಿದ್ದೇವೆ. ದುರ್ಗಾಮಾತೆಯ ಕೈಯಲ್ಲಿ ಹತ್ತು ಶಸ್ತ್ರಗಳಿವೆ. ಈಶ್ವರನ ಕೈಯಲ್ಲಿ ತ್ರಿಶೂಲವಿದೆ. ಅದನ್ನೇ ಮಹಿಳೆಯರ ಕೈಗೆ ಕೊಡುತ್ತಿದ್ದೇವೆ. ಮುಂದಿನ ಆಯುಧ ಪೂಜೆ ದಿನ ಹರಿತವಾದ ತಲವಾರ ಇಟ್ಟು ಪೂಜೆ ಮಾಡಿ ಎಂದು ಹೇಳಿದರು. ನಾವು ನೀಡುತ್ತಿರುವ ತ್ರಿಶೂಲ ಬಗ್ಗೆ ಯಾರೂ ಭಯ ಪಡಬೇಡಿ. ಹಿಡಿಕೆ ಬಿಟ್ಟು ಆರು ಇಂಚು ಉದ್ದ ಇದ್ದರೇ ಅದು ಆಯುಧವಾಗುತ್ತದೆ. ಆದರೆ, ನಾವು ನೀಡುತ್ತಿರುವುದು ಮೂರು ಇಂಚಿನ ಹಿಡಿಕೆಯ ತ್ರಿಶೂಲ. ಯಾರಾದರು ಕೇಳಿದರೆ, ಮೊದಲು ಅವರಿಗೆ ಚುಚ್ಚಿಬಿಡಿ. ಪೊಲೀಸರು ಬಂದೂಕಿಗೆ ಪೂಜೆ ಮಾಡುತ್ತಾರೆ. ಹೀಗಾಗಿ, ನಾವು ಯಾಕೆ ತ್ರಿಶೂಲ ಇಟ್ಟುಕೊಳ್ಳಲು ಭಯ ಪಡಬೇಕು ಎಂದರು.

ಇಂದಿಗೆ ಸರಿಯಾಗಿ ಒಂದು ವರ್ಷದ ಹಿಂದೆ ವಿದ್ಯಾರ್ಥಿನಿ ನೇಹಾ ಹಿರೇಮಠ ಹತ್ಯೆಯಾಯಿತು. ಹತ್ಯೆ ಮಾಡಿದ ಆರೋಪಿಗೆ ಗಲ್ಲು ಶಿಕ್ಷೆಯಾಗಬೇಕು. ಅಂದಾಗ ಮಾತ್ರ ನೇಹಾ ಹಿರೇಮಠ ಹತ್ಯೆಗೆ ನ್ಯಾಯ ಸಿಗುತ್ತದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮೂರೇ ತಿಂಗಳಿನಲ್ಲಿ ನ್ಯಾಯ ಕೊಡಿಸ್ತೇನೆ ಅಂತ ಹೇಳಿದ್ದರು. ಆದರೆ, ನಿದ್ರಾಮಯ್ಯನವರೇ ಏನು ಮಾಡುತ್ತಿದ್ದೀರಿ ಎಂದು ಆಕ್ರೋಶ ವ್ಯಕ್ತಪಡಿಸಿದರು.

ನ್ಯಾಯಾಲಯ ಆತನಿಗೆ ಜಾಮೀನು ನೀಡಿದರೆ, ನಾವೇ ಅವನನ್ನು ಕಲ್ಲು ಹೊಡೆದು ಕೊಂದು ಹಾಕುತ್ತೇವೆ. ನೇಹಾ ಹಿರೇಮಠ ಪ್ರೀತಿ ಮಾಡಿರಬಹುದು. ಆದರೆ, ಮದುವೆ ಆಗಲ್ಲ ಅಂತ ಹೇಳಿದ್ದಕ್ಕೆ ಕೊಂದು ಬಿಡುವುದಾ? ಮೋಸ ಮಾಡಿ ಹಿಂದೂ ಯುವತಿಯರನ್ನು ಲವ್ ಜಿಹಾದ್ ಮಾಡುತ್ತಿದ್ದಾರೆ. ಅಬ್ದುಲ್ಲಾ, ಅಶೋಕ ಅಂತ ಹೇಳಿ ಪ್ರೀತಿ ಮಾಡುತ್ತಾನೆ. ಪ್ರೀತಿ ಮಾಡಿ ಬುರ್ಕಾ ಹಾಕಿಸಿ, ನಮಾಜ ಮಾಡಿಸಿ ಗೋ ಮಾಂಸ ತಿನಿಸುತ್ತಿದ್ದಾರೆ. ಈ ದೇಶವನ್ನು ಮತ್ತೊಂದು ಪಾಕಿಸ್ತಾನ ಮಾಡಲು ಹೊರಟಿದ್ದಾರೆ ಎಂದು ಹೇಳಿದರು.

ಒಂಬತ್ತು ಲಕ್ಷ ಎಕರೆ ವಕ್ಫ್ ಬೋರ್ಡ್ ಅಧಿನದಲ್ಲಿದೆ. ಇದು ಐದು ಪಾಕಿಸ್ತಾನ, ಹತ್ತು ಬಾಂಗ್ಲಾದೇಶಕ್ಕೆ ಸಮಾನವಾಗಿದೆ. ಜನಸಂಖ್ಯೆ ಹೆಚ್ಚಿಸಲು ನಾಲ್ಕೈದು ಮದುವೆ ಮಾಡಿಕೊಳ್ಳುತ್ತಾರೆ. ಹಮ್ ಪಾಂಚ್, ಹಮಾರ ಪಚ್ಚೀಸ್ ಅಂತಾರೆ. ಹೀಗಾಗಿ, ಅವರಿಗೆ ಹಂದಿ ಕಂಡರೆ ಆಗಲ್ಲ. ಹಿಂದೂ ದಂಪತಿಗಳು ಮೂರು, ನಾಲ್ಕು, ಡಜನ್‌ಗಟ್ಟಲೆ ಮಕ್ಕಳಿಗೆ ಜನ್ಮ ನೀಡಿ. ಮೂರನೇ ಮಗುವಿನ ಶಿಕ್ಷಣ, ಆರೋಗ್ಯ ಜವಾಬ್ದಾರಿ ಶ್ರೀರಾಮಸೇನೆ ಹೊತ್ತುಕೊಳ್ಳುತ್ತೆ. ದೇಶ ಉಳಿಸಬೇಕಾಗಿದೆ. ನಿಮಗೆ ಸಾಕಲು ಸಾಧ್ಯವಾಗದಿದ್ದರೆ ನಾವು ಸಾಕುತ್ತೇವೆ ಎಂದರು.

# ಬಿಜೆಪಿ ಭದ್ರಕೋಟೆ ಕರಾವಳಿ ಕ್ಷೇತ್ರವನ್ನು ಕಾಂಗ್ರೆಸ್ ತೆಕ್ಕೆಗೆ ಸೆಳೆಯಲು ಡಿಕೆಶಿ ತಂತ್ರ



**ಮಂಗಳೂರು, ಏ.19–** ಡಿಸಿಎಂ ಡಿ.ಕೆ.ಶಿವಕುಮಾರ್ ಕರ್ನಾಟಕ ಕಾಂಗ್ರೆಸ್‌ನಲ್ಲಿ ಟ್ರಬಲ್ ಶೂಟರ್ ಎಂದೇ ಪ್ರಸಿದ್ಧರು. ಹಾಗೆಯೇ ಸಂಘಟನಾ ಚತುರರೂ ಹೌದು. ಕೆಪಿಸಿಸಿ ಅಧ್ಯಕ್ಷ ಗಾದಿ ವಹಿಸಿಕೊಂಡಾಗಿನಿಂದ ಹಿಡಿದು ಪ್ರಸ್ತುತ ಡಿಸಿಎಂ ಪಟ್ಟಕ್ಕೇರಿದರೂ ಹೆಜ್ಜೆಹೆಜ್ಜೆಗೂ ಸಂಘಟನಾ ಮಂತ್ರವನ್ನೇ ಜಪಿಸಿ ಕೊಂಡು ಬರುತ್ತಿರುವ ಪ್ರಭಾವಿ ನಾಯಕ.ಇಷ್ಟೇ ಅಲ್ಲ, ತನ್ನದೇ ಅಜೆಂಡಾದಲ್ಲಿ ಹಿಂದುತ್ವವನ್ನ ಟ್ರೆಂಡ್ ಸೆಟ್ ಮಾಡಿಕೊಂಡವರು. ಡಿ.ಕೆ.ಶಿವಕುಮಾರ್ ಅವರ ಈ ಹಿಂದುತ್ವ, ಎಲ್ಲೋ ಒಂದು ಕಡೆ ಬಿಜೆಪಿಯವರ ನಿದ್ದೆಗೆಡಿಸಿದ್ದೂ ಇದೆ.

ಹೀಗಾಗಿ ಡಿ.ಕೆ.ಶಿವಕುಮಾರ್ ವಿರುದ್ಧ ಬಿಜೆಪಿ ಒಂದು ಸಮಯದಲ್ಲಿ ಲೇವಡಿಯ ಯುದ್ಧ ಸಾರಿದ್ದಲ್ಲದೇ, ದೆಹಲಿಯ ಕಾಂಗ್ರೆಸ್ ಮನೆಯಂಗಳಕ್ಕೂ ಟೀಕೆಗಳ ಬಾಣಗಳನ್ನು ಹೂಡಿತ್ತು. ಹೀಗಿದ್ದರೂ ಡಿಕೆ ಶಿವಕುಮಾರ್ ಮಾತ್ರ ತಮ್ಮ ಹಿಂದುತ್ವದ ಬಗ್ಗೆ ಸ್ಪಷ್ಟನೆ ಕೊಡುತ್ತಾ ಬಿಜೆಪಿಯವರ ಬಾಯಿ ಮುಚ್ಚಿಸಿದ್ದರು.

ಡಿ.ಕೆ.ಶಿವಕುಮಾರ್ ಹಿಂದುತ್ವ ಈಗಲೂ ಒಳಗೊಳಗೆ ಭಿನ್ನವಾಗಿದೆ. ಅವರ ಹಿಂದುತ್ವದ ಸದ್ದಿನ ಹಿಂದೆ ಸಂಘಟನೆಯ ಜತೆಗೆ, ಬಿಜೆಪಿ ಭದ್ರಕೋಟೆ ಎಂದೇ ಪರಿಗಣಿಸಲ್ಪಟ್ಟಿರುವ ಕರಾವಳಿ ಕರ್ನಾಟಕದ ಮೇಲೆ ಕಣ್ಣಿಟ್ಟಿರುವ ಕಥೆಯೂ ಅನಾವರಣ ಆಗುತ್ತಿದೆ. ಕರ್ನಾಟಕ ಕರಾವಳಿ ಬಿಜೆಪಿಯ ಭದ್ರಕೋಟೆ. ದಕ್ಷಿಣ ಕನ್ನಡ ಜಿಲ್ಲೆಯ 8 ವಿಧಾನಸಭಾ ಕ್ಷೇತ್ರಗಳಲ್ಲಿ 2 ಕ್ಷೇತ್ರ ಬಿಟ್ಟು, ಉಳಿದ 6 ಕಡೆ ಕೇಸರಿ ಪತಾಕೆಯೇ ಹಾರುತ್ತಿದೆ. ಉಡುಪಿಯ 5 ವಿಧಾನಸಭಾ ಕ್ಷೇತ್ರಗಳು ಬಿಜೆಪಿ ಬುಟ್ಟಿಯಲ್ಲಿವೆ. ಇಷ್ಟೇ ಅಲ್ಲ, ಲೋಕಸಭೆ ಚುನಾವಣೆ ಯಲ್ಲಿ ದಕ್ಷಿಣ ಕನ್ನಡ, ಉಡುಪಿ-ಚಿಕ್ಕಮಗಳೂರಿನಲ್ಲಿ ಬಿಜೆಪಿಯೇ ಕಮಾಲ್ ಮಾಡಿದೆ.

ಸಾಫ್ಟ್ ಹಿಂದುತ್ವದ ಮೂಲಕ ಕರಾವಳಿ ಮರುವಶಕ್ಕೆ ಟೊಂಕ ಕಟ್ಟಿದ್ದಾರೆ. ಸಾಫ್ಟ್ ಹಿಂದುತ್ವದ ಮೂಲಕ ಡಿಕೆ ಶಿವಕುಮಾರ್ ಕರಾವಳಿಯಲ್ಲಿ ಸಂಘಟನಾ ಸೂತ್ರ ಹೆಣೆದಿದ್ದಾರೆ. ಪ್ರಮುಖವಾಗಿ ಕರಾವಳಿಯ ದೇವಸ್ಥಾನಗಳ ಭೇಟಿ, ಕಂಬಳ, ಬ್ರಹ್ಮಕಲಶೋತ್ಸವದಲ್ಲಿ ಭಾಗಿಯಾಗುತ್ತ ಸಕ್ರಿಯರಾಗಿದ್ದಾರೆ. ದಕ್ಷಿಣ ಕನ್ನಡ ಹಾಗೂ ಉಡುಪಿಯಲ್ಲಿ ಪಕ್ಷ ಬಲವರ್ಧನೆಗೆ ಒತ್ತು ನೀಡಿರುವ ಅವರು, ಕಾಂಗ್ರೆಸ್ ನಾಯಕರ ಪ್ರತಿ ಧಾರ್ಮಿಕ ಕಾರ್ಯಕ್ರಮಗಳಲ್ಲಿ ಭಾಗಿಯಾಗುತ್ತಿದ್ದಾರೆ. ತನ್ನ ಕಟ್ಟಾಳುಗಳಿಗೆ ಪಕ್ಷ ಬಲವರ್ಧನೆ ನಿಟ್ಟಿನಲ್ಲಿ ಕಾರ್ಯಕ್ರಮ ರೂಪಿಸಲು ಡಿಕೆ ಸೂಚನೆ ಕೊಟ್ಟಿದ್ದಾರೆ. ಗುರುಪುರ ಕಂಬಳ ಬೆನ್ನಲ್ಲೇ ಮತ್ತೆ ಕರಾವಳಿಗೆ ಡಿ.ಕೆ.ಶಿವಕುಮಾರ್ ಭೇಟಿ ನೀಡುತ್ತಿ ದ್ದಾರೆ. ಕರಾವಳಿಯಲ್ಲಿ ಕಾಂಗ್ರೆಸ್ ಬಲ ಕಡಿಮೆ ಇದ್ದರೂ ಪದೇಪದೇ ಅಲ್ಲಿಗೆ ಭೇಟಿ ನೀಡುತ್ತಿದ್ದಾರೆ. ಸಿಎಂ ಸಿದ್ದರಾಮಯ್ಯ ಗಿಂತಲೂ ಹೆಚ್ಚಾಗಿ ಮಂಗಳೂರಿಗೆ ಭೇಟಿ ನೀಡಿದ್ದು ಗಮನಾರ್ಹ.

# ಅಭಿವೃದ್ಧಿಯಲ್ಲಿ 2ನೇ ಸ್ಥಾನವಿದ್ದ ಕರ್ನಾಟಕವೀಗ ಭ್ರಷ್ಟಾಚಾರದಲ್ಲಿ ನಂ.1: ವಿಜಯೇಂದ್ರ



ಬೀದರ್‌ನಲ್ಲಿ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ನೇತೃತ್ವದಲ್ಲಿ ಬೃಹತ್ ಜನಾಕ್ರೋಶ ರ್‍ಯಾಲಿ ನಡೆಯಿತು.

**ಬೀದರ್, ಏ.19–** ಹಿಂದಿನ ಸರ್ಕಾರದ ಅವಧಿಯ ವರೆಗೂ ಅಭಿವೃದ್ಧಿಯಲ್ಲಿ ರಾಷ್ಟ್ರದಲ್ಲೇ ಕರ್ನಾಟಕ ನಂ.2 ಸ್ಥಾನದಲ್ಲಿದ್ದದ್ದು ಇದೀಗ ಭ್ರಷ್ಟಾಚಾರದಲ್ಲಿ ರಾಷ್ಟ್ರದಲ್ಲೇ ನಮಬರ್ ಒನ್ ಸ್ಥಾನ ಗಳಿಸಿದ್ದೇ ಸಿದ್ದರಾಮಯ್ಯ ಸರ್ಕಾರದ ಶ್ರೇಯಸ್ಸು ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಕಾಂಗ್ರೆಸ್ ಸರ್ಕಾರವನ್ನು ಕಟುವಾಗಿ ಟೀಕಿಸಿದರು.

ನಗರದಲ್ಲಿ ಆಯೋಜಿಸಿದ ಜನಾಕ್ರೋಶ ಯಾತ್ರೆಯಲ್ಲಿ ಭಾಗ ವಹಿಸಿ ಮಾತನಾಡಿದ ಅವರು, ಮುಖ್ಯಮಂತ್ರಿಗಳು ಸರ್ಕಾರದ ಜವಾಬ್ದಾರಿಗಳನ್ನು ಮರೆತಿದೆ. ಪರಿಶಿಷ್ಟ ಜಾತಿ ಪಂಗಡಗಳ ಅಭಿವೃದ್ಧಿಗೆ ಮೀಸಲಿಟ್ಟ 38,500 ಕೋಟಿ ಹಣವನ್ನು ಕಾಂಗ್ರೆಸ್ ಸರ್ಕಾರ ದುರುಪಯೋಗ ಪಡಿಸಿ ಕೊಂಡಿದೆ. ಅವರನ್ನು ಎಚ್ಚರಿಸುವುದಕ್ಕಾಗಿಯೇ ನಾವಿಂದು ಜನಾಕ್ರೋಶ ರ್‍ಯಾಲಿ ನಡೆಸುತ್ತಿದ್ದೇವೆ ಎಂದರು.

ರಾಜ್ಯದ ಮುಖ್ಯಮಂತ್ರಿಯಾಗಿ ರೈತರ ಕಣ್ಣೀರು ಒರೆಸಿದ್ದೀರಾ? ಬಡವರ ಕಣ್ಣೀರು ಒರೆಸಿದ್ದೀರಾ? ಪರಿಶಿಷ್ಟ ಜಾತಿ, ಪಂಗಡದವರ ನೋವಿಗೆ ಸ್ಪಂದಿಸಿದ್ದೀರಾ ಎಂದು ಸಿದ್ದರಾಮಯ್ಯ ನವರನ್ನು ಪ್ರಶ್ನಿಸಿದರು. ರಾಜ್ಯವು ಹಿಂದೆ ಯಡಿಯೂರಪ್ಪನವರ ನೇತೃತ್ವದಲ್ಲಿ ಅಭಿವೃದ್ಧಿ ವಿಚಾರದಲ್ಲಿ ದೇಶದಲ್ಲಿ ಎರಡನೇ ಸ್ಥಾನದಲ್ಲಿತ್ತು. ರಾಜ್ಯವು ಈಗ ಭ್ರಷ್ಟಾಚಾರದಲ್ಲಿ ನಂಬರ್ ವನ್ ಸ್ಥಾನ ಪಡೆದಿದೆ. ಮುಖ್ಯಮಂತ್ರಿಗಳ ಆರ್ಥಿಕ ಸಲಹೆಗಾರ ಬಸವರಾಜ ರಾಯರೆಡ್ಡಿ ಈ ಸರ್ಟಿಫಿಕೇಟ್ ಕೊಟ್ಟಿದ್ದಾರೆ. ಬೆಲೆ ಏರಿಕೆಯಿಂದ ಜನರು ತತ್ತರಿಸಿದ್ದಾರೆ. ಈ ಸರಕಾರದ ಅಲ್ಪಸಂಖ್ಯಾತರ ಪರ ನೀತಿಯಿಂದ ಹಿಂದೂಗಳಿಗೆ ಅನ್ಯಾಯವಾಗಿದೆ ಎಂದು ತಿಳಿಸಿದರು.

ಬಿಜೆಪಿ ಮುಸ್ಲಿಮರ ವಿರೋಧಿಯಲ್ಲ, ತ್ರಿಪಲ್ ತಲಾಖ್ ರದ್ದುಗೊಳಿಸುವ ಮೂಲಕ ನರೇಂದ್ರ ಮೋದಿ ನೇತೃತ್ವದ ಸರ್ಕಾರ ಮುಸ್ಲಿಂ ಮಹಿಳೆಯರಿಗೆ ಗೌರವ ತಂದು ಕೊಟ್ಟಿದೆ. ನಮ್ಮ ಪಕ್ಷ ಮತ್ತು ಸರ್ಕಾರ ದೇಶ ದ್ರೋಹಿಗಳ ಎಂದಿಗೂ ರಕ್ಷಿಸುವ ಕೆಲಸ ಮಾಡಲ್ಲ. ಸರ್ಕಾರ ಜಾತಿಗಣತಿ ಹೆಸರಿನಲ್ಲಿ ಮುಸ್ಲಿಮರ ಎತ್ತಿಕಟ್ಟಿ, ಹಿಂದೂಗಳಿಗೆ ಅವಮಾನಿ ಸುವ ಮತ್ತು ಎರಡು ಧರ್ಮಗಳ ನಡುವೆ ವೈರತ್ವ ಸೃಷ್ಟಿಸುವ ಕೆಲಸ ಮಾಡಿದೆ ಎಂದು ವಿಜಯೇಂದ್ರ ಕಿಡಿಕಾರಿದರು.

**"ಮೋದಿ ಪಾದದ ಧೂಳಿಗೂ ಸಮಾನರಲ್ಲ"**

ಪ್ರಧಾನಿ ನರೇಂದ್ರ ಮೋದಿ ಒಬ್ಬ ವ್ಯಕ್ತಿಯಲ್ಲ, ಅದ್ಭುತ ಶಕ್ತಿ. ಭಾರತಕ್ಕೆ ಉಜ್ವಲ ಭವಿಷ್ಯ ಇದೆ ಎಂದು ಪ್ರಜೆಗಳಲ್ಲಿ ವಿಶ್ವಾಸ ಮೂಡಿಸಿದವರು ಮೋದಿ. ಪ್ರಸ್ತುತ ಅವರ ಅಧಿಕಾರಾವಧಿಯಲ್ಲಿ ಭಾರತ ವಿಶ್ವದ ಐದನೇ ದೊಡ್ಡ ಆರ್ಥಿಕ ರಾಷ್ಟವಾಗಿ ಬೆಳೆದಿದೆ. ಮೋದಿಯವರ ಪಾದದ ಧೂಳಿಗೂ ಸಿಎಂ ಸಿದ್ದ ರಾಮಯ್ಯ ಸಮಾನರಲ್ಲ. ಅವರ ಬಗ್ಗೆ ಮಾತನಾಡುವ ಯೋಗ್ಯತೆಯೂ ಅವರಿಗಿಲ್ಲ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಹೇಳಿದರು.

# ಜಾತಿಗಣತಿ ವರದಿ: ತಪ್ಪುಹೆಜ್ಜೆ ಇಟ್ಟರೆ ಅಪಾಯ ಕಟ್ಟಿಟ್ಟ ಬುತ್ತಿ; ಸತೀಶ್ ಜಾರಕಿಹೊಳಿ ಎಚ್ಚರಿಕೆ



**ಬೆಳಗಾವಿ, ಏ.19–** ವಿವಾದಿತ ಜಾತಿ ಗಣತಿ ವರದಿ ಬಗ್ಗೆ ಮುಂದಿನ ಸಚಿವ ಸಂಪುಟದಲ್ಲಿ ಅಂತಿಮ ನಿರ್ಧಾರ ತೆಗೆದುಕೊಳ್ಳುವ ಸಾಧ್ಯತೆಗಳು ಕಡಿಮೆ ಮತ್ತು ಹಲವು ಸಂಕೀರ್ಣತೆಗಳಿಂದಾಗಿ ನಿರ್ಧಾರ ತೆಗೆದುಕೊಳ್ಳು ಒಂದು ವರ್ಷ ಸಮಯ ತೆಗೆದುಕೊಳ್ಳಲೂ ಬಹುದು ಎಂದು ಲೋಕೋಪಯೋಗಿ ಸಚಿವರೂ ಆದ ಜಿಲ್ಲಾ ಉಸ್ತುವಾರಿ ಸಚಿವ ಸತೀಶ ಜಾರಕಿಹೊಳಿ ಹೇಳಿದರು.

ಮಾಧ್ಯಮಗಳೊಂದಿಗೆ, ಜಾತಿ ಗಣತಿ ವರದಿಯ ಕುರಿತು ವಿವಿಧ ಜಾತಿಗಳು ಎತ್ತಿರುವ ಕಳವಳಗಳನ್ನು ಪರಿಹರಿಸುವಲ್ಲಿ ಯಾವುದೇ ತಪ್ಪು ಹೆಜ್ಜೆ ಇಟ್ಟರೆ ಭವಿಷ್ಯದಲ್ಲಿ ಆಡಳಿತಾರೂಢ ಕಾಂಗ್ರೆಸ್ ಪಕ್ಷಕ್ಕೆ ಅಪಾಯ ಕಟ್ಟಿಟ್ಟ ಬುತ್ತಿ ಎಂದು ಸಚಿವರು ಎಚ್ಚರಿಸಿದ್ದಾರೆ. ಜಾತಿಗಣತಿ ವರದಿಯ ಕುರಿತು ಚರ್ಚಿಸಲು ಕರೆಯಲಾದ ವಿಶೇಷ ಸಚಿವ ಸಂಪುಟ ಸಭೆಯು ಸರ್ಕಾರದೊಳಗಿನ ಆಂತರಿಕ ಭಿನ್ನಾಭಿಪ್ರಾಯಗಳಿಂದ ಯಾವುದೇ ಸ್ಪಷ್ಟ ನಿರ್ಧಾರ ಕೈಗೊಳ್ಳಲು ಸಾಧ್ಯವಾಗಿಲ್ಲ. ಹೀಗಾಗಿ ಮೇ 2 ರಂದು ಮತ್ತೆ ಈ ವಿಷಯವನ್ನು ಸಂಪುಟ ಸಭೆಯಲ್ಲಿ ವಿಸ್ತೃತವಾಗಿ ಚರ್ಚಿಸಲು ನಿರ್ಧರಿಸಲಾಗಿದೆ.

"ಇದು ಇಂದು ಅಥವಾ ನಾಳೆ ಆಗುವ ವಿಷಯವಲ್ಲ, ಒಂದು ವರ್ಷ ಸಮಯ ತೆಗೆದುಕೊಳ್ಳ ಬಹುದು. ನಾಳೆ ವರದಿ ಜಾರಿ ಆಗುತ್ತೆ ಅಂತ ನಿರೀಕ್ಷಿಸಬೇಡಿ, ಅದಕ್ಕೆ ಒಂದು ವರ್ಷ ತೆಗೆದುಕೊಳ್ಳ ಬಹುದು. ಏಕೆಂದರೆ ಹಲವು ಸಮಸ್ಯೆಗಳಿವೆ ಮತ್ತು ಅವು ಜಟಿಲವಾಗಿವೆ. ಎಲ್ಲರನ್ನೂ ಸಮಾಧಾನಪಡಿಸಿ ವಿಶ್ವಾಸಕ್ಕೆ ತೆಗೆದುಕೊಳ್ಳಬೇಕಾದರೆ, ಅನೇಕ ಸಭೆಗಳನ್ನು ನಡೆಸಬೇಕಾಗುತ್ತದೆ. ಸರ್ಕಾರ ರಾಜಿ ಮಾಡಿಕೊಳ್ಳುವ ಕ್ರಮದಲ್ಲಿರಬೇಕು. ಏಕೆಂದರೆ ಇದನ್ನು ಇದ್ದಕ್ಕಿದ್ದಂತೆ ಜಾರಿ ಮಾಡಲು ಸಾಧ್ಯವಿಲ್ಲ".

ವರದಿಯು ಬಹುತೇಕ 10 ವರ್ಷ ಹಳೆಯದಾಗಿದೆ ಮತ್ತು ಫೆಬ್ರವರಿ 2024 ರಲ್ಲಿ ಸಲ್ಲಿಕೆಯಾಗಿ ಒಂದು ವರ್ಷಕ್ಕೂ ಹೆಚ್ಚು ಸಮಯದ ನಂತರ ಸಂಪುಟ ಅದನ್ನು ಪರಿಗಣನೆಗೆ ತೆಗೆದುಕೊಂಡಿದೆ. ಈ ಬಗ್ಗೆ ಯಾವುದೇ ತುರ್ತು ನಿರ್ಧಾರ ಕೈಗೊಳ್ಳುವ ಅಗತ್ಯ ಇಲ್ಲ... ಚರ್ಚೆಗಳು ಒಂದು ವರ್ಷ ನಡೆದರೆ ಎಲ್ಲರನ್ನೂ ವಿಶ್ವಾಸಕ್ಕೆ ತೆಗೆದುಕೊಂಡು, ಸರ್ವಾನುಮತದಿಂದ ಮತ್ತು ಎಲ್ಲರ ಸಹಕಾರದೊಂದಿಗೆ ನಾವು ಅದನ್ನು ಕಾರ್ಯಗತಗೊಳಿಸಲು ಪ್ರಯತ್ನಿಸುತ್ತೇವೆ". ಮೂಲಗಳ ಪ್ರಕಾರ, ಕೆಲವು ಸಚಿವರು ಸಂಪುಟದಲ್ಲಿ ಸಮೀಕ್ಷಾ ವರದಿಯ ಬಗ್ಗೆ ತೀವ್ರ ಆಕ್ಷೇಪ ವ್ಯಕ್ತಪಡಿಸಿದ್ದಾರೆ ಮತ್ತು ಹಲವರು ವರದಿ "ಅವೈಜ್ಞಾನಿಕ ಮತ್ತು ಹಳೆಯದು" ಎಂದು ಕಳವಳ ವ್ಯಕ್ತಪಡಿಸಿದ್ದಾರೆ.

ಇದರ ನಂತರ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಎಲ್ಲಾ ಸಚಿವರು ತಮ್ಮ ಅಭಿಪ್ರಾಯಗಳನ್ನು ಲಿಖಿತವಾಗಿ ಅಥವಾ ಮೌಖಿಕವಾಗಿ ನೀಡಬೇಕೆಂದು ನಿನ್ನೆ ನಡೆದ ಸಚಿವ ಸಂಪುಟ ಸಭೆಯಲ್ಲಿ ಸೂಚಿಸಿದ್ದಾರೆ.

ಸಚಿವರ ಸಂಪುಟದಲ್ಲಿನ ಸಚಿವರ ನಡುವಿನ ವಾಗ್ವಾದದ ಬಗ್ಗೆ ಕೇಳಿದಾಗ, ಜಾರಕಿಹೊಳಿ ಅವರು ಸಾದರ ಲಿಂಗಾಯತ ಸಮುದಾಯದ ಜನಸಂಖ್ಯೆಯ ಕುರಿತು ಚರ್ಚೆಯ ಉದಾಹರಣೆಯನ್ನು ಉಲ್ಲೇಖಿಸಿದರು. ಇಂತಹ ವಿಷಯಗಳಿವೆ ಮತ್ತು ಇದೆಲ್ಲವನ್ನೂ ಹೊಂದಿಸಲು ಮತ್ತು ಚರ್ಚಿಸಲು ಸಮಯ ಬೇಕಾಗುತ್ತದೆ, ತಜ್ಞರು ಮತ್ತು ಸಮುದಾಯದ ಅಭಿಪ್ರಾಯವನ್ನು ಪಡೆಯಬೇಕಾಗಿದೆ ಎಂದು ಅವರು ತಿಳಿಸಿದರು.

### ಬಾಲಕಿಯ ಮೇಲೆ ಅತ್ಯಾಚಾರ ಕೊಲೆ ಪ್ರಕರಣ

# ಮೃತದೇಹ ಹಸ್ತಾಂತರಿಸಲು ಕುಟುಂಬಸ್ಥರ ಪತ್ತೆಗೆ ಪೊಲೀಸರ ಹರಸಾಹಸ

ಹುಬ್ಬಳ್ಳಿ, ಏ.19– 5 ವರ್ಷದ ಬಾಲಕಿಯ ಮೇಲೆ ಅತ್ಯಾಚಾರಕ್ಕೆ ಯತ್ನಿಸಿ ಆ ನಂತರ ಕತ್ತು ಹಿಸುಕಿ ಕೊಂದಿದ್ದ ನೀಚ ರಿತೇಶ್ ಕುಮಾರ್ ಈಗಾಗಲೇ ಪೊಲೀಸರ ಗುಡೆತಿಗೆ ಬಲಿಯಾಗಿದ್ದು ಪೊಲೀಸರ ಈ ಕಾರ್ಯಕ್ಕೆ ಇಡೀ ರಾಜ್ಯದ ಜನ ಪ್ರಶಂಸೆ ವ್ಯಕ್ತಪಡಿಸಿದ್ದರು.

ಆದ್ರೆ ಈ ಕೇಸ್‌ನಲ್ಲಿ ಈಗ ಹುಬ್ಬಳ್ಳಿ ಪೊಲೀಸರಿಗೆ ಹೊಸ ತಲೆ ನೋವು ಶುರುವಾಗಿದೆ.

ಈಗಾಗಲೇ ಪೋಲೀಸರ ಗುಂಡೇಟಿಗೆ ಉಸಿರು ಚೆಲ್ಲಿರುವ ಆರೋಪಿಯ ಮೃತದೇಹ ಇನ್ನೂ ಕೂಡ ಶವಾಗಾರದಲ್ಲೇ ಇರಿಸಲಾಗಿದ್ದು ಈತನ ಕುಟುಂಬಸ್ಥರನ್ನು ಪತ್ತೆ ಹಚ್ಚಿ ಮೃತದೇಹ ಹಸ್ತಾಂತರಿಸಲು ಸಾಧ್ಯವಾಗಿಲ್ಲ.

ಹೀಗಾಗಿ ಪೊಲೀಸರ ಹುಡುಕಾಟ ಮುಂದುವರೆದಿದೆ. ಈ ಆರೋಪಿಯ ಕುಟುಂಬಸ್ಥರ ಸುಳಿವು ಪತ್ತೆಹಚ್ಚಲು ಪೊಲೀಸರಿಗೆ ದೊಡ್ಡ ಸಮಸ್ಯೆ ಆಗಿದ್ದು ಹಿಂದಿ ಭಾಷಿಕ ಎಲ್ಲ ರಾಜ್ಯಗಳಿಗೂ ಪ್ರತ್ಯೇಕ ತಂಡಗಳನ್ನು ರವಾನಿಸಿ, ಆತನ ಪರಿಚಯಸ್ಥರು, ಕುಟುಂಬಸ್ಥರ ಪತ್ತೆ ಕಾರ್ಯ ಮುಂದುವರೆದಿದೆ. ಈ ಪೈಕಿ ಒಂದು ತಂಡ ಹುಬ್ಬಳ್ಳಿ-ಧಾರವಾಡದಿಂದ ಬಿಹಾರಕ್ಕೆ ತೆರಳಿ ವಾಟ್ಲಾ ಸುತ್ತಮುತ್ತ ಹುಟುಕಾಟ ಮುಂದುವರಿಸಿದೆ.

ಸ್ಥಳೀಯ ಗ್ರಾಮಗಳಲ್ಲಿ ಆರೋಪಿ ರಿತೇಶಕುಮಾರ ಭಾವಚಿತ್ರ ಹಿಡಿದು ಪೊಲೀಸರು ಹುಡುಕಾಟ ನಡೆಸಿದ್ದಾರೆ.

ಆದರೆ ಇದುವರೆಗೂ ಪೊಲೀಸರ ತಂಡಕ್ಕೆ ಇದುವರೆಗೂ ಯಾವುದೇ ಸುಳಿವು ಸಿಕ್ಕಿಲ್ಲ. ಹೀಗಾಗಿ ಉತ್ತರ ಪ್ರದೇಶ, ಮಧ್ಯಪ್ರದೇಶ, ಜಾರ್ಖಂಡ್, ಹಿಮಾಚಲ ಪ್ರದೇಶ, ಛತ್ತಿಸಗಡ್ ಹಾಗೂ ಹರಿಯಾಣ ಸೇರಿದಂತೆ ಹಲವು ರಾಜ್ಯಗಳಿಗೆ ಪೊಲೀಸ್ ತಂಡವನ್ನು ಕಳುಹಿಸಲಾಗಿದೆ.

### ನರೇಗಾ ಮಾನವ ದಿನಗಳ ಸೃಜನೆ

# ಬೀದರ್ ರಾಜ್ಯದಲ್ಲೇ 3ನೇ ಸ್ಥಾನದಲ್ಲಿ: ಸಿಇಓ ಬದೋಲೆ



**ಬೀದರ್, ಏ.19–** ಗ್ರಾಮೀಣ ಪ್ರದೇಶದ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡಗಳು, ಅತೀ ಸಣ್ಣ ರೈತರು ಮತ್ತು ಮಹಿಳೆಯರಿಗೆ ಉದ್ಯೋಗವಕಾಶ ಕಲ್ಪಿಸಿಕೊಟ್ಟು ಅವರ ಸ್ವಾವಲಂಬಿ ಬದುಕಿಗೆ ಆಸರೆಯಾಗುವ ಮಹಾತ್ವಾಕಾಂಕ್ಷಿ ಯೋಜನೆ ಮಹಾತ್ಮಗಾಂಧಿ ನರೇಗಾ ಯೋಜನೆಯಡಿ 2024-25ನೇ ಸಾಲಿನಲ್ಲಿ ಬೀದರ್‌ಜಿಲ್ಲೆಯು ಅತಿಹೆಚ್ಚು ಮಾನವ ದಿನಗಳನ್ನು ಸೃಜಿಸಿದ ಜಿಲ್ಲೆಗಳಲ್ಲಿ ಬೀದರ ಜಿಲ್ಲೆ ಒಂದಾಗಿದ್ದು ಬೀದರ್ ಜಿಲ್ಲೆಯು ರಾಜ್ಯದಲ್ಲಿ 3ನೇ ಸ್ಥಾನದಲ್ಲಿದೆ ಎಂದು ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ.ಗಿರೀಶ ಬದೋಲೆ ತಿಳಿಸಿದ್ದಾರೆ.

ಬೀದರ್ ಜಿಲ್ಲೆಗೆ 2024-25ನೇ ಸಾಲಿನಲ್ಲಿ 50.00 ಲಕ್ಷ ಮಾನವ ದಿನಗಳ ಸೃಜನೆಯ ಗುರಿ ನೀಡಲಾಗಿತ್ತು. ಮಾರ್ಚ.31, 2025ಕ್ಕೆ ಕೊನೆಗೊಂಡ ಆರ್ಥಿಕ ವರ್ಷದಲ್ಲಿ ಬೀದರ ಜಿಲ್ಲೆಯು 62,28,784 ಮಾನವದಿನಗಳನ್ನು ಸೃಜಿಸುವ ಮೂಲಕ 130.58% ಸಾಧನೆ ಮಾಡಿ ರಾಜ್ಯದಲ್ಲಿ ಅತೀ ಹೆಚ್ಚು ಮಾನವದಿನ ಸೃಜನೆ ಮಾಡಿದ ಜಿಲ್ಲೆಗಳಲ್ಲಿ 3ನೇ ಸ್ಥಾನವನ್ನು ಪಡೆದಿದೆ ಮತ್ತು ಕಲ್ಯಾಣ ಕರ್ನಾಟಕ ಪ್ರದೇಶದ ಜಿಲ್ಲೆಗಳಲ್ಲಿ ಮೊದಲನೆ ಸ್ಥಾನದಲ್ಲಿದೆ ಎಂದೂ ಹೇಳಿದರು.

ಬೀದರ್ ಜಿಲ್ಲೆಯಲ್ಲಿ 2,57,344 ಉದ್ಯೋಗ ಚೀಟಿಗಳಿದ್ದು ಅದರಲ್ಲಿ 1,62,841 ಕ್ರಿಯಾಶೀಲ ಉದ್ಯೋಗ ಚೀಟಿಗಳಿರುತ್ತವೆ. ಜಿಲ್ಲೆಯಲ್ಲಿ 2024-25ನೇ ಸಾಲಿನಲ್ಲಿ 1,27,932 ಕುಟುಂಬಗಳಿಗೆ ಕೂಲಿ ನೀಡಲಾಗಿದೆ. ಅದರಲ್ಲಿ 31,190 ಕುಟುಂಬಗಳು ಪರಿಶಿಷ್ಟಜಾತಿಗೆ ಸೇರಿದ್ದರೆ 22,524 ಕುಟುಂಬಗಳು ಪರಿಶಿಷ್ಟ ಪಂಗಡಕ್ಕೆ ಸೇರಿರುತ್ತವೆ. ಅತಿಸಣ್ಣ ರೈತರು ಮತ್ತು ಇತರೆ ಹಿಂದುಳಿದ ವರ್ಗಗಳಿಗೆ ಸೇರಿದ ಕುಟುಂಬಗಳು 74,217 ಆಗಿರುತ್ತದೆ, ಒಟ್ಟು ಕೂಲಿಕಾರರಲ್ಲಿ 1,07,984 ಮಹಿಳೆಯರಿಗೆ ಕೂಲಿ ಕೆಲಸ ನೀಡಲಾಗಿದೆ. ಒಟ್ಟು ಸೃಜಿಸಿದ 62,28,784 ಮಾನವ ದಿನಗಳಲ್ಲಿ 35,62,252 ಮಾನವ ದಿನಗಳನ್ನು ಮಹಿಳಾ ಕೂಲಿಕಾರರಿಂದ ಸೃಜಿಸಲಾಗಿದ್ದು, ಇದು ಪ್ರತಿಶತ 54.56% ಆಗಿರುತ್ತದೆ. 519 ವಿಕಲ ಚೇತನರಿಗೆ ಕೂಲಿ ಕೆಲಸ ನೀಡಲಾಗಿದೆ. ಬೀದರ ಜಿಲ್ಲೆಯಲ್ಲಿ 2024-25ನೇ ಸಾಲಿನಲ್ಲಿ 1033 ಕುಟುಂಬಗಳ ಕೂಲಿಕಾರರು ಪೂರ್ಣ 100 ದಿನಗಳ ಕೆಲಸ ಪಡೆದಿದ್ದಾರೆ ಎಂದರು.

ಮಹಾತ್ಮ ಗಾಂಧಿ ನರೇಗಾ ಯೋಜನೆಯು ಜಿಲ್ಲೆಯ ಗ್ರಾಮೀಣ ಪ್ರದೇಶದ ಕುಟುಂಬಗಳ ಆರ್ಥಿಕ ಪುನಶ್ಚೇತನಕ್ಕೆ ನೆರವಾಗುವುದಲ್ಲದೆ ಬಡ ಕೂಲಿಕಾರ್ಮಿಕರು ಉದ್ಯೋಗ ಅರಸಿ ಮುಂಬೈ, ಪುಣೆ, ಹೈದರಾಬಾದ ಮತ್ತು ಬೆಂಗಳೂರು ನಗರ ಪ್ರದೇಶಗಳಿಗೆ ವಲಸೆ ಹೋಗುವುದನ್ನು ತಪ್ಪಿಸುವಲ್ಲಿ ಸಹಕಾರಿಯಾಗಿದೆ.

ಹಾಗೆಯೇ ಬೀದರ ಜಿಲ್ಲೆಯ ಗ್ರಾಮೀಣ ಕೂಲಿಕಾರರು 2025-26ನೇ ಸಾಲಿನಲ್ಲಿಯೂ ಸಹ ಅತೀ ಹೆಚ್ಚು ಸಂಖ್ಯೆಯಲ್ಲಿ ಮಹಾತ್ಮಗಾಂಧಿ ನರೇಗಾ ಯೋಜನೆಯಡಿ ಕೆಲಸ ಮಾಡುವ ಮೂಲಕ ಯೋಜನೆಯ ಸದುಪಯೋಗ ಪಡೆದುಕೊಳ್ಳಲು ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಡಾ.ಗಿರೀಶ ಬದೋಲೆ ತಿಳಿಸಿದ್ದಾರೆ.

# ಸರ್ಕಾರಿ ಹುದ್ದೆಗಾಗಿ ನಗರಸಭಾಧ್ಯಕ್ಷೆ ಸ್ಥಾನಕ್ಕೆ ರಾಜಿನಾಮೆ: ರಾಜಕೀಯಕ್ಕೂ ವಿದಾಯ



**ರಾಯಚೂರು, ಏ.19–** ಸರ್ಕಾರಿ ಹುದ್ದೆಯಲ್ಲಿರುವವರು ರಾಜಿನಾಮೆ ನೀಡಿ ರಾಜಕೀಯಕ್ಕೆ ಪ್ರವೇಶ ಮಾಡುವವರ ಸಂಖ್ಯೆಯೇ ಹೆಚ್ಚು ಮತ್ತು ಸಾಮಾನ್ಯ. ಆದರೆ, ಜಿಲ್ಲೆಯ ಸಿಂಧನೂರು ನಗರಸಭೆ ಅಧ್ಯಕ್ಷೆ ಪ್ರಿಯಾಂಕಾ ಮಾತ್ರ ಇದಕ್ಕೆ ವ್ಯತಿರಿಕ್ತ. ರಾಜಕೀಯಕ್ಕೆ ವಿಧಾಯ ಹೇಳಿ ಸರ್ಕಾರಿ ಕೆಲಸಕ್ಕೆ ಜೈ ಎಂದಿದ್ದಾರೆ.

ಹೌದು.. ಇಂಜಿನಿಯರಿಂಗ್ ಪದವೀಧರೆಯಾಗಿರುವ ಪ್ರಿಯಾಂಕಾ ನಾಯಕ್ ಸರ್ಕಾರಿ ಹುದ್ದೆಗಾಗಿ ಸಿಂಧನೂರು ನಗರಸಭೆ ಅಧ್ಯಕ್ಷೆ ಹಾಗೂ ಸದಸ್ಯತ್ವಕ್ಕೆ ರಾಜೀನಾಮೆ ನೀಡಿ ಎಲ್ಲರ ಗಮನಸೆಳೆದಿದ್ದಾರೆ.

ಇಂಜಿನಿಂ)ರಿಂಗ್ ಪದವೀಧರೆಯಾಗಿರುವ ಪ್ರಿಯಾಂಕಾ ಅವರು ಇತ್ತೀಚೆಗೆ ಸ್ಪರ್ಧಾತ್ಮಕ ಪರೀಕ್ಷೆ ಬರೆದಿದ್ದರು. ಇದೀಗ ಹುದ್ದೆಯ ಅಂತಿಮ ಪಟ್ಟಿಯಲ್ಲಿ ಪ್ರಿಯಾಂಕಾ ಅವರ ಹೆಸರು ಆಯ್ಕೆ ಪಟ್ಟಿಯಲ್ಲಿ ಬಂದಿದೆ. ಹೀಗಾಗಿ ಅವರು ಸರ್ಕಾರಿ ಹುದ್ದೆಯನ್ನು ಆಯ್ಕೆ ಮಾಡಿದ್ದು, ನಗರಸಭೆ ಅಧ್ಯಕ್ಷ ಸ್ಥಾನಕ್ಕೆ ರಾಜೀನಾಮೆ ನೀಡಿದ್ದಾರೆ. ಪ್ರಿಯಾಂಕಾ ಅವರು ಈಗಾಗಲೇ ರಾಯಚೂರು ಜಿಲ್ಲಾಧಿಕಾರಿಗೆ ನಗರಸಭೆ ಅಧ್ಯಕ್ಷೆ ಹಾಗೂ ಸದಸ್ಯತ್ವ ಸ್ಥಾನಕ್ಕೆ ರಾಜೀನಾಮೆ ಪತ್ರವನ್ನೂ ಸಲ್ಲಿಸಿದ್ದಾರೆ.

**2 ಬಾರಿ ನಗರಸಭೆ ಅಧ್ಯಕ್ಷ ಲಕ್:** ಒಟ್ಟು 32 ಸದಸ್ಯ ಬಲದ ಸಿಂಧನೂರು ನಗರಸಭೆಯಲ್ಲಿ ಅಧ್ಯಕ್ಷ ಸ್ಥಾನ ಎಸ್‌ಟಿ ಮೀಸಲಾತಿ ಬಂದಿತ್ತು. ಕಾಂಗ್ರೆಸ್ ಪಕ್ಷದ ಸದಸ್ಯ ಬಲ 20 ಇದ್ದರೂ ಎಸ್‌ಟಿ ಸದಸ್ಯರಿರಲಿಲ್ಲ. ಇದರಿಂದ ಜೆಡಿಎಸ್ ಸದಸ್ಯೆಯಾಗಿದ್ದ ಪ್ರಿಯಾಂಕಾ ನಾಯಕ್ ಕಳೆದ ಅವಧಿಯಲ್ಲೂ ಸಹ ಒಂದು ಸಲ ಅವಿರೋಧವಾಗಿ ಅಧ್ಯಕ್ಷರಾಗಿದ್ದರು. ಈ ಬಾರಿಯೂ ಅದೇ ಮೀಸಲಾತಿ ಬಂದಿತ್ತು. ಈ ಸಂಬಂಧ ಕಾಂಗ್ರೆಸ್ ನಾಯಕರು ಕೋರ್ಟ್ ಹೋಗಿದ್ದರೂ ಸಹ ಫಲಕೊಟ್ಟಿರಲಿಲ್ಲ. ಕೊನೆಗೆ ಕಾಂಗ್ರೆಸ್ ನಾಯಕರು, ಪ್ರಿಯಾಂಕಾ ಅವರನ್ನು ಸೆಳೆದು ತಮ್ಮ ಪಕ್ಷದಿಂದ ಬೆಂಬಲ ನೀಡಿ ಅಧ್ಯಕ್ಷರನ್ನಾಗಿ ಮಾಡಿದ್ದರು. ಹೀಗೆ ಅದೃಷ್ಟದ ಮೇಲೆ ಎರಡನೇ ಬಾರಿ ಸಿಂಧನೂರು ನಗರಸಭೆ ಅಧ್ಯಕ್ಷರಾಗುವ ಲಕ್ ಖುಲಾಯಿಸಿತು. ಆದ್ರೆ, ಇದೀಗ ಅಧ್ಯಕ್ಷೆಯಾಗಿ ಎರಡು ತಿಂಗಳ ಅಧಿಕಾರಾವಧಿ ಪೂರೈಸಿರುವ ಪ್ರಿಯಾಂಕಾ ನಾಯಕ್ ಈಗ ತಮ್ಮ ಸ್ಥಾನ ರಾಜೀನಾಮೆ ಸಲ್ಲಿಸಿ ಸರ್ಕಾರಿ ಕೆಲಸ ಹಿಡಿಯಲು ಹೊರಟಿದ್ದಾರೆ.

**ಸಿಂಧನೂರು ಕಾಂಗ್ರೆಸ್ ಹಾಗೂ ಬಿಜೆಪಿಯಲ್ಲಿ ಯಾರು ಎಸ್‌ಟಿ ಮಹಿಳಾ ಸದಸ್ಯೆ ಇಲ್ಲ. ಜೆಡಿಎಸ್‌ನಿಂದ ಗೆದ್ದಿರುವುದು ಪ್ರಿಯಾಂಕಾ ಮಾತ್ರ. ಆದ್ರೆ, ಇದೀಗ ಅವರು ರಾಜೀನಾಮೆ ನೀಡಿದ್ದರಿಂದ ಮುಂದಿನ ಅಧ್ಯಕ್ಷರು ಯಾರು ಆಗುತ್ತಾರೆ ಎನ್ನುವುದೇ ಕುತೂಹಲಕ್ಕೆ ಕಾರಣವಾಗಿದೆ. ಮೀಸಲಾತಿ ಹೊರತುಪಡಿಸಿ ಅಧಿಕಾರಕ್ಕೇರಲು ಬರುವುದಿಲ್ಲ. ಹೀಗಾಗಿ ಈ ವಿಚಾರವನ್ನು ಸರ್ಕಾರದ ಗಮನಕ್ಕೆ ತಂದು ಮೀಸಲಾತಿ ಬದಲಿಸಬೇಕಿದೆ.**

ನಗರಸಭೆ ಆಡಳಿತ ಅಧಿಕಾರವಧಿ ಅಕ್ಟೋಬರ್ ಅಂತ್ಯಕ್ಕೆ ಪೂರ್ಣಗೊಳ್ಳಲಿದೆ. ಪ್ರಿಯಾಂಕಾ ಮಾತ್ರ ಸರ್ಕಾರಿ ಹುದ್ದೆಗೇರಲು ಅಧಿಕಾರವಧಿ ಮುಗಿಯುವ ಮುನ್ನವೇ ಅಧ್ಯಕ್ಷ ಸ್ಥಾನಕ್ಕೆ ಗುಡ್‌ಬೈ ಹೇಳಿದ್ದಾರೆ. ಮತದಾರ ಉತ್ತುಂಗ ಏರಿಸಬಹುದು ಇಲ್ಲ ಮಕಾಡೆ ಮಲಗಿಸಬಹುದು. ಇದನೆಲ್ಲಾ ಅಳೆದು ತೂಗಿ ಕೊನೆಗೆ ರಾಜಕೀಯಕ್ಕೆ ಗುಡ್‌ಬೈ ಹೇಳಿ ಸರ್ಕಾರಿ ಕೆಲಸದತ್ತ ಮುಖ ಮಾಡಲು ತೀರ್ಮಾನಿಸಿದ್ದಾರೆ. ಭವಿಷ್ಯದ ದೃಷ್ಟಿಯಿಂದ ರಾಜಕೀಯ ಕ್ಕಿಂತ ಸರ್ಕಾರಿ ಹುದ್ದೆಯೇ ಬೆಸ್ಟ್ ಮತ್ತು ಶಾಶ್ವತ ಎಂದು ಈ ತೀರ್ಮಾನ ಕೈಗೊಂಡಿರುವುದಾಗಿ ಪ್ರಿಯಾಂಕಾ ತಮ್ಮ ಆಪ್ತರ ಬಳಿ ಹೇಳಿಕೊಂಡಿದ್ದಾರಂತೆ.

### ಪುಸ್ತಕಗಳು ಮಕ್ಕಳಿಗೆ ಕೇವಲ ಓದಿಗೆ ಮಾತ್ರವಲ್ಲ

# ಸೃಜನಶೀಲತೆಯ ದಿಕ್ಕಿಗೆ ಕೊಂಡೊಯ್ಯುವ ಸಾಮರ್ಥ್ಯ ಹೊಂದಿವೆ-ಶಿಲ್ಪಾ ಪ್ರತಿಪಾದನೆ



**ಬಳ್ಳಾರಿ, ಏ.19–** ಇನ್ನರ್ ವೀಲ್ ಕ್ಲಬ್, ಬಳ್ಳಾರಿ ವತಿಯಿಂದ ಶ್ರೀ ವಾಸವಿ ವಿದ್ಯಾಲಯದಲ್ಲಿ ವಿಶೇಷ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು. ಶಾಲೆಯ ವಿದ್ಯಾರ್ಥಿಗಳಿಗೆ ಉಚಿತವಾಗಿ ಬೇಸಿಗೆ ಶಿಬಿರದ ಪುಸ್ತಕಗಳನ್ನು ವಿತರಿಸುವುದು ಈ ಕಾರ್ಯಕ್ರಮದ ಉದ್ದೇಶವಾಗಿತ್ತು. ಈ ವಿಶೇಷ ಕಾರ್ಯಕ್ರಮದಲ್ಲಿ ವಾಸವಿ ಎಜ್ಯುಕೇಶನ್ ಟಸ್ಟ್ ಅಧ್ಯಕ್ಷ ವಿಠಲ ಕೃಷ್ಣಕುಮಾರ್, ಕಾರ್ಯದರ್ಶಿ ಪಿ.ಎನ್.ಸುರೇಶ್, ಇನ್ನರ್‌ವೀಲ್ ಕ್ಲಬ್ ಅಧ್ಯಕ್ಷ ಶಿಲ್ಪಾ, ಕಾರ್ಯದರ್ಶಿ ಅಲ್ಲಂ ರಚನಾ, ಖಜಾಂಚಿ ಭಾರತಿ ಪಾಟೀಲ್, ಇಂದಿರಾ, ಸದಸ್ಯರು, ಸಿಬ್ಬಂದಿ ವರ್ಗ ಮತ್ತು ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

ಇನ್ನರ್ ವೀಲ್ ಕ್ಲಬ್ ಅಧ್ಯಕ್ಷೆ ಶಿಲ್ಪಾ ಮಾತನಾಡಿ ಇಂತಹ ಪುಸ್ತಕಗಳು ಮಕ್ಕಳಿಗೆ ಕೇವಲ ಓದು ಮಾತ್ರವಲ್ಲ, ಅವರನ್ನು ಸೃಜನಶೀಲತೆಯ ದಿಕ್ಕಿಗೆ ಕರೆದುಕೊಂಡು ಹೋಗುವ ಸಾಧ್ಯತೆ ಹೊಂದಿವೆ ಎಂದು ಪ್ರಶಂಸಿಸಿದರು. ಈ ಪುಸ್ತಕಗಳಲ್ಲಿ ಮಕ್ಕಳ ಬುದ್ಧಿ ವಿಕಾಸಕ್ಕೆ ಸಹಾಯಕ ವಾಗುವ ವಿಷಯಗಳು ಒಳಗೊಂಡಿವೆ ಎಂದು ಇನ್ನರ್ ವೀಲ್ ಕ್ಲಬ್‌ನ ಕಾರ್ಯದರ್ಶಿಗಳಾದ ಅಲ್ಲಂ ರಚನಾ ಅಭಿಪ್ರಾಯವನ್ನು ವ್ಯಕ್ತಪಡಿಸಿ ದರು.

### ಸರ್ಕಾರ ಬೀಳಿಸೋದು ನರೇಂದ್ರ ಮೋದಿ-ಅಮಿತ್ ಶಾ ಅಲ್ಲ.

## ಪುತ್ರನಿಗೆ ಸಿಎಂ ಪಟ್ಟ ಕಟ್ಟಲು ಮಲ್ಲಿಕಾರ್ಜುನ ಖರ್ಗೆ ಭಾರಿ ತಂತ್ರ: ಶ್ರೀರಾಮುಲು

**ಕಲಬುರಗಿ, ಏ.19–** ಸಿಎಂ ಸಿದ್ದರಾಮಯ್ಯ ಮತ್ತು ಡಿಸಿಎಂ ಡಿ.ಕೆ.ಶಿವಕುಮಾರ ನಡುವಿನ ಕುರ್ಚಿಗಾಗಿ ನಡೆಯುತ್ತಿರುವ ಆಂತರಿಕ ಕಲಹದ ಮಧ್ಯೆಯೇ ಈ ಸರ್ಕಾರ ಬೀಳಿಸಿ, ತಮ್ಮ ಪುತ್ರ ಹಗೂ ಸಚಿವ ಪ್ರಿಯಾಂಕ್ ಖರ್ಗೆ ಅವರನ್ನು ಸಿಎಂ ಮಾಡುವ ಪ್ಲಾನ್ ಐಐಸಿಸಿ ಅಧ್ಯಕ್ಷ ಮಲ್ಲಿಕಾಜರ್ುನ ಖರ್ಗೆ ಮಾಡಿದ್ದಾರೆ ಎಂದು ಮಾಜಿ ಸಚಿವ ಬಿಜೆಪಿ ಧುರೀಣ ಬಿ.ಶ್ರೀರಾಮುಲು ಸ್ಫೋಟಕ ಹೇಳಿದರು.

ಕಲಬುರಗಿ–ಬೀದರ ಜನಾಕ್ರೋಶ ರ್ಯಾಲಿಯ ನಂತರ ಬೆಂಗಳೂರಿಗೆ ತೆರಳುವ ಮುನ್ನ ಮಾಧ್ಯಮಗಳೊಂದಿಗೆ ಮಾತನಾಡಿ, ಕಲಬುರಗಿಯಲ್ಲಿ ನಡೆದ ಉದ್ಯೋಗ ಮೇಳದಲ್ಲಿ ನೀವು ಹೀಗೇ ಜಗಳವಾಡಿಕೊಂಡಿದ್ದರೆ ಮೋದಿ–ಅಮಿತ್ ಶಾ ನಿಮ್ಮ ಸರ್ಕಾರ ಬೀಳಿಸುತ್ತಾರೆ ಎಂದು ಖರ್ಗೆ ಎಚ್ಚರಿಕೆ ನೀಡಿದ್ದನ್ನು ಉಲ್ಲೇಖಿಸಿದ ಅವರು, 2013ರಲ್ಲೇ ಮಲ್ಲಿಕಾರ್ಜುನ ಖರ್ಗೆಗೆ ಮುಖ್ಯಮಂತ್ರಿಯಾಗುವ ಪ್ರಯತ್ನ ನಡೆಸಿದ್ದರು. ಅದನ್ನು ತಪ್ಪಿಸಿ ಸಿದ್ದರಾಮಯ್ಯ ಮುಖ್ಯಮಂತ್ರಿಯಾದರು. ಆಗಲೇ ಸಿಡುಕಿನಿಂದ ಸಭೆಯಿಂದ ಹೊರ ಬಂದಿದ್ದರು. ತಮ್ಮ ಕನಸಂತೂ ನನಸಾಗಲಿಲ್ಲ. ತಮ್ಮ ಕಣ್ಮುಂದೆ ತಮ್ಮ ಪುತ್ರ ಪ್ರಿಯಾಂಕ್ ಖರ್ಗೆಯಾದರೂ ಮುಖ್ಯಮಂತ್ರಿಯಾಗುವುದನ್ನು ನೋಡಬೇಕೆಂಬ ಕನಸು ಮಲ್ಲಿಕಾರ್ಜುನ ಖರ್ಗೆ ಅವರದು. ಈ ಸಂಚಿನ ಭಾಗವಾಗಿ ಸರ್ಕಾರ ಬೀಳಿಸಲು ದಿಲ್ಲಿಯಲ್ಲಿ ಸಂಚು ನಡೆದಿದೆ. ನೀವು ಎಚ್ಚರಿಕೆಯಿಂದ ಇರಿ ಎಂದು ಸಿಎಂ–ಡಿಸಿಎಂಗೆ ಖರ್ಗೆ ಅವರು ಎಚ್ಚರಿಕೆ ನೀಡಿದ್ದರು. ಆದರೆ ಈಗ ದಿಲ್ಲಿಯಲ್ಲಿ ಎಐಸಿಸಿ ಅಧ್ಯಕ್ಷರಾಗಿರುವವರು ಮಲ್ಲಿಕಾರ್ಜುನ ಖರ್ಗೆ ಅವರೇ ಸರ್ಕಾರವನ್ನು ಬೀಳಿಸಲಿದ್ದು, ಇಬ್ಬರ ಜಗಳದಲ್ಲಿ ಮೂರನೇಯವರಿಗೆ ಲಾಭ ಎನ್ನುವಂತೆ ತಮ್ಮ ಪುತ್ರನನ್ನು ಸಿಎಂ ಮಾಡಲು ಸಂಚು ರೂಪಿಸಿದ್ದಾರೆ ಎಂದು ರಾಮುಲು ಆರೋಪಿಸಿದರು.



ಸಿದ್ದರಾಮಯ್ಯ, ಡಿಕೆಶಿ ನಡುವೆ ಸಿಎಂ ಗಾದಿಗಾಗಿ ಫೈಟ್ ನಡೆದಿದೆ. ಇದರ ನಡುವೆ ಮೂರನೇ ವ್ಯಕ್ತಿ ಪ್ರವೇಶಿಸಲಿದ್ದಾರೆ. ಅವರ ಮಲ್ಲಿಕಾರ್ಜುನ ಖರ್ಗೆ. .ತಮ್ಮ ಮಗನನ್ನು ಸಿಎಂ ಮಾಡಲು ಮಧ್ಯಪ್ರವೇಶಿಸಲಿದ್ದಾರೆ. ದಿಲ್ಲಿಯಿಂದ ಸರ್ಕಾರ ಬೀಳಿಸಲು ಸಂಚು ನಡೆದಿದೆ ಎಂದು ನಮ್ಮ ಹೈಕಮಾಂಡ್‌ನತ್ತ ಖರ್ಗೆ ಅವರು ಬೊಟ್ಟು ಮಾಡಿದ್ದಾರೆ. ಪ್ರಧಾನಿ ನರೇಂದ್ರ ಮೋದಿಯವರಿಗೆ ಇವರ ಸರ್ಕಾರ ಬೀಳಿಸುವ ಯಾವ ಕರ್ಮವೂ ಬಂದಿಲ್ಲ ಎಂದು ರಾಮುಲು ತಿರುಗೇಟು ನೀಡಿದರು.

ತಂದೆ–ಮಗ ಸೇರಿ ಜಿಲ್ಲೆಯನ್ನು ರಿಪಬ್ಲಿಕ್ ಆಫ್ ಕಲಬುರಗಿ ಮಾಡಿದ್ದಾರೆ. ಅವರ ವಿರುದ್ಧ ಧ್ವನಿ ಎತ್ತಿದವರ ವಿರುದ್ಧ ಪೊಲೀಸ್ ಬಳಸಿಕೊಂಡು ಎಫ್‌ಐಆರ್ ದಾಖಲಿಸಲಾಗುತ್ತಿದೆ. ಚಿತ್ತಾಪುರದಲ್ಲಿ ಬಿಜೆಪಿಯವರು ಕಾಲಿಡದಂತೆ ಮಾಡುತ್ತೇನೆ ಎಂದು ಪ್ರಿಯಾಂಕ್ ಖರ್ಗೆ ಬಹಿರಂಗ ಸಭೆಯಲ್ಲಿ ಬಿಜೆಪಿಯವರಿಗೆ ಎಚ್ಚರಿಕೆ ನೀಡಿದ್ದು ಸಾಮಾಜಿಕ ಜಾಲತಾಣ ಗಳಲ್ಲಿನ್ನೂ ಹರಿದಾಡುತ್ತಿರುವುದನ್ನು ನೋಡ ಬಹುದು. ಇದು ಗೂಂಡಾಗಿರಿಯಲ್ಲದೇ ಮತ್ತೇನು?ತಮ್ಮ ಕ್ಷೇತ್ರದಲ್ಲಿ ಬಏರೆ ಪಕ್ಷದವರು ಬಂದು ತಮ್ಮ ವಿರುದ್ಧ ಯಾಗವುದೇ ಆರೋಪ ಮಾಡಬಾರದು. ಮಾಡಿದವರ ವಿರುದ್ಧ ಕೇಸ್ ಎಂದು ಬೆದರಿಕೆ ಹಾಕಲಾಗುತ್ತಿದೆ ಎಂದೂ ಶ್ರೀರಾಮುಲು ಹೇಳಿದರು.



ಬೀದರ್ ಮತ್ತು ಶಿವಮೊಗ್ಗದಲ್ಲಿ ನಡೆದ ಸಿಇಟಿ (ಸಾಮಾನ್ಯ ಪ್ರವೇಶ ಪರೀಕ್ಷೆ) ಸಂದರ್ಭದಲ್ಲಿ ಬ್ರಾಹ್ಮಣ ವಿದ್ಯಾರ್ಥಿಗಳ ಜನಿವಾರವನ್ನು ಬಲವಂತವಾಗಿ ಹೊರತೆಗೆಸಿದ ಆರೋಪವನ್ನು ಖಂಡಿಸಿ, ಬ್ರಾಹ್ಮಣ ಸಮುದಾಯದ ಸದಸ್ಯರು ಶನಿವಾರ ಮೈಸೂರಿನಲ್ಲಿ ಪ್ರತಿಭಟನೆ ನಡೆಸಿದರು.

## ದತ್ತ ಕ್ಷೇತ್ರ ದೇವಲಗಾಣಗಾಪುರ, ಕಾಶಿ ಕಾರಿಡಾರ್ ಮಾದರಿ ಅಭಿವೃದ್ಧಿಗೆ ಅಗ್ರಹಿಸಿ ಅನಿರ್ದಿಷ್ಟ ಧರಣಿ



ಕಲಬುರಗಿ ಜಿಲ್ಲೆಯ ಶ್ರೀ ದತ್ತ ಕ್ಷೇತ್ರ ದೇವಲಗಾಣಗಾಪುರ ಕಾಸಿ ಕಾರಿಡಾರ್ ಮಾದರಿ ಅಭಿವೃದ್ಧಿಪಡಿಸಬೇಕೆಂದು ಅಗ್ರಹಿಸಿ ಅನಿರ್ದಿಷ್ಟ ಧರಣಿ ಸತ್ಯಾಗ್ರಹದ ಮೊದಲ ದಿನ ಶಿವಕುಮಾರ ನಾಟಿಕಾರ ಹಾಗೂ ಇತರ ಮಠಾಧಿಪತಿಗಳು ಪಾಲ್ಗೊಂಡಿದ್ದರು.

**ಕಲಬುರಗಿ, ಏ.19–** ಜಿಲ್ಲೆಯ ಪ್ರಸಿದ್ಧ ಯಾತ್ರ ಸ್ಥಳ ಶ್ರೀ ದತ್ತ ಕ್ಷೇತ್ರ ದೇವಲಗಾಣಗಾಪುರವನ್ನು ಕಾಶಿ ಕಾರಿಡಾರ್ ಮಾದರಿಯಲ್ಲಿ ಅಭಿವೃದ್ಧಿಪಡಿಸಬೇಕು. ಮುಖ್ಯಮಂತ್ರಿ ಗಳು, ಉಪಮುಖ್ಯಮಂತ್ರಿಗಳು ಭರವಸೆ ನೀಡಿದ್ದರೂ ಇಲ್ಲಿಯವರೆಗೆ ಯಾಕೆ ಅಭಿವೃದ್ಧಿ ಮಾಡಿಲ್ಲ. ಕೂಡಲೇ ಅನುದಾನ ಬಿಡುಗಡೆ ಮಾಡಿ ಅಭಿವೃದ್ಧಿ ಮಾಡಿದ್ದರೆ ಇಲ್ಲಿಯವರೆಗೆ ಇತಿಹಾಸದ ಪುಟ ಸೇರುತಿತ್ತು. ಇದು ನಮ್ಮ ದುರ್ದೈವ ಎಂದು ಜೆಡಿಎಸ್ ಪಕ್ಷದ ರಾಜ್ಯ ಪ್ರಧಾನ ಕಾರ್ಯದರ್ಶಿ ಶಿವುಕುಮಾರ ನಾಟಿಕಾರ ಹೇಳಿದರು.

ದತ್ತನ ಸನ್ನಿದಿಯಲ್ಲಿ ಅನಿರ್ಧಿಷ್ಟಾವಧಿ ಧರಣಿ ಸತ್ಯಾಗ್ರಹ ಉದ್ದೇಶಿಸಿ ಮಾತನಾಡಿದ ಅವರು ಸರಕಾರಗಳು ಬದಲಾಗುತ್ತಾ ಹೋದರು ಗಾಣಗಾಪುರ ವನ್ನು ಯಾವುದೇ ಸರ್ಕಾರಗಳು ಅಭಿವೃದ್ಧಿ ಮಾಡಿಲ್ಲ, ಹಾಗಂತ ಹಣದ ಕೊರತೆಯೂ ಇಲ್ಲ, ಹಣ ಬಿಡುಗಡೆಯಾಗುತ್ತಲೇ ಇದೆ ಆದರೆ ಅಭಿವೃದ್ಧಿ ಮಾತ್ರ ಮರೀಚಿಕೆಯಾಗಿದೆ, ಕಾಶಿ ಕ್ಷೇತ್ರ ಕ್ಕೆ ಭೇಟಿ ನೀಡಿದಾಗ ಅಲ್ಲಿರುವ ಅಭಿವೃದ್ಧಿ ದತ್ತನ ಸನ್ನಿದಾನಕ್ಕೆ ಯಾಕೆ ಮಾಡುತ್ತಿಲ್ಲ ಎಂದು ಬೇಸರ ವ್ಯಕ್ತಪಡಿಸಿದರು.

ಈ ಕ್ಷೇತ್ರಕ್ಕೆ ಹಲವು ಬಾರಿ ದೇಶದ ಅನೇಕ ರಾಜಕೀಯ ಗಣ್ಯರು ಕೇಂದ್ರ ಮಂತ್ರಿಗಳು, ಮುಖ್ಯ ಮಂತ್ರಿಗಳು, ಉಪಮುಖ್ಯಮಂತ್ರಿಗಳು, ಸಚಿವರು ಶಾಸಕರು ಭೇಟಿ ನೀಡಿ ದತ್ತ ಮಹಾರಾಜರ ದರ್ಶನ ಮಾಡುತ್ತಾರೆ. ಆದರೆ ಅಭಿವೃದ್ಧಿ ಕಡೆಗೆ ಗಮನ ಹರಿಸೋದೆ ಇಲ್ಲ, ಕೋಟಿ ಕೋಟಿ ಅನುದಾನ ಬಿಡುಗಡೆ ಯಾದರು ಅದು ಎಲ್ಲಿ ಬಳಕೆಯಾಗುತ್ತಿದೆ ಯಾರಿಗೂ ಗೊತ್ತಿಲ್ಲ. ಮಹಾರಾಷ್ಟ್ರ, ತೆಲಂಗಾಣ, ಕೇರಳ, ತಮಿಳುನಾಡು ರಾಜ್ಯಗಳಿಂದ ಅಪಾರ ಭಕ್ತರು ದತ್ತನ ದರ್ಶನಕ್ಕೆ ಬರುವರು, ಪ್ರತಿಬಾರಿ ಹುಂಡಿ ಎಣಿಕೆ ಮಾಡಿದಾಗ ಲಕ್ಷ, ಕೋಟಿ ಗಟ್ಟಲೆ ಹಣ ಸಂಗ್ರಹಣೆ ಯಾಗುತ್ತದೆ ಆದರೆ ಆ ಹಣ ಕೂಡ ದೇವಸ್ಥಾನದ ಅಭಿವೃದ್ಧಿಗೆ ಬಳಕೆಯಾಗುತ್ತಿಲ್ಲ. ಸರಕಾರ ಇತ್ತ ಕಡೆ ಗಮನ ಹರಿಸಿ ಗಾಣಗಾಪುರ ಕ್ಷೇತ್ರವನ್ನು ಅಭಿವೃದ್ಧಿ ಮಾಡುವರೆಗೂ ನಾನು ಹೋರಾಟವನ್ನು ನಿರಂತರ ಮಾಡುತ್ತಲೇ ಇರುತ್ತೇನೆ ಎಂದರು.

ಮೊದಲ ದಿನದ ಧರಣಿ ಸತ್ಯಾಗ್ರಹಕ್ಕೆ ಗ್ರಾಮಸ್ಥರು ಸೇರಿದಂತೆ, ಅನೇಕ ಮಠದ ಮಹಾಸ್ವಾಮಿಜೀಗಳು, ಸುತ್ತಮುತ್ತಲಿನ ಗ್ರಾಮದ ದತ್ತ ಭಕ್ತರಿಂದ ವ್ಯಾಪಕ ಬೆಂಬಲ ವ್ಯಕ್ತವಾಗಿದೆ.

## ಸಚಿವರ ಮೂಗಿನ ನೇರದಲ್ಲೇ ನಿತ್ಯ 500 ಲಾರಿ ಅಕ್ರಮ ಮರಳು ಮಹಾರಾಷ್ಟ್ರಕ್ಕೆ ಸಾಗಣೆ: ರವಿಕುಮಾರ್ ಆರೋಪ

**ಕಲಬುರಗಿ, ಏ. 19:** ಕಾಂಗ್ರೆಸ್ ಅಧಿಕಾರಕ್ಕೆ ಬಂದ ನಂತಗರ ಜಿಲ್ಲೆಯ ಯಾವುದೇ ನದಿಗಳಲ್ಲಿ ಒಂದು ಹಿಡಿ ಮರಳು ಉಳಿದಿಲ್ಲ. ನಿತ್ಯ 500ಕ್ಕೂ ಹೆಚ್ಚು ಲಾರಿಗಳಷ್ಟು ಮರಳು ಮಹಾರಾಷ್ಟ್ರಕ್ಕೆ ಸಾಗಣೆಯಾಗುತ್ತಿದೆ. ಇದೆಲ್ಲವೂ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಅವರ ಮೂಗಿನ ನೇರದಲ್ಲೇ ನಡೆಯುತ್ತಿದ್ದರೂ, ಇದನ್ನು ತಡೆಯದೇ ಹಿಂಬಾಗಿಲಿನಿಂದ ಆದಾಯ ಪಡೆಯುತ್ತಿದ್ದಾರೆ ಎಂದು ವಿಧಾನ ಪರಿಷತ್ ಸದಸ್ಯ ಎನ್.ರವಿಕುಮಾರ್ ಅವರು ಆರೋಪಿಸಿದರು.

ನಗರದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಕಾಂಗ್ರೆಸ್ಸಿನವರಿಗೆ ಮಾಡಲು ಕೆಲಸವಿಲ್ಲ. ಕೆಲಸ ಮಡಲು ಹಣವಿಲ್ಲ. ಸರ್ಕಾರದ ಬೊಕ್ಕಸದ ಹಣವೆಲ್ಲ ಗ್ಯಾರಂಟಿಗಳಿಗಾಗಿ ಹೋಗುತ್ತಿದೆ. ಸಾವಿರ ಸಾವಿರ ಕೋಟಿ ರೂಗಳ ಅಡಿಗಲ್ಲುಗಳನ್ನು ಹಾಕುವುದು ಕೇವಲ ತೋರಿಕೆಗಾಗಿ ಮಾತ್ರ. ಅವುಗಳಿಗೆ ಒಂದು ಪೈಸೆ ಅನುದಾನವೂ ಬಿಡುಗಡೆಯಗುವದಿಲ್ಲ. ಹೀಗಾಗಿ ಸಚಿವ –ಶಾಸಕರುಗಲು ಅಡ್ಡದಾರಿ ಹಿಡಿದು ನದಿಗಳ ಒಡಲನ್ನು ಬಗೆದು ಅಕ್ರಮ ಮರಳು ಸಆಗಣೆಯ ಮೂಲಕ ಹಣ ಮಾಡುವ ದಾರಿ ಕಂಡುಕೊಂಡಿದ್ದಾರೆ ಎಂದು ಆರೋಪಿಸಿದರು.

ಕಲಬುರಗಿ ಜಿಲ್ಲೆಯಲ್ಲಿ ಯಾರೂ ಬರಬಾರದು, ಇವರ ಅಕ್ರಮಗಳನ್ನು ಯಾರೂ ನೋಡಬಾರದು ಎಂದು ಗೂಂಡಾಗಳನ್ನು ಬಿಟ್ಟು ಬೆದರಿಸುವ ಕೆಲಸ ನಡೆಯುತ್ತಿದೆ. ನಿನ್ನೆ ವಿಜಯೇಂದ್ರ ಅವರೊಂದಿಗೆ ನಾವೆಲ್ಲ ಭಾಗೋಡಿ ಗ್ರಾಮದ ಬಳಿ ಕಾಗಿಣಾ ನದಿಯಿಂದ ಅಕ್ರಮ ಮರಳು ಸಾಗಣೆ ನೋಡಲು ಹೋದಾಗ, ಅಲ್ಲಿ ನಮಗಿಂತ ಮೊದಲೇ ಬಂದು ನಿಂತಿದ್ದ ಪ್ರಿಯಾಂಕ್ ಖಗೇ ಬೆಂಬಲಿಗರಾದ ಕಾಂಗ್ರೆಸ್ ಗೂಂಡಾಗಳು ನಮ್ಮ ವಿರುದ್ಧ ಘೋಷಣೆಗಳನ್ನು ಗೋ ಬ್ಯಾಕ್ ಎಂದು ಕೂಗುತ್ತಿದ್ದರು. ಇವರ ಅಕ್ರಮಗಳನ್ನು ಯಾರೂ ನೋಡಬಾರದು ಎಂಬ ಉದ್ದೇಶ ಇವರದು. ಆದ್ದರಿಂದ ಗೂಂಡಾಗಳನ್ನು ಬಿಟ್ಟು ಬೆದರಿಸುವ ಕೆಲಸ ಮಾಡುತ್ತಿದ್ದಾರೆ ಎಂದು ಆರೋಪಿಸಿದರು.



ಕಲಬುರಗಿಯಲ್ಲಿ ವಿಧಾನ ಪರಿಷತ್ ಸದಸ್ಯ ಎನ್.ರವಿಕುಮಾರ್ ಮಾಧ್ಯಮಗಳೊಂದಿಗೆ ಮಾತನಾಡಿದರು.

ತಮಗೆ ಸಂಬಂಧವಿರಲಿ, ಇಲ್ಲದಿರಲಿ ಎಲ್ಲದರಲ್ಲೂ ಮೂಗು ತೂರಿಸಿ ಮತನಾಡುವ ಟ್ರೋಲ್ ಮಿನಿಸ್ಟರ್ ಪ್ರಿಯಾಂಕ ಖರ್ಗೆ, ಕಲಬುರಗಿಯಲ್ಲಿ ನಡೆಯುತ್ತಿರುವ ಅಕ್ರಮಗಳ ಬಗ್ಗೆ ಮಾತ್ರ ಮಾತನಾಡುವದಿಲ್ಲ. ಮಾತೆತ್ತಿದರೆ ನಿಮ್ಮ ಕಾಲಕ್ಕೆ ಆಗಿಲ್ಲವೇ ಎಂದು ಪ್ರಶ್ನಿಸುವ ಮೂಲಕ ತಾವೂ ಅಕ್ರಮಗಳನ್ನು ಮಾಡುವ ಬಗ್ಗೆ ಪರೋಕ್ಷವಾಗಿ ಒಪ್ಪಿಕೊಂಡು ನಗೆಗೀಡಾಗು ತ್ತಿದ್ದಾರೆ ಎಂದರು

ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಸಂಪೂರ್ಣ ಕುಸಿದು ಬಿದ್ದಿದೆ. ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ನಂತರ ಲವ್ ಜಿಹಾದ್ ಹೆಚ್ಚಾಗಿದೆ. ಅಂಥವರ ರಕ್ಷಣೆಗೆ ಈ ಸರ್ಕಾರ ಟೊಂಕಕಟ್ಟಿ ನಿಂತಿದೆ. ಹುಬ್ಬಳ್ಳಿಯಲ್ಲಿ ನೇಹಾ ಹತ್ಯೆ ನಡೆದು ಒಂದು ವರ್ಷವಾಯಿತು. ನೇಹಾ ತಂದೆ ನಿರಂಜನ ಹಿರೇಮಠ ಕಾಂಗ್ರೆಸ್ ಕಾರ್ಪೋರೇಟರ್ ಆಗಿದ್ದು, ಕೊಲೆ ಮಾಡಿದವ ಮುಸ್ಲಿಮ್ ಎಂಬ ಕಾರಣಕ್ಕೆ ಇದುವರೆಗೂ ತನಿಖೆ ನಡೆಸದೇ ಕೇಸ್ ಮುಚ್ಚಿಹಾಕುವ ಪ್ರಯತ್ನ ನಡೆಯುತ್ತಿದೆ ಎಂದ ಅವರು, ಕಲಬುರಗಿಯಲ್ಲೂ ಕೂಡ ಕೊಲೆ, ಸುಲಿಗೆ ಪ್ರಕರಣಗಳು ಮಿತಿಮೀರಿವೆ. ಇವರೆಲ್ಲರಿಗೂ ಸಚಿವ ಪ್ರಿಯಾಂಕ್ ಖರ್ಗೆ ಅವರ ರಕ್ಷಣೆ ಇರುವುದರಿಂದ ಜನರು ಭಯದಿಂದ ಜೀವಿಸುವಂತಾಗಿದೆ ಎಂದು ಆರೋಪಿಸಿದರು.

## ಬಿಎಸ್‌ಎನ್‌ಎಲ್: ಮೂರು ದಿನಗಳ ಕಾಲ ಗ್ರಾಹಕರ ಸೇವಾ ಶಿಬಿರ– ಡಿ.ಶ್ರೀಧರ್




**ಬಳ್ಳಾರಿ, ಏ.19–** ಭಾರತ್ ಸಂಚಾರ್ ನಿಗಮ್ ಲಿಮಿಟೆಡ್ ಬಳ್ಳಾರಿಯ ಪ್ರಧಾನ ವ್ಯವಸ್ಥಾಪಕರ ಕಚೇರಿ ವತಿಯಿಂದ ಗ್ರಾಹಕರ ವಿವಿಧ ಟೆಲಿಕಾಂ ಗ್ರಾಹಕ ಸೇವಾ ಸಮಸ್ಯೆಗಳನ್ನು ಬಗೆಹರಿಸಲು ಏ.21, ಏ.24 ಮತ್ತು ಏ.29 ರಂದು ಬೆಳಿಗ್ಗೆ 10 ಗಂಟೆಯಿಂದ ಸಂಜೆ 05 ಗಂಟೆಯವರೆಗೆ ಬಳ್ಳಾರಿ ಕಚೇರಿ ಮತ್ತು ಹೊಸಪೇಟೆಯ ಕೆಕೆಆರ್‌ಟಿಸಿ ಬಸ್ ನಿಲ್ದಾಣ ಎದುರುಗಡೆಯ ಕಚೇರಿಯಲ್ಲಿ 'ಗ್ರಾಹಕರ ಸೇವಾ ಶಿಬಿರ'ಗಳನ್ನು ಆಯೋಜಿಸಲಾಗುತ್ತಿದೆ. ಭಾರತ್ ಸಂಚಾರ್ ನಿಗಮ್ ಲಿಮಿಟೆಡ್ ವು ಸಾರ್ವಜನಿಕರ ದೂರಸಂಪರ್ಕ ಸೇವಾ ಪೂರೈಕೆದಾರರಿ ಗಾಗಿ ಏಪ್ರಿಲ್ ಮಾಹೆಯನ್ನು 'ಕನ್ನೆಕ್ಟಿಂಗ್ ವಿಥ್ ಕೇರ್' ಎಂಬ ಥೀಮ್ ನೊಂದಿಗೆ ಗ್ರಾಹಕ ಸೇವಾ ಮಾಸವನ್ನಾಗಿ ಆಚರಿಸುತ್ತಿದೆ. ಗ್ರಾಹಕರು ತಮ್ಮ ಸೇವೆಗಳಲ್ಲಿ ಶ್ರೇಷ್ಠತೆ ತರಲು ಬಿಎಸ್‌ಎನ್‌ಎಲ್ ಕ್ಯಾಂಪ್ ಕಚೇರಿ ಮತ್ತು ಡಿಜಿಟಲ್ ದೂರು–ಟ್ರಾಕಿಂಗ್ ಪೋರ್ಟಲ್ http://cfp.bsnl.co.in ಮೂಲಕ ತಮ್ಮ ಪ್ರತಿಕ್ರಿಯೆ ನೀಡಬಹುದು. ಗ್ರಾಹಕರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಭಾರತ್ ಸಂಚಾರ್ ನಿಗಮ್ ಲಿಮಿಟೆಡ್ ಬಳ್ಳಾರಿಯ ಉಪಪ್ರಧಾನ ವ್ಯವಸ್ಥಾಪಕ ಡಿ.ಶ್ರೀಧರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬಿಜೆಪಿ ಜನಾಕ್ರೋಶದ ಬೆನ್ನಲ್ಲೇ ಮರಳು ದಾಸ್ತಾನು ಅಡ್ಡೆಗೆ ಬೀಗ

**ಕಲಬುರಗಿ, ಏ. 19:** ಅಕ್ರಮ ಮರಳು ಸಾಗಣೆಯ ಭಾಗೋಡಿಗೆ ಬಿಜೆಪಿ ಜನಾಕ್ರೋಶ ರ್ಯಾಲಿಯೊಂದಿಗೆ ಬಿಜೆಪಿ ರಾಜ್ಯಧ್ಯಕ್ಷ ವಿಜಯೇಂದ್ರ ಭೇಟಿಯ ಬೆನ್ನಲ್ಲೇ ಜಿಲ್ಲೆಯ ಚಿತ್ತಾಪುರ ತಾಲ್ಲೂಕಿನ ಕಾಗಿಣಾ ನದಿ ತೀರದ ಭಾಗೋಡಿ ಗ್ರಾಮದ ಬಳಿ ಇರುವ ಕೆಆರ್‌ಡಿಎಲ್ ಸ್ಥಾಪಿಸಿದ ಮರಳು ದಾಸ್ತಾನು ಅಡ್ಡೆಯ ದ್ವಾರ ಮುಚ್ಚಿ ಬೀಗ ಹಾಕಿರುವುದು ಕಂಡುಬಂದಿದೆ.



ದಾಸ್ತಾನಿನ ಸಂಗ್ರಹಿತ ಮರಳಿನ ಮೇಲೆ ಮಣ್ಣು ಸುರಿದು ಮರಳು ಮುಚ್ಚುವ ಕೆಲಸ ಇಂದು ಕಂಡು ಬಂದಿತು. ಮರಳು ದಾಸ್ತಾನು ಅಡ್ಡೆಯಲ್ಲಿ ಸಂಗ್ರಹಿಸಿರುವ ಅಂದಾಜು ಸಾವಿರಕ್ಕೂ ಹೆಚ್ಚು ಟಿಪ್ಪರ್‌ನಷ್ಟು ಮರಳಿನ ಮೇಲೆ ಮಣ್ಣು ಸುರಿದು ಮುಚ್ಚಲಾಗುತ್ತಿದೆ. ಅಧಿಕಾರಿಗಳೇ ಮರಳಿನ ಮೇಲೆ ಮಣ್ಣಿನಿಂದ ಮುಚ್ಚುವ ತಂತ್ರ ಅನುಸರಿಸುತ್ತಿರುವುದು ಏಕೆ ಎಂಬ ಪ್ರಶ್ನೆಯು ಸಾರ್ವಜನಿಕ ವಲಯದಲ್ಲಿ ಹುಟ್ಟಿಕೊಂಡಿದೆ.

ಮರಳು ಸಾಗಿಸಲೆಂದು ನಿಲ್ಲಿಸುತ್ತಿದ್ದ ಟಿಪ್ಪರ್ ಕಳೆದ ರಾತ್ರಿಯೇ ಜಾಗ ಖಾಲಿ ಮಾಡಿವೆ. ನದಿಯಲ್ಲಿ ಮರಳು ಅಗೆದು ತೆಗೆಯುತ್ತಿದ್ದ ಬೃಹತ್ ಗಾತ್ರದ ಹಲವು ಹಿಟಾಚಿ ಯಂತ್ರ, ಜೆಸಿಬಿ ಯಂತ್ರ ನದಿಯಿಂದ ತೆರವು ಮಾಡಲಾಗಿದೆ. ಕೆಲವು ಯಂತ್ರ ಅಲ್ಲಲ್ಲಿ ನಿಲ್ಲಿಸಲಾಗಿದೆ.

ನದಿಯ ಪಾತ್ರದಲ್ಲಿನ ಮರಳು ಗಣಿಗಾರಿಕೆ ಸ್ತಬ್ಧಗೊಂಡಿದೆ. ಕೆಲವು ಖಾಸಗಿ ಪಟ್ಟಾ ಜಮೀನುಗಳಲ್ಲಿ ನಡೆಯುತ್ತಿದ್ದ ಮರಳು ಗಣಿಗಾರಿಕೆ ಯನ್ನೂ ಬಂದ್ ಮಾಡಲಾಗಿದೆ. ಮರಳು ತೆಗೆದ ಬೃಹತ್ ಗುಂಡಿ ಮುಚ್ಚಲು ಮಣ್ಣು ಸುರಿಯುವ ಕೆಲಸ ಶುರುವಾಗಿದೆ. ಹಗಲು ರಾತ್ರಿ ಮರಳು ತುಂಬಿಕೊಂಡು ಓಡಾಡುತ್ತಿದ್ದ ಟಿಪ್ಪರ್ ಸಂಚಾರ ಸ್ತಬ್ಧಗೊಂಡಿದೆ. ಇಲಾಖೆಗೆ ಅಧಿಕೃತ ಮರಳು ಗುತ್ತಿಗೆಯ ಪರವಾನಗಿ ನೀಡಿದ್ದರೆ ಮರಳು ಗಣಿಗಾರಿಕೆ ಬಂದ್ ಮಾಡಿ, ದಾಸ್ತಾನು ಅಡ್ಡೆಯ ಬಾಗಿಲಿಗೆ ಬೀಗ ಹಾಕಿದ್ದು ಏಕೆ? ಮರಳು ಗಣಿಗಾರಿಕೆಗೆ ಪರವಾನಗಿ ನೀಡಿದ್ದ ಖಾಸಗಿ ಪಟ್ಟಾ ಜಮೀನುಗಳಲ್ಲಿ ನಡೆಯುತ್ತಿದ್ದ ಮರಳು ಗಣಿಗಾರಿಕೆ ಬಂದ್ ಮಾಡಿಸಿದ್ದು ಏಕೆ? ಎಂದು ಸ್ಥಳೀಯರು ಪ್ರಶ್ನಿಸುತ್ತಿದ್ದಾರೆ.

### ಜಿಲ್ಲಾ ಆಸ್ಪತ್ರೆಯಲ್ಲಿ ಅಗ್ನಿ ಶಾಮಕ ದಳದಿಂದ ಅಣಕು ಪ್ರದರ್ಶನ

## ಅಗ್ನಿ ಅವಘಡ ತಡೆ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಅಗತ್ಯ: ಕೆ.ತಿಮ್ಮಾರೆಡ್ಡಿ




**ಬಳ್ಳಾರಿ, ಏ.19–**ನಗರದ ಜಿಲ್ಲಾ ಆಸ್ಪತ್ರೆಯ ಆವರಣದಲ್ಲಿ ಜಿಲ್ಲಾ ಅಗ್ನಿಶಾಮಕ ಮತ್ತು ತುರ್ತು ಸೇವೆಗಳ ಇಲಾಖೆ ವತಿಯಿಂದ ಶನಿವಾರ ಅಗ್ನಿ ಅವಘಡ ತಡೆಗಟ್ಟುವಿಕೆಯಲ್ಲಿ ಅನುಸರಿಸಬೇಕಾದ ಮುನ್ನೆಚ್ಚರಿಕೆ ಕ್ರಮಗಳು ಹಾಗೂ ಜಾಗೃತಿ ಮೂಡಿಸುವ ಕುರಿತು ಅಣಕು ಪ್ರದರ್ಶನ ನಡೆಯಿತು.

ಅಗ್ನಿಶಾಮಕ ಮತ್ತು ತುರ್ತು ಸೇವೆಗಳ ಇಲಾಖೆಯ ಪ್ರಾದೇಶಿಕ ಅಗ್ನಿಶಾಮಕ ಅಧಿಕಾರಿ ಕೆ.ತಿಮ್ಮಾರೆಡ್ಡಿ ಅವರು ಮಾತನಾಡಿ, ಸಾರ್ವಜನಿಕರು ತಮ್ಮ ಸುತ್ತ–ಮುತ್ತ ಆಕಸ್ಮಿಕ ಅಗ್ನಿ ಅವಘಡ ಸಂಭವಿಸಿದಲ್ಲಿ ಅದರ ತಡೆಗಟ್ಟುವಿಕೆ ಕುರಿತು ಅರಿವು ಹೊಂದಬೇಕು ಎಂದು ಹೇಳಿದರು.

ಆಸ್ಪತ್ರೆಗಳು ಅತ್ಯಂತ ಸೂಕ್ಷ್ಮ ಸ್ಥಳಗಳು. ಆರೋಗ್ಯ ಸಿಬ್ಬಂದಿಗಳು ಜಾಗರೂಕತೆ ಹೊಂದಿರಬೇಕು. ಬೆಂಕಿ ನಂದಿಸುವ ಸಾಧನಗಳು ಸುವ್ಯವಸ್ಥೆಯಲ್ಲಿ ಇಟ್ಟುಕೊಳ್ಳಬೇಕು. ಅಗ್ನಿಶಾಮಕ ದಳದವರು 24 ಗಂಟೆಯೂ ಸೇವೆ ನೀಡುತ್ತಾರೆ. ಅಗ್ನಿ ದುರಂತ, ತುರ್ತು ಸೇವೆಗಳಿಗಾಗಿ ಸದಾ ಸನ್ನದ್ಧರಾಗಿರುತ್ತಾರೆ ಎಂದು ತಿಳಿಸಿದರು. ಇದೇ ವೇಳೆ ಬೆಂಕಿ ನಂದಿಸುವ ಕಾರ್ಯಾಚರಣೆ ಕುರಿತು ಮಾಹಿತಿ ನೀಡಿದರು. ಜಿಲ್ಲಾ ಅಗ್ನಿಶಾಮಕ ಅಧಿಕಾರಿ ಹನುಮನಗೌಡ ಪೊಲೀಸ್ ಪಾಟೀಲ್ ಅವರು ಮಾತನಾಡಿ, ಪ್ರತಿ ವರ್ಷ ಏಪ್ರಿಲ್ 14 ರಿಂದ 20 ರ ವರೆಗೆ ದೇಶದಾದ್ಯಂತ ಅಗ್ನಿಶಾಮಕ ಸೇವಾ ಸಪ್ತಾಹವನ್ನು ಆಚರಿಸಿ ಸಾರ್ವಜನಿಕರಿಗೆ ಅಗ್ನಿ ಸುರಕ್ಷತೆ ಕುರಿತು ತಿಳಿವಳಿಕೆ ನೀಡಿ ಅಣಕು ಪ್ರದರ್ಶನ ನಡೆಸಲಾ ಗುತ್ತದೆ ಎಂದು ಹೇಳಿದರು.

## ಜೆ.ಇ.ಇ ಮೇನ್ಸ್ (ಸೆಷನ್–2) ಪರೀಕ್ಷೆ–2025 ಬೆಸ್ಟ್ ವಿದ್ಯಾರ್ಥಿಗಳ ಅಮೋಘ ಸಾಧನೆ




**ಬಳ್ಳಾರಿ, ಏ.19–** ಎನ್.ಟಿ.ಎ ಆಯೋಜಿಸಿದ ರಾಷ್ಟ್ರ ಮಟ್ಟದ ಜೆ.ಇ.ಇ ಮೇನ್ಸ್ (ಸೆಷನ್–2) ಪರೀಕ್ಷೆಯಲ್ಲಿ ಬಳ್ಳಾರಿ ನಗರದ ಪ್ರತಿಷ್ಠಿತ ಶಿಕ್ಷಣ ಸಂಸ್ಥೆಯಾದ ಬೆಸ್ಟ್ ಕಾಲೇಜಿನ ವಿದ್ಯಾರ್ಥಿ ಗಳಾದ ಸೈಯದ್ ಎಂ.ಅಶ್ಫಕ್ 98.22%, ಪವನ್ ಕುಮಾರ್ 97.52%, ಮಾಹಿರ್ 95.90%, ಲಿಖಿತಾ ಬಿ 95.58%, ಜೈಕಿಶನ್ ಪಾಟಿಲ್ 94.60%, ಅಫಿಫಾ ಅಂಜುಮ್ 92.57%, ಸಾಯಿ ಹರ್ಷಿತಾ 89.08%, ಶ್ರೀನಿವಾಸ್ ನಾಯಕ್–89.01% ಈ ವಿದ್ಯಾರ್ಥಿಗಳು ಸಂಸ್ಥೆಗೆ ಕೀರ್ತಿ ತಂದಿದ್ದಾರೆ. ಈ ವಿದ್ಯಾರ್ಥಿಗಳನ್ನು ಬೆಸ್ಟ್ ಸಂಸ್ಥೆಯ ಅದ್ಯಕ್ಷರಾದ ಕೊನಂಕಿ ರಾಮಪ್ಪನವರು, ಉಪಾದ್ಯಕ್ಷರಾದ ಕೊನಂಕಿ ತಿಲಕ್‌ಕುಮಾರ್‌ರವರು, ಕಾರ್ಯದರ್ಶಿಗಳಾದ ಮನ್ನೆ ಶ್ರೀನಿವಾಸುಲು, ಕಾಲೇಜಿನ ಪ್ರಾಂಶುಪಾಲರಾದ ಕೆ.ವೆಂಕಟೇಶ್ವರರಾವ್, ಉಪಪ್ರಾಂಶುಪಾಲರಾದ ಜಿ.ಶ್ರೀನಿವಾಸರೆಡ್ಡಿ ಮತ್ತು ಎಲ್ಲಾ ಸಿಬ್ಬಂದಿ ವರ್ಗದವರು ಅಭಿನಂದಿಸಿದ್ದಾರೆ.

## ಪತ್ರಕರ್ತನ ಮೇಲೆ ಹಲ್ಲೆ: ಅರಣ್ಯಾಧಿಕಾರಿ ಸೇರಿ ನಾಲ್ವರ ಬಂಧನಕ್ಕೆ ಆಗ್ರಹಿಸಿ ಧರಣಿ

**ಬೀದರ್, ಏ.19–** ಬೀದರ್ ಪತ್ರಕರ್ತ ರವಿ ಬೋಸುಂಡೆ ಅವರ ಮೇಲೆ ಹಲ್ಲೆ ನಡೆಸಿರುವ ಅರಣ್ಯ ಇಲಾಖೆಯ ಅಧಿಕಾರಿ ಸೇರಿದಂತೆ ನಾಲ್ವರನ್ನು ಬಂಧಿಸಿ, ಅವರನ್ನು ಕೆಲಸದಿಂದ ವಜಾಗೊಳಿಸಬೇಕೆಂದು ಆಗ್ರಹಿಸಿ ಸೋಶಿಯಲ್ ಮೀಡಿಯಾ ಹಾಗೂ ಕರ್ನಾಟಕ ಕಾರ್ಯನಿರತ ಪತ್ರ ಕರ್ತರ ಸಂಘದ ಕಾರ್ಯಕರ್ತರು ಕಲಬುರ್ಗಿ ಹಾಗೂ ಬೀದರ್ ಜಿಲ್ಲೆ ಗಳಲ್ಲಿ ಪ್ರತಿಭಟನೆ ಮಾಡಿದರು.

ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾಧ್ಯಕ್ಷ ಡಿ.ಕೆ. ಗಣಪತಿ, ಪ್ರಧಾನ ಕಾರ್ಯದರ್ಶಿ ಶಿವಕುಮಾರ ಸ್ವಾಮಿ, ಪತ್ರಕರ್ತರಾದ ಬಾಬುವಾಲಿ, ಆನಂದ್ ದೇವಪ್ಪ, ಸಿದ್ರಾಮಯ್ಯ ಸ್ವಾಮಿ, ಅಪ್ಪಾರಾವ್ ಸೌದಿ, ಶಶಿ, ವಿಜಯಕುಮಾರ್ ಬೆಲ್ದೆ, ಚಿತ್ರಸೇನ್, ಪೃಥ್ವಿರಾಜ್, ರವಿ ಸ್ವಾಮಿ, ವಿಜಯ ಕುಮಾರ್ ಸೋನಾರೆ, ಸುನೀಲ್ ಭಾವಿಕಟ್ಟಿ, ಎಂ.ಪಿ. ಮುದಾಳೆ, ನಾಗಶೆಟ್ಟಿ ಧರಂಪೂರ್, ಸಂತೋಷ ಕುಮಾರ್, ಜೈಕುಮಾರ್ ಮುಂತಾದ ವರು ಜಿಲ್ಲಾದಿಕಾರಿಗಳ ಕಚೇರಿ ಮುಂದೆ ಸಾಂಕೇತಿಕ ಧರಣಿ ಮಾಡಿ, ನಂತರ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಅವರ ಮೂಲಕ ಮುಖ್ಯ ಮಂತ್ರಿ ಸಿದ್ಧರಾಮಯ್ಯ ಅವರಿಗೆ ಮನವಿ ಪತ್ರ ಸಲ್ಲಿಸಿದರು.



ಬೀದರ್ ಪತ್ರಕರ್ತನ ಮೇಲೆ ಹಲ್ಲೆ ನಡೆಸಿದ ಅರಣ್ಯಧಿಕಾರಿಗಳನ್ನು ಸೇವೆಯಿಮದ ಅಮಾನತುಗೊಳಿಸಿ ಕ್ರಮ ಜರುಗಿಸುವಂತೆ ಒತ್ತಾಯಿಸಿ ಕಾರ್ಯನಿರತ ಪತ್ರಕರ್ತರ ಸಂಘ ಜಿಲ್ಲಾಧಿಕಾರಿಗಳ ಕಚೇರಿ ಮುಂದೆ ಪ್ರತಿಭಟನೆ ನಡೆಸಿದರು.

ಕಳೆದ 15ರಂದು ರಾತ್ರಿ 9ರ ಸುಮಾರಿಗೆ ರವಿ ಭೂಸಂಡೆ ಅವರು ಚಿದ್ರಿ ಮಾರ್ಗವಾಗಿ ಹೋಗುವಾಗ ಅರಣ್ಯ ಇಲಾಖೆಯ ಅಧಿಕಾರಿ, ಸಿಬ್ಬಂದಿಯೊಂದಿಗೆ ಸಾರ್ವಜನಿಕರ ವಾಗ್ವಾದ ನಡೆದಿತ್ತು. ಏನಾಗುತ್ತಿದೆ ಎಂದು ನೋಡಲು ಹೋಗಿದ್ದ ರವಿ ಅವರ ಮೇಲೆ ಅರಣ್ಯ ಇಲಾಖೆಯ ದಸ್ತಗೀರ್, ಶಾಂತ ಕುಮಾರ್, ಗಜಾ ನಂದ್ ಹಾಗೂ ಸಂಗಮೇಶ್ ಎಂಬುವರು ಹಲ್ಲೆ ನಡೆಸಿದ್ದಾರೆ. ಕೂಡಲೇ ಅವರ ವಿರುದ್ಧ ಕ್ರಮ ಜರುಗಿಸಬೇಕೆಂದು ಆಗ್ರಹಿಸಿದರು.

ಇದಕ್ಕೂ ಮುನ್ನ ನಗರದ ಪತ್ರಿಕಾ ಭವನದಲ್ಲಿ ಸಂಘದ ಪದಾಧಿಕಾರಿಗಳು ಸಭೆ ನಡೆಸಿ, ಖಂಡನಾ ನಿರ್ಣಯ ಕೈ ಗೊಂಡರು. ಪತ್ರಕರ್ತನ ಕೆಲಸಕ್ಕೆ ಅಡ್ಡಿಪಡಿಸಿ, ಹಲ್ಲೆ ನಡೆಸಿ, ಜಾತಿ ನಿಂದನೆ ಮಾಡಿರುವುದು ಅಕ್ಷಮ್ಯ ಅಪರಾಧ. ಇದು ಬಹಳ ಹೀನವಾದ ಕೃತ್ಯ. ಘಟನೆಗೆ ಕಾರಣರಾದವರನ್ನು ಶೀಘ್ರ ಬಂಧಿಸಬೇಕು. ಇಲ್ಲ ವಾದಲ್ಲಿ ಜಿಲ್ಲೆಯ ಪತ್ರಕರ್ತರಿಂದ ಪ್ರತಿಭಟನೆ ನಡೆಸಲಾಗುವುದು. ಈ ರೀತಿಯ ಘಟನೆಗಳು ಆಗದಂತೆ ಸರ್ಕಾರ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು. ಬಳಿಕ ಸಾಂಕೇತಿಕ ವಾಗಿ ಪ್ರತಿಭಟನೆ ಮಾಡಿದರು.

**ಕಲಬುರಗಿಯಲ್ಲಿಯೂ ಪ್ರತಿಭಟನೆ:** ಬೀದರ್‌ನಲ್ಲಿ ಪತ್ರಕರ್ತನ ಮೇಲೆ ಅರಣ್ಯ ಇಲಾಖೆಯ ಸಿಬ್ಬಂದಿಗಳು ಹಲ್ಲೆ ಮಾಡಿದ್ದನ್ನು ಖಂಡಿಸಿ ಕರ್ನಾಟಕ ಡಿಜಿಟಲ್ ಮೀಡಿಯಾ ವರ್ಕಿಂಗ್ ಜರ್ನಲಿಸ್ಟ್ ಅಸೋಸಿಯೇಷನ್ ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಅರಣ್ಯ ಇಲಾಖೆಯ ಮುಂದೆ ಪ್ರತಿಭಟನೆ ಮಾಡಿದರು.

ರಾಜ್ಯಾಧ್ಯಕ್ಷ ವಸೀಮ್ ಶೇಖ್ ಹಾಗೂ ಜಿಲ್ಲಾಧ್ಯಕ್ಷ ಬಸವರಾಜ್ ಬಿರಾದಾರ್ ಅವರು ಅರಣ್ಯ ಅಧಿಕಾರಿ ಸುನೀಲ್ ಪವಾರ್ ಅವರಿಗೆ ಮನವಿ ಪತ್ರ ಸಲ್ಲಿಸಿ, ಅಧಿಕಾರಿಗಳ ದುರ್ವರ್ತನೆ ಮತ್ತು ಮಾಧ್ಯಮದವರ ಮೇಲಿನ ದೌರ್ಜನ್ಯ ವಿರೋಧಿಸಿ ಘೋಷ ಣೆಗಳನ್ನು ಕೂಗಿದರು.

ಈ ಸಂದರ್ಭದಲ್ಲಿ ಮನವಿ ಪತ್ರ ಸ್ವೀಕರಿಸಿದ ಅರಣ್ಯ ಮುಖ್ಯ ಅಧಿಕಾರಿ ಸುನಿಲ್ ಪವಾರ್ ಅವರು ಮಾತನಾಡಿ, ಈ ಪ್ರಕರಣದ ಕುರಿತು ಒಂದು ದಿನದೊಳಗೆ ಸಮಗ್ರ ತನಿಖೆ ನಡೆಸಲಾಗುತ್ತದೆ ಹಾಗೂ ಆರೋಪಿಗೆ ಸೂಕ್ತ ಕ್ರಮ ಕೈಗೊಳ್ಳಲಾಗುತ್ತದೆ ಎಂದು ಭರವಸೆ ನೀಡಿದರು. ಪತ್ರಕರ್ತರಿಗೆ ನ್ಯಾಯ ಸಿಗದಿದ್ದರೆ ಕರ್ನಾಟಕ ಡಿಜಿಟಲ್ ಜರ್ನಲಿಸ್ಟ್ ಸಂಘಟನೆಯ ಪದಾಧಿಕಾರಿಗಳು ನ್ಯಾಯಕ್ಕಾಗಿ ಹೋರಾಟ ಮುಂದುವರಿ ಸಲು ಸಿದ್ಧವಿದ್ದಾರೆ ಎಂದು ಪ್ರತಿಭಟನೆ ಕಾರರು ಎಚ್ಚರಿಸಿದರು.


ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ
ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ
ಡಾ. ಶರಣಪ್ರಕಾಶ ಪಾಟೀಲ
ಅವರಿಗೆ
ಜನುಮದಿನದ
ಶುಭಾಶಯಗಳು
20
ಏಪ್ರಿಲ್
2025
ಶುಭಕೋರುವವರು
ಡಾ. ಶರಣಪ್ರಕಾಶ ಪಾಟೀಲ
ಅವರ ಅಭಿಮಾನಿಗಳು, ಹಿತೈಷಿಗಳು,
ಸೇಡಂ ವಿಧಾನಸಭಾ ಕ್ಷೇತ್ರದ
ಮತದಾರರು, ಕಲಬುರಗಿ
ರಾಯಚೂರು, ಕರ್ನಾಟಕ.